Volume : 9 | Issue : 168 | September : 20 : 2026 : Sunday
ಸಂಪುಟ : 9 | ಸಂಚಿಕೆ : 168 | ಸೆಪ್ಟೆಂಬರ್ : 20 : 2026 : ಭಾನುವಾರ

www.VIKRAMAVAHINI.com

ಸತ್ಯದ ಹಾದಿ । ಜನಪರ ದನಿ । ರಾಷ್ಟ್ರೀಯ ದೃಷ್ಟಿ

# ವಿಕ್ರಮ ವಾಹಿನಿ

ಪುಟ 4 | ₹2 | ಕನ್ನಡ ದಿನಪತ್ರಿಕೆ

VIKRAMA VAHINI
PRGI NO: KARKAN/2018/78481





ನಟಿ ದೀಪಿಕಾ ಪಡುಕೋಣೆ ಹಾಗೂ ರಣ್ವೀರ್ ಸಿಂಗ್ ದಂಪತಿಗೆ ಮತ್ತೊಂದು ಹೆಣ್ಣು ಮಗು ಜನಿಸಿದೆ. ದಂಪತಿ ಸಾಮಾಜಿಕ ಜಾಲತಾಣದಲ್ಲಿ ಸಂತಸ ಹಂಚಿಕೊಂಡಿದ್ದಾರೆ. 2024ರಲ್ಲಿ ಮೊದಲ ಮಗಳು ದುವಾ ಜನಿಸಿದ್ದು, ಇದೀಗ ಎರಡನೇ ಹೆಣ್ಣು ಮಗುವನ್ನು ಸ್ವಾಗತಿಸಿದ್ದಾರೆ. ಚಿತ್ರರಂಗದ ಗಣ್ಯರು ಹಾಗೂ ಅಭಿಮಾನಿಗಳು ದಂಪತಿಗೆ ಶುಭ ಹಾರೈಸಿದ್ದಾರೆ.

'ಯುಪಿಐ ಬೇಡ, ನಗದು ಕೊಡಿ': ಅಂಗಡಿಗಳ ಮುಂದೆ ಬೋರ್ಡ್ ಪುಟ 4

ಬರ ನಿರ್ವಹಣೆಯಲ್ಲಿ ರಾಜ್ಯ ಸರಕಾರ ವಿಫಲ: ಕೇಂದ್ರ ಸಚಿವ ಪುಟ 3

## ■ ಸುದ್ದಿ ಚುಟುಕು

### ರೆಜಿನಗರ್‌ನಲ್ಲಿ ಟಿಎಂಸಿ ಅಭ್ಯರ್ಥಿ ಯೂ-ಟರ್ನ್ ಹೊಡೆದಿದ್ದಾರೆ

● ವಿಕ್ರಮ ವಾಹಿನಿ । ಕೋಲ್ಕತ್ತ

ಪಶ್ಚಿಮ ಬಂಗಾಳದ ರೆಜಿನಗರ್ ವಿಧಾನಸಭಾ ಉಪಚುನಾವಣೆಯಲ್ಲಿ ಮಮತಾ ಬ್ಯಾನರ್ಜಿ ನೇತೃತ್ವದ ಬಣದ ಅಭ್ಯರ್ಥಿ ರಬಿಯುಲ್ ಆಲಂ ಚೌಧರಿ ಕೆಲವೇ ಗಂಟೆಗಳಲ್ಲಿ ತಮ್ಮ ನಿರ್ಧಾರ ಬದಲಿಸಿದ್ದಾರೆ. ಶನಿವಾರ ಬೆಳಗ್ಗೆ ಚುನಾವಣಾ ಕಣದಿಂದ ಹಿಂದೆ ಸರಿಯುವುದಾಗಿ ಘೋಷಿಸಿದ್ದ ಅವರು, ಬಳಿಕ ಮಮತಾ ಬ್ಯಾನರ್ಜಿ ಅವರೊಂದಿಗೆ ಮಾತುಕತೆ ನಡೆಸಿದ ನಂತರ ಚುನಾವಣೆಯಲ್ಲಿ ಮುಂದುವರಿಯುವುದಾಗಿ ತಿಳಿಸಿದ್ದಾರೆ.

ಪಕ್ಷದ ಕಾರ್ಯಕರ್ತರಿಗೆ ಕಿರುಕುಳ ನೀಡಲಾಗುತ್ತಿದೆ ಹಾಗೂ ಹೊಸ ಹೆಸರು-ಚಿಹ್ನೆಯೊಂದಿಗೆ ಕಡಿಮೆ ಅವಧಿಯಲ್ಲಿ ಪ್ರಚಾರ ನಡೆಸುವುದು ಕಷ್ಟವಾಗಲಿದೆ ಎಂದು ಹೇಳಿ ಚೌಧರಿ ಹಿಂದೆ ಸರಿಯುವ ನಿರ್ಧಾರ ಪ್ರಕಟಿಸಿದ್ದರು. ಬಳಿಕ ಪಕ್ಷದ ನಾಯಕತ್ವದೊಂದಿಗೆ ಮಾತುಕತೆ ಹಾಗೂ ಭದ್ರತೆಯ ಭರವಸೆ ದೊರೆತ ಹಿನ್ನೆಲೆಯಲ್ಲಿ ನಿರ್ಧಾರ ಬದಲಿಸಿರುವುದಾಗಿ ತಿಳಿಸಿದ್ದಾರೆ.

ರೆಜಿನಗರ್ ಹಾಗೂ ನಂದಿಗ್ರಾಮ ವಿಧಾನಸಭಾ ಕ್ಷೇತ್ರಗಳಿಗೆ ಅಕ್ಟೋಬರ್ 6ರಂದು ಉಪಚುನಾವಣೆ ನಡೆಯಲಿದೆ. ತೃಣಮೂಲ ಕಾಂಗ್ರೆಸ್‌ನ ಹೆಸರು ಮತ್ತು 'ಹೂವು-ಹುಲ್ಲು' ಚಿಹ್ನೆಯನ್ನು ಚುನಾವಣಾ ಆಯೋಗ ತಾತ್ಕಾಲಿಕವಾಗಿ ಸ್ಥಗಿತಗೊಳಿಸಿರುವ ಹಿನ್ನೆಲೆಯಲ್ಲಿ, ಮಮತಾ ಬಣಕ್ಕೆ 'ಮಮತಾ ಆಲ್ ಇಂಡಿಯಾ ತೃಣಮೂಲ ಕಾಂಗ್ರೆಸ್' ಎಂಬ ಹೆಸರು ಮತ್ತು 'ಫುಟ್‌ಬಾಲ್ ಆಟಗಾರ' ಚಿಹ್ನೆ ನೀಡಲಾಗಿದೆ.

ಇದಕ್ಕೂ ಮುನ್ನ ನಂದಿಗ್ರಾಮದ ಮಮತಾ ಬಣದ ಅಭ್ಯರ್ಥಿ ಸಂಚಿತಾ ಪ್ರಧಾನ್ ಡೇ ನಾಮಪತ್ರ ಹಿಂಪಡೆದಿದ್ದರು. ಬಳಿಕ ಮಮತಾ ಬಣವು ಕಾಂಗ್ರೆಸ್ ಅಭ್ಯರ್ಥಿ ಮಿಲನ್ ಪ್ರಧಾನ್‌ಗೆ ಬೆಂಬಲ ಘೋಷಿಸಿತ್ತು. ಈ ಬೆಳವಣಿಗೆಗಳ ನಡುವೆಯೇ ರೆಜಿನಗರ್ ಅಭ್ಯರ್ಥಿಯ ಯೂ-ಟರ್ನ್ ನಡೆದಿದೆ.

### ಡೂಸು ಚುನಾವಣೆಯಲ್ಲಿ ಎಬಿವಿಪಿಗೆ 3 ಸ್ಥಾನ

● ವಿಕ್ರಮ ವಾಹಿನಿ । ನವದೆಹಲಿ

ದೆಹಲಿ ವಿಶ್ವವಿದ್ಯಾಲಯ ವಿದ್ಯಾರ್ಥಿ ಸಂಘದ (ಡೂಸು) 2026-27ನೇ ಸಾಲಿನ ಚುನಾವಣೆಯಲ್ಲಿ ಎಬಿವಿಪಿ ನಾಲ್ಕು ಪ್ರಮುಖ ಹುದ್ದೆಗಳ ಪೈಕಿ ಮೂರು ಸ್ಥಾನಗಳನ್ನು ಗೆದ್ದುಕೊಂಡಿದೆ. ಅಧ್ಯಕ್ಷ, ಕಾರ್ಯದರ್ಶಿ ಹಾಗೂ ಜಂಟಿ ಕಾರ್ಯದರ್ಶಿ ಹುದ್ದೆಗಳು ಎಬಿವಿಪಿ ಪಾಲಾಗಿದ್ದು, ಉಪಾಧ್ಯಕ್ಷ ಸ್ಥಾನವನ್ನು ಸ್ವತಂತ್ರ ಅಭ್ಯರ್ಥಿ ದೀಪಾಂಶು ಶೋಕೀನ್ ಗೆದ್ದಿದ್ದಾರೆ.

ಎಬಿವಿಪಿಯ ಯಶ್ ದಬಾಸ್ 24,576 ಮತಗಳನ್ನು ಪಡೆದು ಅಧ್ಯಕ್ಷರಾಗಿ ಆಯ್ಕೆಯಾಗಿದ್ದು, ಎನ್‌ಎಸ್‌ಯುಐನ ವಿಜಯ್ ಶಂಕರ್ ಮೀನಾ 22,523 ಮತಗಳನ್ನು ಪಡೆದಿದ್ದಾರೆ. ಉಪಾಧ್ಯಕ್ಷ ಸ್ಥಾನದಲ್ಲಿ ಸ್ವತಂತ್ರ ಅಭ್ಯರ್ಥಿ ದೀಪಾಂಶು ಶೋಕೀನ್ 30,615 ಮತಗಳೊಂದಿಗೆ ಗೆಲುವು ಸಾಧಿಸಿದ್ದಾರೆ. ಎಬಿವಿಪಿಯ ಇಶು ಮೌರ್ಯ 16,910 ಮತ ಪಡೆದಿದ್ದಾರೆ.

**ರಿಯಾ, ಲಕ್ಷ್ಯ ಗೆಲುವು:** ಕಾರ್ಯದರ್ಶಿ ಸ್ಥಾನದಲ್ಲಿ ಎಬಿವಿಪಿಯ ರಿಯಾ ಛಾವ್ಡಿ 21,650 ಮತಗಳೊಂದಿಗೆ ಗೆದ್ದರೆ, ಜಂಟಿ ಕಾರ್ಯದರ್ಶಿ ಸ್ಥಾನವನ್ನು ಎಬಿವಿಪಿಯ ಲಕ್ಷ್ಯ ರಾಜ್ ಸಿಂಗ್ ಗೆದ್ದಿದ್ದಾರೆ. ಲಕ್ಷ್ಯ ರಾಜ್ ಸಿಂಗ್ 16,615ಕ್ಕೂ ಹೆಚ್ಚು ಮತಗಳನ್ನು ಪಡೆದಿದ್ದಾರೆ.

**20 ಸುತ್ತಿನಲ್ಲಿ ಮತ ಎಣಿಕೆ:** ವಿಶ್ವವಿದ್ಯಾಲಯದ ಉತ್ತರ ಕ್ಯಾಂಪಸ್‌ನಲ್ಲಿರುವ ಕ್ರೀಡಾಂಗಣದ ಬಹುಪಯೋಗಿ ಸಭಾಂಗಣದಲ್ಲಿ ಮತ ಎಣಿಕೆ ನಡೆಯಿತು. ಒಟ್ಟು 20 ಸುತ್ತಿನ ಮತ ಎಣಿಕೆ ಪೂರ್ಣಗೊಂಡ ಬಳಿಕ ಫಲಿತಾಂಶ ಪ್ರಕಟಿಸಲಾಯಿತು. ಈ ಬಾರಿ ಶೇ.40.46ರಷ್ಟು ಮತದಾನ ದಾಖಲಾಗಿದ್ದು, ಕಳೆದ ಕೆಲವು ವರ್ಷಗಳಿಗೆ ಹೋಲಿಸಿದರೆ ಹೆಚ್ಚಿನ ಪ್ರಮಾಣದ ಮತದಾನವಾಗಿದೆ.

ವಿದ್ಯಾರ್ಥಿಗಳ ಕಲ್ಯಾಣ, ಕ್ಯಾಂಪಸ್ ಸೌಲಭ್ಯಗಳು, ವಸತಿ ಹಾಗೂ ಸುರಕ್ಷತೆ ಪ್ರಮುಖ ಚುನಾವಣಾ ವಿಷಯಗಳಾಗಿದ್ದವು. ಮತ ಎಣಿಕೆ ಹಿನ್ನೆಲೆಯಲ್ಲಿ ಕ್ಯಾಂಪಸ್ ಸುತ್ತಮುತ್ತ ಬಿಗಿ ಭದ್ರತೆ ಕಲ್ಪಿಸಲಾಗಿತ್ತು. ಕಳೆದ ವರ್ಷದ ಚುನಾವಣೆಯಲ್ಲಿಯೂ ಎಬಿವಿಪಿ ಅಧ್ಯಕ್ಷ, ಕಾರ್ಯದರ್ಶಿ ಹಾಗೂ ಜಂಟಿ ಕಾರ್ಯದರ್ಶಿ ಹುದ್ದೆಗಳನ್ನು ಗೆದ್ದುಕೊಂಡಿತ್ತು.

2026-27ನೇ ಶೈಕ್ಷಣಿಕ ಸಾಲಿಗೆ ಆಯ್ಕೆಯಾಗಿರುವ ನಾಲ್ವರು ಪದಾಧಿಕಾರಿಗಳು ವಿದ್ಯಾರ್ಥಿಗಳ ಸಮಸ್ಯೆಗಳು, ಕ್ಯಾಂಪಸ್ ಸೌಲಭ್ಯಗಳು, ಹಾಸ್ಟೆಲ್, ಸುರಕ್ಷತೆ ಸೇರಿದಂತೆ ವಿವಿಧ ವಿಷಯಗಳ ಕುರಿತು ಕಾರ್ಯನಿರ್ವಹಿಸಲಿದ್ದಾರೆ. ಫಲಿತಾಂಶ ಪ್ರಕಟವಾದ ಬಳಿಕ ಕ್ಯಾಂಪಸ್‌ನಲ್ಲಿ ಬೆಂಬಲಿಗರು ಸಂಭ್ರಮಾಚರಣೆ ನಡೆಸಿದರು.

# ಕಸ್ತೂರಿರಂಗನ್ ವರದಿ ಜಾರಿಗೆ ಒಕ್ಕೊರಲ ವಿರೋಧ

● ವಿಕ್ರಮ ವಾಹಿನಿ । ಶಿವಮೊಗ್ಗ (ತೀರ್ಥಹಳ್ಳಿ)

ಸಿಎಂ ಡಿ ಕೆ ಶಿವಕುಮಾರ್ ಅವರ ನೇತೃತ್ವದಲ್ಲಿ ಕಸ್ತೂರಿ ರಂಗನ್ ವರದಿ ವಿಚಾರವಾಗಿ ಶಿವಮೊಗ್ಗದ ತೀರ್ಥಹಳ್ಳಿಗೆ ಶನಿವಾರ ನಡೆದ ಸಾರ್ವಜನಿಕರೊಂದಿಗೆ ಸಂವಾದ ಕಾರ್ಯಕ್ರಮದಲ್ಲಿ ಕಸ್ತೂರಿ ರಂಗನ್ ವರದಿ ಬೇಡ ಎನ್ನುವ ಒಕ್ಕೊರಲ ದನಿ ವ್ಯಕ್ತವಾಯಿತು.

"ಕರ್ನಾಟಕ ಅರಣ್ಯ ಕಾಯ್ದೆ 1963, ವನ್ಯಜೀವಿ ಸಂರಕ್ಷಣಾ ಕಾಯ್ದೆ 1972, 1980 ಕಾಯ್ದೆಗಳು ಈಗಾಗಲೇ ಜಾರಿಯಲ್ಲಿವೆ. ಕಂದಾಯ ಭೂಮಿಗೆ ಸಂಬಂಧಿಸಿದಂತೆ ಅನೇಕ ಕಾಯ್ದೆಗಳಿಂದ ಮಲೆನಾಡಿಗರ ಬದುಕು ಸಂಕಷ್ಟಕ್ಕೆ ಸಿಲುಕಿದೆ. ಕಸ್ತೂರಿ ರಂಗನ್ ವರದಿ ಜಾರಿಯಾದರೆ ನಮ್ಮ ಬದುಕು ಬೀದಿಗೆ ಬೀಳಲಿದೆ" ಎಂದು ಶಿವಮೊಗ್ಗ ಅಡಕೆ ಬೆಳೆಗಾರರ ಸಂಘದ ಅಧ್ಯಕ್ಷರಾದ ರಮೇಶ್ ಹೆಗಡೆ ತಮ್ಮ ಅಭಿಪ್ರಾಯ ತಿಳಿಸಿದರು.

"ವರದಿಯಲ್ಲಿ ಆಸ್ತಿ ಹಕ್ಕಿಗೆ ತೊಂದರೆಯಿಲ್ಲ ಎಂದಿದ್ದಾರೆ. ಆದರೆ ಬಗರ್ ಹುಕುಂ ಸೇರಿದಂತೆ ಇತರೇ ಭೂಮಿ ಹೊಂದಿದವರಿಗೆ ತೊಂದರೆಯಾಗಲಿದೆ. ಹೀಗೆ ಅನೇಕ ವಿಚಾರಗಳ ಬಗ್ಗೆ ಇಲ್ಲಿ ಸ್ಪಷ್ಟತೆಯಿಲ್ಲ" ಎಂದು ಹೇಳಿದರು.

ಸಚಿವ ಮಧು ಬಂಗಾರಪ್ಪ ಮಾತನಾಡಿ, "ನಾವು ಬಗರ್ ಹುಕುಂ, ಉಳುವವನೇ ಭೂಮಿ ಮೂಲಕ ಜನರನ್ನ ಕಾಪಾಡಿದ್ದೇವೆ. ಆದರೆ ಈಗ ಭೂಮಿ ಹೋಗುವ ಭಯವಿದೆ. ಕೇಂದ್ರ ಸರ್ಕಾರ ಸೂಕ್ತ ನಿರ್ದಾರ ಮಾಡಬೇಕು" ಎಂದರು.

ಸಂಸದ ಬಿ ವೈ ರಾಘವೇಂದ್ರ ಮಾತನಾಡಿ, "ಅರಣ್ಯ ಇಲಾಖೆಗಿಂತ ಮಲೆನಾಡಿನ ಜನ ಅರಣ್ಯ ಉಳಿಸಿದ್ದಾರೆ. ನಾವು ಈ ವರದಿ ಒಪ್ಪಲ್ಲ ಎನ್ನುವುದರ ಜೊತೆಗೆ ಇಲ್ಲಿರುವ ರೈತರ ಭೂಮಿಯ ಸಂಪೂರ್ಣ ಮಾಹಿತಿ ಕೇಂದ್ರಕ್ಕೆ ನೀಡಬೇಕು. ಸರ್ವೇ ನಂಬರ್, ವಾಸದ ಜಾಗ ಸೇರಿದಂತೆ ಪ್ರತಿ ಮಾಹಿತಿಯೂ ನೀಡಬೇಕು" ಎಂದರು.



ಕಸ್ತೂರಿರಂಗನ್ ವರದಿ ಕುರಿತು ಮಲೆನಾಡಿನ ಜನರ ಆತಂಕ ಹಾಗೂ ಅಭಿಪ್ರಾಯಗಳನ್ನು ಆಲಿಸುವ ಉದ್ದೇಶದಿಂದ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನೇತೃತ್ವದಲ್ಲಿ ತೀರ್ಥಹಳ್ಳಿಯಲ್ಲಿ ಸಾರ್ವಜನಿಕ ಸಂವಾದ ನಡೆಯಿತು. ರೈತರ ಹಿತ, ಭೂಮಿ ಹಕ್ಕು ಹಾಗೂ ಮಲೆನಾಡಿನ ಜನಜೀವನಕ್ಕೆ ತೊಂದರೆಯಾಗದಂತೆ ವರದಿ ಕುರಿತು ಸಮಗ್ರ ಚರ್ಚೆ ನಡೆಸುವ ಅಗತ್ಯವನ್ನು ಸಭೆಯಲ್ಲಿ ಪ್ರತಿಪಾದಿಸಲಾಯಿತು.

ಮಾಜಿ ಶಾಸಕ ಕಿಮ್ಮನೆ ರತ್ನಾಕರ ಮಾತನಾಡಿ, "ಸಂಸತ್ತೇ ಇಡೀ ದೇಶದಲ್ಲಿ ಸುಪ್ರೀಂ. ಯಾವ ಸುಪ್ರೀಂಕೋರ್ಟ್ ಕೂಡ ದೊಡ್ಡದಲ್ಲ. ಅದು ವಿಮರ್ಶೆ, ಟೀಕೆ, ಸಲಹೆ ನೀಡಬಹುದು. ಆದರೆ ಜನರನ್ನು ಉಳಿಸುವುದು ಸಂಸತ್. ಆದ ಕಾರಣ ಕರ್ನಾಟಕದ ಎಲ್ಲಾ ಸಂಸದರು ಕಸ್ತೂರಿ ರಂಗನ್ ವರದಿ ವಿರುದ್ಧ ನಿಲ್ಲಬೇಕು" ಎಂದು ಸಲಹೆ ನೀಡಿದರು.

ಕೃಷಿ ತಜ್ಞ ಕಮ್ಮರಡಿ ಪ್ರಕಾಶ್ ಅವರು ಮಾತನಾಡಿ, "ಕಸ್ತೂರಿ ರಂಗನ್ ವಿಚಾರವಾಗಿ ಮೂರು ದಿನಗಳ ವಿಶೇಷ ಅಧಿವೇಶನ ಕರೆದಿರುವುದು ಅತ್ಯಂತ ಶ್ಲಾಘನೀಯ. ಪಶ್ಚಿಮಘಟ್ಟ ಹೊಂದಿರುವ ಆರು ರಾಜ್ಯಗಳ ಮುಖ್ಯಮಂತ್ರಿಗಳನ್ನು ಸೇರಿಸಿ ಒಂದು ಅಭಿಪ್ರಾಯ ಮೂಡಿಸಬೇಕು. ಬಡ ರೈತರನ್ನು ಉಳಿಸೋಣ" ಎಂದರು.

ರೈತ ಮುಖಂಡ ರಾಜೇಂದ್ರ ಕಮ್ಮಳಿಗೆರೆ ಮಾತನಾಡಿ, "ಕಸ್ತೂರಿ ರಂಗನ್ ವರದಿ ಆಗಿರುವುದು ವಿದೇಶಿ ದುಡ್ಡಿನಿಂದ. ಇದು ಜನ ವಿರೋಧಿ ಅರಣ್ಯ ಕಾಯ್ದೆಯಾಗಿದೆ. ಇದರಿಂದ ಪರಿಸರ ಸಂರಕ್ಷಣೆಯಾಗುವುದಿಲ್ಲ. ರಾಜ್ಯ ಸರ್ಕಾರದ ಜೊತೆ ನಾವು ನಿಲ್ಲುತ್ತೇವೆ. ಕೇಂದ್ರ ಸರ್ಕಾರಕ್ಕೆ ಪ್ರಬಲ ಸಂದೇಶ ನೀಡಿ" ಎಂದರು.

"ಕೇಂದ್ರ ಸಚಿವರಾಗಿದ್ದ ಭೂಪೇಂದ್ರ ಯಾದವ್ ಅವರ ಬಳಿ ಈ ವರದಿ ಜಾರಿಯಾದರೆ ಪಶ್ಚಿಮ ಘಟ್ಟದ ಹಳ್ಳಿಗಳಲ್ಲಿ ರಕ್ತಕ್ರಾಂತಿಯಾಗಲಿದೆ ಎಂದಿದ್ದೇ" ಎಂದು ಶಾಸಕ ಆರಗ ಜ್ಞಾನೇಂದ್ರ ಹೇಳಿದರು.

ಮಲೆನಾಡು ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಮಂಜುನಾಥ್ ಗೌಡ ಮಾತನಾಡಿ, "ಡಿ ಕೆ ಶಿವಕುಮಾರ್ ಅವರು ನಮ್ಮ ಜಿಲ್ಲೆಗೆ ಬಂದ ನಂತರ ನಮ್ಮ ಆತಂಕ ದೂರವಾಗಿದೆ. ಏಕೆಂದರೆ ಅವರು ನಮ್ಮ ಪರವಾಗಿ ನಿಲ್ಲುತ್ತಾರೆ ಎನ್ನುವ ಭರವಸೆಯಿದೆ. ಕಸ್ತೂರಿ ರಂಗನ್ ವರದಿಯನ್ನು ಕೇಂದ್ರ ಸರ್ಕಾರ ಮನಸು ಮಾಡಿದರೆ ಬದಲಾವಣೆ ಮಾಡುವ ಅಥವಾ ಕೈ ಬಿಡುವ ಮನಸು ಮಾಡಬಹುದು ಎಂದು ಹಸಿರು ನ್ಯಾಯ ಮಂಡಳಿ ಹೇಳಿದೆ. ಆದರೆ ಅನೇಕರು ವರದಿ ಓದದೇ ಈಗಿನ ಪರಿಸ್ಥಿತಿಗೆ ಬಂದಿದ್ದೇವೆ" ಎಂದರು. 2ನೇ ಪುಟಕ್ಕೆ...

# ಬಾಂಗ್ಲಾದವರಿಂದ ಯುವತಿ ಕಿಡ್ನ್ಯಾಪ್?

● ವಿಕ್ರಮ ವಾಹಿನಿ । ಕಲಬುರಗಿ

ನಗರದ ಹೊರವಲಯದ ಹಿರೇನಂದೂರ ಕೈಗಾರಿಕಾ ಪ್ರದೇಶದ ಗಾರ್ಮೆಂಟ್ಸ್‌ನಲ್ಲಿ ಕೆಲಸ ಮಾಡುತ್ತಿದ್ದ 22 ವರ್ಷದ ಯುವತಿ ಸುರೇಖಾ ಬಾಬು ಪವಾರ್ ನಾಲ್ಕು ತಿಂಗಳಿಂದ ನಾಪತ್ತೆಯಾಗಿದ್ದು, ಬಾಂಗ್ಲಾದೇಶದ ವ್ಯಕ್ತಿಗಳು ಆಕೆಯನ್ನು ಅಪಹರಿಸಿರುವ ಶಂಕೆಯನ್ನು ಪೋಷಕರು ವ್ಯಕ್ತಪಡಿಸಿದ್ದಾರೆ. ಯುವತಿಯನ್ನು ಪತ್ತೆಹಚ್ಚಿ ನ್ಯಾಯಾಲಯದ ಮುಂದೆ ಹಾಜರುಪಡಿಸುವಂತೆ ಪೊಲೀಸರಿಗೆ ನಿರ್ದೇಶನ ನೀಡಬೇಕು ಎಂದು ಕೋರಿ ಪೋಷಕರು ಹೈಕೋರ್ಟ್‌ನ ಕಲಬುರಗಿ ಪೀಠದಲ್ಲಿ ಹೇಬಿಯಸ್ ಕಾರ್ಪಸ್ ಅರ್ಜಿ ಸಲ್ಲಿಸಿದ್ದಾರೆ.

**ವಾಟ್ಸ್ಆ್ಯಪ್‌ನಲ್ಲಿ ಆತಂಕಕಾರಿ ಸಂದೇಶ:** ನಾಪತ್ತೆಯಾಗಿರುವ ಸುರೇಖಾ ಅಜ್ಞಾತ ಸ್ಥಳದಿಂದ ವಾಟ್ಸ್ಆ್ಯಪ್ ಮೂಲಕ ಪೋಷಕರಿಗೆ ಪತ್ರ ಕಳುಹಿಸಿದ್ದಾರೆ ಎನ್ನಲಾಗಿದೆ. ತಮ್ಮನ್ನು ಪುಸಲಾಯಿಸಿ ಬಾಂಗ್ಲಾದೇಶಕ್ಕೆ ಕರೆದುಕೊಂಡು ಹೋಗಲಾಗಿದೆ ಹಾಗೂ ಅಲ್ಲಿ ಕಿರುಕುಳ ನೀಡಲಾಗುತ್ತಿದೆ ಎಂದು ಪತ್ರದಲ್ಲಿ ತಿಳಿಸಿರುವುದಾಗಿ ಕುಟುಂಬದವರು ಹೇಳಿದ್ದಾರೆ.



'ಆರಿಫ್, ಕಬೀರ್ ಹಾಗೂ ನಸ್ರತ್ ಎಂಬವರ ಕೈಯಲ್ಲಿ ಸಿಲುಕಿಕೊಂಡಿದ್ದೇನೆ' ಎಂದು ಸುರೇಖಾ ಪತ್ರದಲ್ಲಿ ಉಲ್ಲೇಖಿಸಿರುವುದಾಗಿ ಪೋಷಕರು ತಿಳಿಸಿದ್ದಾರೆ. ಅಲ್ಲದೆ, ಬಾಂಗ್ಲಾದೇಶದಿಂದ ಕಲಬುರಗಿಯ ಗಾರ್ಮೆಂಟ್ಸ್ ಕಂಪನಿಗೆ ಕೆಲಸಕ್ಕೆ ಬಂದಿರುವ ಕೆಲವರು ಆತಂಕವಾದಿಗಳಾಗಿದ್ದಾರೆ ಎಂದು ಪತ್ರದಲ್ಲಿ ಹೇಳಿರುವುದಾಗಿ ಕುಟುಂಬದವರು ಆರೋಪಿಸಿದ್ದಾರೆ.

**ಕೆಲಸಕ್ಕೆ ತೆರಳಿ ಮರಳಿರಲಿಲ್ಲ:** ಸುರೇಖಾ ಹಿರೇನಂದೂರ ಕೈಗಾರಿಕಾ ಪ್ರದೇಶದಲ್ಲಿರುವ ನೆಕ್ಸ್ ಜೆನ್ ಗಾರ್ಮೆಂಟ್ಸ್‌ನಲ್ಲಿ ಕೆಲಸ ಮಾಡುತ್ತಿದ್ದರು. ಕೆಲಸಕ್ಕೆ ತೆರಳಿದ ಬಳಿಕ ಮನೆಗೆ ವಾಪಸ್ ಬಂದಿರಲಿಲ್ಲ ಎಂದು ಆಕೆಯ ಅಣ್ಣ ರಾಹುಲ್ ಪವಾರ್ ತಿಳಿಸಿದ್ದಾರೆ.

ಒಮ್ಮೆ ವಾಟ್ಸ್ಆ್ಯಪ್ ಕರೆ ಮೂಲಕ ಸುರೇಖಾ ಕುಟುಂಬದವರೊಂದಿಗೆ ಮಾತನಾಡಿದ್ದರು. ಆ ಕರೆಯ ಸ್ಥಳದ ಕುರಿತು ಪೊಲೀಸರನ್ನು ವಿಚಾರಿಸಿದಾಗ ಅಸ್ಸಾಂ ಗಡಿ ಭಾಗವೆಂದು ತಿಳಿದುಬಂದಿತ್ತು. ಇದರಿಂದ ಆತಂಕಗೊಂಡ ಕುಟುಂಬದವರು ಆಕೆಯನ್ನು ಪತ್ತೆಹಚ್ಚಿ ಕರೆತರಬೇಕು ಎಂದು ಪೊಲೀಸರಿಗೆ ಮನವಿ ಮಾಡಿದ್ದರು. ಬಳಿಕ ನ್ಯಾಯಾಲಯದ ಮೊರೆ ಹೋಗಿದ್ದಾರೆ.

**ಮದುವೆ ನಿಶ್ಚಯಿಸಲು ಸಿದ್ಧತೆ:** ಸುರೇಖಾ ಅವರ ಮದುವೆಯನ್ನು ಇದೇ ದೀಪಾವಳಿಗೆ ನಿಶ್ಚಯಿಸಲು ಕುಟುಂಬದವರು ಸಿದ್ಧತೆ ನಡೆಸಿದ್ದರು ಎಂದು ರಾಹುಲ್ ಪವಾರ್ ಹೇಳಿದ್ದಾರೆ. ಈ ನಡುವೆ ಆಕೆ ನಾಪತ್ತೆಯಾಗಿರುವುದರಿಂದ ಕುಟುಂಬ ತೀವ್ರ ಆತಂಕಕ್ಕೊಳಗಾಗಿದೆ. ಪೊಲೀಸರು ಸುರೇಖಾಳನ್ನು ಪತ್ತೆಹಚ್ಚಿ ಸುರಕ್ಷಿತವಾಗಿ ಮನೆಗೆ ಕರೆತರಬೇಕು ಎಂದು ಅವರು ಒತ್ತಾಯಿಸಿದ್ದಾರೆ.'ಸ್ವಇಚ್ಛೆಯಿಂದ ತೆರಳಿದ್ದಾರೆ'

ಇದಕ್ಕೆ ಸಂಬಂಧಿಸಿದಂತೆ ಕಲಬುರಗಿ ಪೊಲೀಸ್ ಕಮಿಷನರ್ ಶರಣಪ್ಪ ಎಸ್.ಡಿ. ಅವರು, ಪೋಷಕರ ದೂರಿನ ಆಧಾರದ ಮೇಲೆ ಪೊಲೀಸರು ಎರಡು ಬಾರಿ ಈಶಾನ್ಯ ರಾಜ್ಯದಲ್ಲಿ ಸುರೇಖಾಳನ್ನು ಪತ್ತೆಹಚ್ಚಿ ಮಾತನಾಡಿದ್ದಾರೆ ಎಂದು ತಿಳಿಸಿದ್ದಾರೆ. ಈ ವೇಳೆ ಸುರೇಖಾ ತಾನು ಸ್ವಇಚ್ಛೆಯಿಂದ ತೆರಳಿರುವುದಾಗಿ ಹೇಳಿಕೆ ನೀಡಿದ್ದು, ಕಲಬುರಗಿಗೆ ವಾಪಸ್ ಬರಲು ನಿರಾಕರಿಸಿದ್ದಾರೆ. ಬಳಿಕ ಭಾರತದ ಗಡಿ ಭಾಗದಲ್ಲಿ ಆಕೆಯ ಮೊಬೈಲ್ ಫೋನ್ ಸ್ವಿಚ್ ಆಫ್ ಆಗಿದೆ. ಕುಟುಂಬದವರೊಂದಿಗೆ ಮಾತನಾಡಿರುವುದಾಗಿಯೂ ಸುರೇಖಾ ಪೊಲೀಸರಿಗೆ ತಿಳಿಸಿದ್ದಾಳೆ ಎಂದು ಕಮಿಷನರ್ ಹೇಳಿದ್ದಾರೆ.

ಯುವತಿ ನಾಪತ್ತೆ ಕುರಿತು ಕುಟುಂಬದವರು ಅಪಹರಣದ ಶಂಕೆ ವ್ಯಕ್ತಪಡಿಸಿರುವ ಹಿನ್ನೆಲೆಯಲ್ಲಿ ಪ್ರಕರಣದ ವಿವಿಧ ಆಯಾಮಗಳ ಕುರಿತು ತನಿಖೆ ಮುಂದುವರಿದಿದೆ.

# ಶೈಕ್ಷಣಿಕ ಪ್ರವಾಸದಲ್ಲಿ ಸೆಲ್ಫೀ, ರೀಲ್ಸ್‌ಗೆ ಬ್ರೇಕ್

● ವಿಕ್ರಮ ವಾಹಿನಿ । ಬೆಂಗಳೂರು

ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಶೈಕ್ಷಣಿಕ ಪ್ರವಾಸದ ವೇಳೆ ವಿದ್ಯಾರ್ಥಿಗಳು ಸೆಲ್ಫೀ ಹಾಗೂ ರೀಲ್ಸ್ ಚಿತ್ರೀಕರಿಸದಂತೆ ಕಾಲೇಜು ಶಿಕ್ಷಣ ಇಲಾಖೆ ಸೂಚಿಸಿದೆ. ವಿದ್ಯಾರ್ಥಿಗಳ ಸುರಕ್ಷತೆಗೆ ಆದ್ಯತೆ ನೀಡುವಂತೆ ನಿರ್ದೇಶಿಸಿರುವ ಇಲಾಖೆ, ಪ್ರವಾಸದ ವೇಳೆ ಯಾವುದೇ ಅವಘಡ ಸಂಭವಿಸಿದರೆ ವಿಭಾಗದ ಮುಖ್ಯಸ್ಥರು ಹಾಗೂ ಪ್ರಾಂಶುಪಾಲರನ್ನೇ ನೇರ ಹೊಣೆಗಾರರನ್ನಾಗಿ ಮಾಡಲಾಗುವುದು ಎಂದು ಎಚ್ಚರಿಸಿದೆ.

ಶೈಕ್ಷಣಿಕ ಪ್ರವಾಸ ಕೈಗೊಳ್ಳಲು ಇಲಾಖೆಯ ಪೂರ್ವಾನುಮತಿ ಕಡ್ಡಾಯವಾಗಿದ್ದು, ಪ್ರವಾಸದ 15 ದಿನಗಳ ಮುನ್ನ ದಿನಾಂಕ, ಸ್ಥಳ, ವಿದ್ಯಾರ್ಥಿಗಳು ಹಾಗೂ ಪ್ರಾಧ್ಯಾಪಕರ ವಿವರ ಒಳಗೊಂಡ ಪ್ರಸ್ತಾವನೆ ಸಲ್ಲಿಸಬೇಕು. ಪ್ರವಾಸಕ್ಕೂ ಮುನ್ನ



ವಿದ್ಯಾರ್ಥಿಗಳ ಮುಚ್ಚಳಿಕೆ ಹಾಗೂ ಪೋಷಕರ ಒಪ್ಪಿಗೆ ಪತ್ರ ಪಡೆಯಬೇಕು. 2ನೇ ಪುಟಕ್ಕೆ...

# ಪರೀಕ್ಷೆಯಲ್ಲಿ ಮೊಬೈಲ್ ಪತ್ತೆ: ಐಐಟಿ ವಿದ್ಯಾರ್ಥಿ ಆತ್ಮಹತ್ಯೆ

● ವಿಕ್ರಮ ವಾಹಿನಿ । ಮುಂಬೈ

ಪರೀಕ್ಷಾ ಕೊಠಡಿಯಲ್ಲಿ ಮೊಬೈಲ್ ಫೋನ್ ಬಳಸಿದ ಘಟನೆ ಬೆಳಕಿಗೆ ಬಂದ ಬೆನ್ನಲ್ಲೇ ಐಐಟಿ ಬಾಂಬೆಯ ಎನರ್ಜಿ ಸೈನ್ಸ್ ಆಂಡ್ ಎಂಜಿನಿಯರಿಂಗ್ ವಿಭಾಗದ ದ್ವಿತೀಯ ವರ್ಷದ ವಿದ್ಯಾರ್ಥಿಯೊಬ್ಬ ಶುಕ್ರವಾರ ಸಂಜೆ ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ನಡೆದಿದೆ. ವಿದ್ಯಾರ್ಥಿಯ ಸಾವಿನ ಬೆನ್ನಲ್ಲೇ ನೂರಾರು ವಿದ್ಯಾರ್ಥಿಗಳು ಕ್ಯಾಂಪಸ್‌ನಲ್ಲಿ ಪ್ರತಿಭಟನೆ ನಡೆಸಿ, ಆಡಳಿತ ಮಂಡಳಿಯ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

ಪರೀಕ್ಷೆಯ ವೇಳೆ ವಿದ್ಯಾರ್ಥಿ ಮೊಬೈಲ್ ಬಳಸಿದ್ದು, ಪ್ರಶ್ನೆಗಳಿಗೆ ಉತ್ತರ ಪಡೆಯಲು ಅವುಗಳನ್ನು ಚಾಟ್‌ಜಿಪಿಟಿಗೆ ಅಪ್‌ಲೋಡ್ ಮಾಡಿದ್ದ ವಿಚಾರ ಬೆಳಕಿಗೆ ಬಂದಿತ್ತು. ಆದರೆ ಈ ಸಂಬಂಧ ವಿದ್ಯಾರ್ಥಿಯ ವಿರುದ್ಧ ಯಾವುದೇ ಶಿಸ್ತು ಕ್ರಮ ಕೈಗೊಂಡಿರಲಿಲ್ಲ ಎಂದು ಐಐಟಿ ಬಾಂಬೆ ಆಡಳಿತ ತಿಳಿಸಿದೆ.

ವಿಭಾಗದ ಮುಖ್ಯಸ್ಥರು ವಿದ್ಯಾರ್ಥಿಯೊಂದಿಗೆ ಮಾತನಾಡಿ, ಇಂತಹ ಘಟನೆ ಮರುಕಳಿಸದಂತೆ ಸಲಹೆ ನೀಡಿದ್ದರು. ಅಲ್ಲದೆ, ಈ ಘಟನೆ ಆತನ ಶೈಕ್ಷಣಿಕ ಭವಿಷ್ಯದ ಮೇಲೆ ಪ್ರತಿಕೂಲ ಪರಿಣಾಮ ಬೀರದಂತೆ ನೋಡಿಕೊಳ್ಳುವುದಾಗಿ ಭರವಸೆ ನೀಡಲಾಗಿತ್ತು. ಬಳಿಕ ವಿದ್ಯಾರ್ಥಿ ಹಾಸ್ಟೆಲ್ ಕೊಠಡಿಗೆ ಮರಳಿದ್ದ ಎಂದು ಆಡಳಿತ ತಿಳಿಸಿದೆ.

ವಿದ್ಯಾರ್ಥಿಯ ಸಾವಿಗೆ ಕಾರಣವಾದ ಘಟನೆ ಕುರಿತು ಸಂಬಂಧಪಟ್ಟ ಅಧಿಕಾರಿಗಳು ಪರಿಶೀಲನೆ ನಡೆಸುತ್ತಿದ್ದಾರೆ. ಘಟನೆಯ ಬಳಿಕ ಕ್ಯಾಂಪಸ್‌ನಲ್ಲಿ ಪೊಲೀಸ್ ಸಿಬ್ಬಂದಿಯನ್ನು ನಿಯೋಜಿಸಲಾಗಿದ್ದು, ವಿದ್ಯಾರ್ಥಿಗಳು ಹಾಗೂ ಆಡಳಿತದ ನಡುವೆ ಮಾತುಕತೆ ನಡೆಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಡಿಸಿಪಿ ದತ್ತಾತ್ರೇಯ ನಲವಡೆ ಮಾತನಾಡಿ, ವಿದ್ಯಾರ್ಥಿಯ ಆತ್ಮಹತ್ಯೆ ಪ್ರಕರಣದ ತನಿಖೆ ನಡೆಯುತ್ತಿದೆ. ವಿದ್ಯಾರ್ಥಿಗಳು ಆಂತರಿಕ ಆಡಳಿತಾತ್ಮಕ ಸಮಸ್ಯೆಗಳಿಗೆ ಸಂಬಂಧಿಸಿದಂತೆ ಹಲವು ಬೇಡಿಕೆಗಳನ್ನು ಮುಂದಿಟ್ಟಿದ್ದು, ಅವುಗಳ ಕುರಿತು ಆಡಳಿತದೊಂದಿಗೆ ಮಾತುಕತೆ ನಡೆಯುತ್ತಿದೆ ಎಂದು ಹೇಳಿದ್ದಾರೆ.

ವಿದ್ಯಾರ್ಥಿಯ ಸಾವಿನಿಂದ ತೀವ್ರ ದುಃಖವಾಗಿದೆ ಎಂದು ಐಐಟಿ ಬಾಂಬೆ ಆಡಳಿತ ಹೇಳಿದ್ದು, ಮೃತ ವಿದ್ಯಾರ್ಥಿಯ ಸಹಪಾಠಿಗಳು, ಬೋಧಕ ಸಿಬ್ಬಂದಿ ಹಾಗೂ ಇತರರಿಗೆ ಅಗತ್ಯ ಬೆಂಬಲ ನೀಡಲಾಗುತ್ತಿದೆ ಎಂದು ತಿಳಿಸಿದೆ.

# ಹೆಣ್ಣುಮಗಳ ರಕ್ಷಣೆಗೆ ಬಂದವರೇ ಜೈಲಿಗೆ!

● ವಿಕ್ರಮ ವಾಹಿನಿ । ಬಾಗಲಕೋಟೆ

*ಕಾಲೇಜು ವಿದ್ಯಾರ್ಥಿನಿಗೆ ಸಾರ್ವಜನಿಕವಾಗಿ ಅಸಭ್ಯವಾಗಿ ವರ್ತಿಸಿದ ವ್ಯಕ್ತಿಯ ವಿರುದ್ಧ ಕ್ರಮ ಕೈಗೊಳ್ಳುವ ಬದಲು, ಆಕೆಯ ರಕ್ಷಣೆಗೆ ಧಾವಿಸಿ ಆರೋಪಿಯ ಮೇಲೆ ಹಲ್ಲೆ ನಡೆಸಿದ ಇಬ್ಬರು ಯುವಕರನ್ನು ಪೊಲೀಸರು ಬಂಧಿಸಿದ್ದಾರೆ ಎಂಬ ಆರೋಪ ಕೇಳಿಬಂದಿದೆ. ಈ ಘಟನೆಗೆ ಸಂಬಂಧಿಸಿದಂತೆ ಯುವಕರ ಕುಟುಂಬಸ್ಥರು ಹಾಗೂ ಸಂತ್ರಸ್ತ ವಿದ್ಯಾರ್ಥಿನಿ ಪೊಲೀಸರ ಕ್ರಮಕ್ಕೆ ಆಕ್ಷೇಪ ವ್ಯಕ್ತಪಡಿಸಿದ್ದಾರೆ. ಬಾಗಲಕೋಟೆ ನವನಗರದ 51ನೇ ಸೆಕ್ಟರ್‌ನಲ್ಲಿ ಸೆ.17ರಂದು ಈ ಘಟನೆ ನಡೆದಿದೆ ಎನ್ನಲಾಗಿದೆ. ರಸ್ತೆಯಲ್ಲಿ ತೆರಳುತ್ತಿದ್ದ ಕಾಲೇಜು ವಿದ್ಯಾರ್ಥಿನಿಯನ್ನು ಕಂಡು ಸುದೀಪ್ ನಾಡಗೌಡ ಎಂಬಾತ ಖಾಸಗಿ ಅಂಗ ಪ್ರದರ್ಶಿಸಿ ಅಸಭ್ಯವಾಗಿ ವರ್ತಿಸಿದ್ದಾನೆ ಎಂದು ಆರೋಪಿಸಲಾಗಿದೆ. ವಿದ್ಯಾರ್ಥಿನಿ ಸಹಾಯಕ್ಕಾಗಿ ಕೂಗಿಕೊಂಡಾಗ ಚೇತನ್ ಕೊಡಬಾಗಿ ಹಾಗೂ ರೋಹನ್ ಹಾದಿಮನಿ ಎಂಬ ಇಬ್ಬರು ಯುವಕರು ಸ್ಥಳಕ್ಕೆ ಧಾವಿಸಿ ಆಕೆಯ ನೆರವಿಗೆ ಬಂದಿದ್ದಾರೆ.*

*ಘಟನೆಗೆ ಸಂಬಂಧಿಸಿದಂತೆ ನವನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಆರೋಪಿಯ ಮೇಲೆ ಹಲ್ಲೆ ನಡೆಸಿದ ಆರೋಪದಡಿ ಚೇತನ್ ಮತ್ತು ರೋಹನ್ ಅವರನ್ನು ಬಂಧಿಸಲಾಗಿದೆ. ಯುವಕರ ಬಂಧನದ ಹಿನ್ನೆಲೆಯಲ್ಲಿ ಅವರ ಕುಟುಂಬಸ್ಥರು ಹಾಗೂ ಸಂತ್ರಸ್ತ ವಿದ್ಯಾರ್ಥಿನಿ ಪೊಲೀಸ್ ಠಾಣೆ ಎದುರು ಆಕ್ರೋಶ ವ್ಯಕ್ತಪಡಿಸಿದ್ದಾರೆ.*

*ಘಟನೆ ಕುರಿತು ನವನಗರ ಪೊಲೀಸರು, ಸುದೀಪ್ ಮೇಲೆ ಹಲ್ಲೆ ನಡೆಸಿದ ಬಗ್ಗೆ ದೂರು ದಾಖಲಾಗಿರುವ ಹಿನ್ನೆಲೆಯಲ್ಲಿ ಚೇತನ್ ಮತ್ತು ರೋಹನ್ ವಿರುದ್ಧ ಹಲ್ಲೆ ಪ್ರಕರಣ ದಾಖಲಿಸಿ ಬಂಧಿಸಲಾಗಿದೆ. ಘಟನೆಯ ಕುರಿತು ಎರಡೂ ಕಡೆಯಿಂದ ದೂರುಗಳು ಬಂದಿದ್ದು, ಸಂಪೂರ್ಣ ತನಿಖೆ ನಡೆಸಲಾಗುತ್ತಿದೆ ಎಂದು ತಿಳಿಸಿದ್ದಾರೆ.*

# "ಕಾಮಾಲೆ ಕಣ್ಣಿಗೆ ಎಲ್ಲವೂ ಹಳದಿ"

● ವಿಕ್ರಮ ವಾಹಿನಿ । ರಾಮನಗರ

ಮಂಗಳೂರಿನಲ್ಲಿ ನಡೆದ ಸಚಿವ ಸಂಪುಟ ಸಭೆಯನ್ನು 'ಟೂರಿಂಗ್ ಟಾಕೀಸ್' ಎಂದು ಟೀಕಿಸಿದ್ದ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಅವರ ಹೇಳಿಕೆಗೆ ಪೌರಾಡಳಿತ ಸಚಿವ ಹೆಚ್.ಸಿ. ಬಾಲಕೃಷ್ಣ ತಿರುಗೇಟು ನೀಡಿದ್ದಾರೆ.

ಮರಳವಾಡಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕುಮಾರಸ್ವಾಮಿ ಅವರಿಗೆ ಕೇಂದ್ರದಲ್ಲಿ ಸೂಕ್ತ ಕೆಲಸ ನೀಡಿಲ್ಲ. ಹೀಗಾಗಿ ಇಲ್ಲಿಗೆ ಬಂದು ಮನಸ್ಸಿಗೆ ಬಂದಂತೆ ಮಾತನಾಡುತ್ತಿದ್ದಾರೆ ಎಂದು ಟೀಕಿಸಿದರು.

'ಕಾಮಾಲೆ ಕಣ್ಣಿಗೆ ಕಾಣೋದೆಲ್ಲ ಹಳದಿ' ಎಂದು ವ್ಯಂಗ್ಯವಾಡಿದ ಬಾಲಕೃಷ್ಣ, ವಿಧಾನಸೌಧ ಬೆಂಗಳೂರಿನಲ್ಲಿದ್ದರೂ ಬೆಳಗಾವಿಯಲ್ಲಿ ಸುವರ್ಣ ವಿಧಾನಸೌಧ ನಿರ್ಮಿಸಿದ್ದೇಕೆ ಎಂದು ಪ್ರಶ್ನಿಸಿದರು. ತಮ್ಮ ಸರ್ಕಾರದ ಕೆಲಸಗಳು ಮಾತ್ರ ಕುಮಾರಸ್ವಾಮಿಗೆ ಸರಿಯಾಗಿ ಕಾಣುತ್ತವೆ ಎಂದು ಟೀಕಿಸಿದರು.

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ಆಸ್ತಿಯಲ್ಲಿ ರೈತರ ಸಾಲ ಮನ್ನಾ ಮಾಡಲಿ ಎಂಬ ಕುಮಾರಸ್ವಾಮಿ ಹೇಳಿಕೆಗೆ ಪ್ರತಿಕ್ರಿಯಿಸಿದ ಅವರು, ಕುಮಾರಸ್ವಾಮಿ, ಅವರ ಪುತ್ರ ಹಾಗೂ ಸಹೋದರರ ಆಸ್ತಿಯನ್ನೂ ಸೇರಿಸಿ ರೈತರ ಸಾಲ ಮನ್ನಾ ಮಾಡೋಣ ಎಂದರು.

ಬಿಡದಿ ರೈತರ ಉಪವಾಸ ಸತ್ಯಾಗ್ರಹದ ಕುರಿತು ಮಾತನಾಡಿದ ಸಚಿವರು, ರೈತರೊಂದಿಗೆ ಚರ್ಚಿಸಿ ಸಮಸ್ಯೆ ಪರಿಹರಿಸಲು ಕ್ರಮ ಕೈಗೊಳ್ಳಲಾಗುವುದು.

ಭೂಸ್ವಾಧೀನ ಪರಿಹಾರಕ್ಕೆ ನಕಲಿ ದಾಖಲೆ ಸೃಷ್ಟಿಸಿರುವ ಪ್ರಕರಣವನ್ನು ಸಿಐಡಿ ಅಥವಾ ಸಿಬಿಐಗೆ ವಹಿಸುವುದಾಗಿ ತಿಳಿಸಿದರು. ಈ ಪ್ರಕರಣದಲ್ಲಿ ಜೆಡಿಎಸ್‌ನವರೇ ನಕಲಿ ದಾಖಲೆ ಸೃಷ್ಟಿಸಿ ವಂಚಿಸಿದ್ದಾರೆ ಎಂದು ಆರೋಪಿಸಿದರು.

ವಿಪಕ್ಷ ನಾಯಕ ಆರ್.ಅಶೋಕ್ ತಮ್ಮನ್ನು 'ಜಂಪಿಂಗ್ ಸ್ಟಾರ್' ಎಂದು ಟೀಕಿಸಿರುವುದಕ್ಕೂ ಪ್ರತಿಕ್ರಿಯಿಸಿದ ಬಾಲಕೃಷ್ಣ, 'ನಾನು ಅಭಿವೃದ್ಧಿಗಾಗಿ ಜಂಪ್ ಮಾಡಿದ್ದೇನೆ. ಅಶೋಕಣ್ಣನಂತೆ ಲೇಜಿ ಸ್ಟಾರ್ ಮತ್ತು ಯೂಸ್‌ಲೆಸ್ ಸ್ಟಾರ್ ಅಲ್ಲ' ಎಂದು ವ್ಯಂಗ್ಯವಾಡಿದರು.



www.VIKRAMAVAHINI.com
|| ಕನ್ನಡ ದಿನಪತ್ರಿಕೆ ||
PRGI NO: KARKAN/2018/78481
ವಿಕ್ರಮ ವಾಹಿನಿ
ಸತ್ಯದ ಹಾದಿ । ಜನಪರ ದನಿ । ರಾಷ್ಟ್ರೀಯ ದೃಷ್ಟಿ

### ಸವಿ ವಾಹಿನಿ

ನೂರು ಗುರುಗಳು ಸೇರಿ ಕಲಿಸಲಾಗದ ಅದೆಷ್ಟೋ ವಿಚಾರಗಳನ್ನು ಸಮಯವೆಂಬ ಒಂದೇ ಒಂದು ಶಕ್ತಿ ಕಲಿಸಿ ಬಿಡುತ್ತದೆ.

### ದಿನ ಪಂಚಾಂಗ

ಸೆಪ್ಟಂಬರ್, 20-2026, ಭಾನುವಾರ ವರ್ಷ ಋತು,
ಭಾದ್ರಪದ ಮಾಸ, ಶುದ್ಧ ಪಕ್ಷ
ನವಮಿ ತಿಥಿ ಸಾ.4:04
ಪೂರ್ವಾಷಾಢ ನಕ್ಷತ್ರ ರಾ.4:05
ರಾಹುಕಾಲ ಸಾ 4:46-6:17
ಕೇದಾರ ವ್ರತ, ಭಾಗವತ ಸಪ್ತಾಹ ಪ್ರಾರಂಭ, ಯಡಿಯೂರು ಶಕ್ತಿಗಣಪತಿ ಉತ್ಸವ, ಮಾಸ್ವಿ ಜಗನ್ನಾಥ ಆರಾಧನೆ

### ಆಧ್ಯಾತ್ಮ

# ದೇಶಿ ಗೋವಿನ ತುಪ್ಪ ಮಾತ್ರವೇ ನಿಜವಾದ ತುಪ್ಪ



● ವಿಕ್ರಮ ವಾಹಿನಿ । ಗೋಕರ್ಣ

ಬದುಕಲು ನೀರು ಬೇಕು. ಆದರೆ ಬದುಕು ಸಾರ್ಥಕವಾಗಬೇಕಾದರೆ ಗೋವಿನ ತುಪ್ಪ ಬೇಕು. ಕ್ರಿಮಿ ಕೀಟಗಳ ಎತ್ತರದಿಂದ ಮೇಲೆದ್ದು ಅರಿವಿನ ಬದುಕನ್ನು ಕಟ್ಟಿಕೊಳ್ಳಲು ಗೋವಿನ ತುಪ್ಪದ ಪಾತ್ರ ಹಿರಿದಾಗಿದೆ ಎಂದು ಶ್ರೀರಾಮಚಂದ್ರಾಪುರ ಮಠದ ಜಗದ್ಗುರು ಶಂಕರಾಚಾರ್ಯ ಶ್ರೀಶ್ರೀ ರಾಘವೇಶ್ವರ ಭಾರತೀ ಮಹಾಸ್ವಾಮಿಗಳು ಹೇಳಿದರು.

ಗೋಕರ್ಣದ ಅಶೋಕೆಯ ಮೂಲಮಠದ ಪರಿಸರದಲ್ಲಿ ನಡೆಯುತ್ತಿರುವ 'ಅನ್ನಬ್ರಹ್ಮ ಚಾತುರ್ಮಾಸ್ಯ'ದ ಧರ್ಮಸಭೆಯಲ್ಲಿ 19.09.2026 ರಂದು 'ಅನ್ನಂ ಬ್ರಹ್ಮ' ಮಾಲಿಕೆಯಲ್ಲಿ ತುಪ್ಪದ ಕುರಿತಾಗಿ ಪ್ರವಚನ ಅನುಗ್ರಹಿಸಿದ ಶ್ರೀಗಳು, ಗೋವು ಸೃಷ್ಟಿಯ ಸಾರವಾದರೆ, ಹಾಲು ಗೋವಿನ ಸಾರ. ತುಪ್ಪ ಸಾರಗಳ ಸಾರ. ದಿನ ಕಳೆದಂತೆ ಪ್ರಪಂಚದ ಎಲ್ಲಾ ವಸ್ತುಗಳ ಗುಣ ನಾಶವಾಗುತ್ತಾ ಸಾಗುತ್ತದೆ. ಆದರೆ ಅದಕ್ಕೆ ವಿರುದ್ಧವಾಗಿ ತುಪ್ಪದ ಗುಣ ದಿನ ಕಳೆದಂತೆ ಹೆಚ್ಚಾಗುತ್ತಾ ಸಾಗುತ್ತದೆ. ಆಯುರ್ವೇದದಲ್ಲಿ ನೂರು ವರ್ಷಗಳ ಹಳೆಯ ತುಪ್ಪವನ್ನು ಮಹಾ ಔಷಧ ಎಂದು ಕರೆಯಲಾಗಿದೆ ಎಂದರು.

ದೇಶಿ ಗೋವಿನ ತುಪ್ಪ ಮಾತ್ರ ನಿಜವಾದ ತುಪ್ಪವಾಗಿದ್ದು, ೦2 ಅಲ್ಲದ ಹಾಲಿನಿಂದ ತಯಾರಿಸಿದ ತುಪ್ಪ ನಿಜವಾದ ತುಪ್ಪವಲ್ಲ. ಸುಶ್ರುತರು ಎಲ್ಲಾ ಜೀವಿಗಳಿಗೂ ಹಿತವಾದ ಆಹಾರಗಳ ಪಟ್ಟಿಯನ್ನು ಹೇಳುವಾಗ ನೀರಿನ ನಂತರತುಪ್ಪಕ್ಕೆ ಸ್ಥಾನವನ್ನು ನೀಡಿದ್ದು, ಇದು ತುಪ್ಪಕ್ಕಿರುವ ಪ್ರಾಮುಖ್ಯತೆಯನ್ನು ತಿಳಿಸುತ್ತದೆ. ಆದರೆ ಇಂದು ತುಪ್ಪವನ್ನು ತಿನ್ನಬೇಡಿ, ಅದು ಆರೋಗ್ಯಕ್ಕೆ ಹಾಳು ಎಂದು ಪ್ರಚುರಪಡಿಸಲಾಗಿದೆ ಎಂದು ಬೇಸರ ವ್ಯಕ್ತಪಡಿಸಿದರು.

ಆಹಾರದ ದೋಷಗಳನ್ನು ಕಳೆಯುವ ಶಕ್ತಿ ತುಪ್ಪಕ್ಕಿದೆ. ಯಜ್ಞಗಳ ಮೂಲಕ ದೇವರಿಗೆ ಸಮರ್ಪಣೆ ಮಾಡುವಾಗ

ಎಲ್ಲಾ ದ್ರವ್ಯಗಳಿಗೂ ತುಪ್ಪದ ಸಂಸರ್ಗ ಅತ್ಯಗತ್ಯ. ತುಪ್ಪವನ್ನು ಔಷಧದ ಜೊತೆ ಸೇರಿಸಿದಾಗಲೂ, ಔಷಧದ ಗುಣವನ್ನು ಹೊತ್ತು ತರುವ ಜೊತೆಗೆ ತನ್ನ ಗುಣವನ್ನು ಉಳಿಸಿಕೊಳ್ಳುವ ವಿಶೇಷ ಸಾಮರ್ಥ್ಯ ತುಪ್ಪಕ್ಕಿದೆ ಎಂದು ವಿವರಿಸಿದರು.

ಭಾರತ ಮಂಡಲದ ಚೆನ್ನೈ, ಹುಬ್ಬಳ್ಳಿ – ಧಾರವಾಡ, ಹಾವೇರಿ, ಯಲ್ಲಾಪುರ, ಚಿಕ್ಕಮಗಳೂರು, ಹಾಸನ ಹಾಗೂ ಕೇರಳ ವಲಯದ ಪರವಾಗಿ ಗಜಾನನ ಭಾಗ್ವತ್ ಕುಟುಂಬದವರು ಗುರುಭಿಕ್ಷಾಸೇವೆ ಸಮರ್ಪಿಸಿದರು. ಕೃಷ್ಣ ಕಳಂಜಿ ಹಾವೇರಿ, ಆರ್. ಜಿ ಭಟ್, ಡಾ. ಶಾರದಾ ಜಯಗೋವಿಂದ, ದಿನಪ್ರಧಾನರಾಗಿ ದತ್ತರಾಜ್ ಮಂಚಾಲೆ ದಂಪತಿಗಳು ಉಪಸ್ಥಿತರಿದ್ದರು.

ತುಪ್ಪದಿಂದಲೇ ಆಹಾರ ಸೇವನೆಯ ಆರಂಭವಾಗಬೇಕು ಎಂಬುದು ಆಯುರ್ವೇದದ ಅಭಿಮತವಾಗಿದ್ದು, ಇಂದು ಉಪ್ಪಿನಕಾಯಿಯಿಂದ ಊಟವನ್ನು ಆರಂಭಿಸುತ್ತಾರೆ. ಹಾಗಾದಲ್ಲಿ ಊಟದ ವ್ಯವಸ್ಥೆಯೇ ಬುಡಮೇಲಾದಂತೆ – ಶ್ರೀ ಶ್ರೀ ರಾಘವೇಶ್ವರ ಭಾರತೀ ಮಹಾಸ್ವಾಮಿಗಳು

# ಸಹಸ್ರ ಗಣಪತಿಯ ಸಂಗಮದಲ್ಲಿ ಧನುಷ್ಕೋಡಿಯ ದರ್ಶನ

**ಗೌರಿ-ಗಣೇಶ ಹಬ್ಬಕ್ಕೆ ವಿಶಿಷ್ಟ ಕಲಾತ್ಮಕ ಮೆರುಗು ನೀಡಿರುವ ಗಣೇಶ್-ಪ್ರಿಯಾ ದಂಪತಿಯ ಮನೆಯಲ್ಲಿ 1,000ಕ್ಕೂ ಅಧಿಕ ಗಣಪತಿ ಮೂರ್ತಿಗಳ ವೈಭವ. ಈ ಬಾರಿ ಧನುಷ್ಕೋಡಿ ಪರಿಕಲ್ಪನೆಯಲ್ಲಿ ರಾಮೇಶ್ವರಂ ದೇವಾಲಯ, ಪರಿಸರ ಹಾಗೂ ಬಾವಿಗಳ ಕಲಾತ್ಮಕ ಮರುಸೃಷ್ಟಿ, ಭಕ್ತಿ-ಕಲೆ-ಸೃಜನಶೀಲತೆಯ ಅಪೂರ್ವ ಸಂಗಮ.**


● ವಿಕ್ರಮ ವಾಹಿನಿ । ಬೆಂಗಳೂರು

ದಸರಾ ನವರಾತ್ರಿಯಲ್ಲಿ ಬೊಂಬೆ ಕೂರಿಸುವ ಸಂಪ್ರದಾಯ ಸಾಮಾನ್ಯ. ಆದರೆ ಗೌರಿ-ಗಣೇಶ ಹಬ್ಬದ ಸಂದರ್ಭದಲ್ಲಿ ಮನೆತುಂಬಾ ವಿವಿಧ ವಿನ್ಯಾಸಗಳ ಸಹಸ್ರಾರು ಗಣಪತಿ ಮೂರ್ತಿಗಳನ್ನು ಜೋಡಿಸಿ, ಭಕ್ತಿ, ಕಲೆ ಮತ್ತು ಸೃಜನಶೀಲತೆಯ ಅಪೂರ್ವ ಸಂಗಮವನ್ನು ಸೃಷ್ಟಿಸುವ ಅಪರೂಪದ ಪ್ರಯತ್ನವೊಂದು ಬೆಂಗಳೂರಿನ ರಮಣಶ್ರೀ ನಗರದಲ್ಲಿ ಗಮನ ಸೆಳೆಯುತ್ತಿದೆ. ಗಣೇಶ್ ಮತ್ತು ಪ್ರಿಯಾ ಅವರ ಮನೆಯಲ್ಲಿ ಅರಳುವ ಈ ಕಲಾ ಸಂಭ್ರಮವು ಕೇವಲ ಹಬ್ಬದ ಆಚರಣೆಯಾಗಿರದೆ, ಕುಟುಂಬದ ಸೃಜನಶೀಲತೆ, ಸಾಂಸ್ಕೃತಿಕ ಅಭಿರುಚಿ ಹಾಗೂ ಭಕ್ತಿಭಾವದ ಪ್ರತಿಬಿಂಬವಾಗಿ ಮೂಡಿಬರುತ್ತಿದೆ.

**ಮುಂಬೈಯಿಂದ ಬೆಂಗಳೂರಿಗೆ ಬೆಳೆದ ಪರಂಪರೆ**

ಗಣೇಶ್ ಮತ್ತು ಪ್ರಿಯಾ ಅವರ ಕುಟುಂಬದಲ್ಲಿ ಗಣೇಶೋತ್ಸವದ ಈ ವಿಶಿಷ್ಟ ಆಚರಣೆ 1993ರಲ್ಲಿ ಮುಂಬೈನಲ್ಲಿ ಆರಂಭವಾಯಿತು. ಆರಂಭಿಕ ವರ್ಷಗಳಲ್ಲಿ ಹೂವಿನ ಅಲಂಕಾರ, ಗಂಡಭೇರುಂಡ, ಆನೆಗಳು, ಕಲಾತ್ಮಕ ಆನೆಯ ಮುಖಗಳು, ಬೃಂದಾವನ ಹಾಗೂ ಶಿವನ ಮುಖದ ವರ್ಣಚಿತ್ರಗಳ ಮೂಲಕ ಹಬ್ಬವನ್ನು ಅರ್ಥಪೂರ್ಣವಾಗಿ ಆಚರಿಸಲಾಗುತ್ತಿತ್ತು.

2003ರಲ್ಲಿ ಮುಂಬೈನಿಂದ ಬೆಂಗಳೂರಿಗೆ ಸ್ಥಳಾಂತರಗೊಂಡ ಬಳಿಕ ಈ ಆಚರಣೆ ಮತ್ತಷ್ಟು ವಿಸ್ತಾರಗೊಂಡಿತು. ಪ್ರತಿವರ್ಷವೂ ವಿಭಿನ್ನ ಪರಿಕಲ್ಪನೆಯನ್ನು ಆಯ್ಕೆ ಮಾಡಿಕೊಂಡು ಅದಕ್ಕೆ ತಕ್ಕಂತೆ ಅಲಂಕಾರ ರೂಪಿಸುವುದು ಈ ಕುಟುಂಬದ ವಿಶೇಷತೆ. ಹೀಗಾಗಿ ಪ್ರತಿಯೊಂದು



ವರ್ಷದ ಗಣೇಶೋತ್ಸವವೂ ಹೊಸತನದೊಂದಿಗೆ ಮೂಡಿಬರುತ್ತಿದೆ.

ಹಿಂದಿನ ವರ್ಷಗಳಲ್ಲಿ ಹೆಲಿಕಾಪ್ಟರ್‌ನಿಂದ ಕಾಣುವ ಬಡಾವಣೆಯ ನೋಟ, ಗುಹೆಗಳು, ರಥಗಳು, ಅರಣ್ಯ ಪರಿಸರ, ಧಾನ್ಯಗಳಿಂದ ರೂಪಿಸಿದ ಅಲಂಕಾರ, ಕುಂಭಮೇಳ ಹಾಗೂ ವಾಸುದೇವ ಕೃಷ್ಣನನ್ನು ಹೊತ್ತೊಯ್ಯುವ ದೃಶ್ಯ ಸೇರಿದಂತೆ ಹಲವು ವೈವಿಧ್ಯಮಯ ಪರಿಕಲ್ಪನೆಗಳು ಇಲ್ಲಿ ಸಾಕಾರಗೊಂಡಿವೆ. ಇವು ವೀಕ್ಷಕರ ಮೆಚ್ಚುಗೆಗೂ ಪಾತ್ರವಾಗಿವೆ.

**ಧನುಷ್ಕೋಡಿಯ ಸೊಬಗಿನಲ್ಲಿ ಈ ಬಾರಿಯ ಗಣೇಶೋತ್ಸವ:** ಈ ವರ್ಷದ ಅಲಂಕಾರಕ್ಕೆ ತಮಿಳುನಾಡಿನ ರಾಮೇಶ್ವರಂ ಪ್ರವಾಸ ಸ್ಫೂರ್ತಿಯಾಗಿದೆ. ಕುಟುಂಬದ ಸದಸ್ಯರು



ರಾಮೇಶ್ವರಕ್ಕೆ ಭೇಟಿ ನೀಡಿದ ಸಂದರ್ಭದಲ್ಲಿ ಕಂಡ ಪರಿಸರ ಮತ್ತು ಅಲ್ಲಿನ ಐತಿಹಾಸಿಕ ಹಿನ್ನೆಲೆಯಿಂದ ಪ್ರೇರಣೆ ಪಡೆದು, 'ಧನುಷ್ಕೋಡಿ' ಪರಿಕಲ್ಪನೆಯನ್ನು ರೂಪಿಸಲಾಗಿದೆ.

ರಾಮೇಶ್ವರಂ ದೇವಾಲಯ, ಅದರ ಸುತ್ತಮುತ್ತಲಿನ ಪರಿಸರ ಹಾಗೂ ಬಾವಿಗಳ ದೃಶ್ಯಗಳನ್ನು ಕಲಾತ್ಮಕವಾಗಿ ಮರುಸೃಷ್ಟಿಸುವ ಮೂಲಕ ಮನೆಯೊಳಗೆ ಧನುಷ್ಕೋಡಿಯ ವಿಶಿಷ್ಟ ಅನುಭವವನ್ನು ಮೂಡಿಸಲಾಗಿದೆ. ಗಣೇಶನ ಆರಾಧನೆಯೊಂದಿಗೆ ಪ್ರವಾಸದ ನೆನಪುಗಳು ಮತ್ತು ಸೃಜನಶೀಲ ಕಲ್ಪನೆಗಳು ಬೆಸೆದುಕೊಂಡಿರುವುದು ಈ ವರ್ಷದ ಅಲಂಕಾರದ ವಿಶೇಷ ಆಕರ್ಷಣೆ.

**ಸಹಸ್ರ ಗಣಪತಿಗಳ ವೈವಿಧ್ಯಮಯ ಲೋಕ**

ಈ ಮನೆಯಲ್ಲಿ ಸುಮಾರು 1,000ಕ್ಕೂ ಹೆಚ್ಚು ಗಣೇಶನ ಮೂರ್ತಿಗಳನ್ನು ಸಂಗ್ರಹಿಸಿ ಪ್ರದರ್ಶಿಸಲಾಗಿದೆ. ಚಿನ್ನ, ಬೆಳ್ಳಿ, ವಿವಿಧ ಲೋಹಗಳು, ಮಣ್ಣು ಹಾಗೂ ಪರಿಸರ ಸ್ನೇಹಿ ವಸ್ತುಗಳಿಂದ ನಿರ್ಮಿಸಲಾದ ಗಣಪತಿ ಮೂರ್ತಿಗಳು ತಮ್ಮ ವಿನ್ಯಾಸ ಮತ್ತು ವೈವಿಧ್ಯದಿಂದ ಗಮನ ಸೆಳೆಯುತ್ತವೆ.

ವಿವಿಧ ಬಗೆಯ ದೀಪಗಳ ಸಂಗ್ರಹವೂ ಇಲ್ಲಿನ ಮತ್ತೊಂದು ಆಕರ್ಷಣೆ. ಸಂಜೆ ದೀಪಗಳನ್ನು ಬೆಳಗಿಸಿದಾಗ ಗಣಪತಿ ಮೂರ್ತಿಗಳ ಸಾಲುಗಳು ಹಾಗೂ ಅಲಂಕಾರಗಳು ಮತ್ತಷ್ಟು ಕಂಗೊಳಿಸಿ, ಭಕ್ತಿಭಾವದ ವಾತಾವರಣವನ್ನು ಸೃಷ್ಟಿಸುತ್ತವೆ.

**ಕುಟುಂಬದ ಆಚರಣೆಯಾಗಿ ಆರಂಭವಾಗಿ, ಬಾಂಧವ್ಯದ ಹಬ್ಬವಾಗಿ ವಿಸ್ತಾರ:** ಈ ವೈಭವದ ಹಿಂದೆ 'ಗಣಪ್ರಿಯ' ಕುಟುಂಬದ ಪ್ರತಿಯೊಬ್ಬ ಸದಸ್ಯರ ಶ್ರಮ ಮತ್ತು ಆಸಕ್ತಿಯಿದೆ. ಅಲಂಕಾರ ರೂಪಿಸುವುದರಿಂದ ಹಿಡಿದು ಮೂರ್ತಿಗಳನ್ನು ಜೋಡಿಸುವವರೆಗೆ ಕುಟುಂಬದ ಸದಸ್ಯರು ಉತ್ಸಾಹದಿಂದ ಪಾಲ್ಗೊಳ್ಳುತ್ತಾರೆ. ಜತೆಗೆ ನೆರೆಹೊರೆಯವರು ಮತ್ತು ಮಕ್ಕಳು ಸಹ ಸಂತೋಷದಿಂದ ಬಂದು ಅಲಂಕಾರ ಕಾರ್ಯದಲ್ಲಿ ಕೈಜೋಡಿಸುತ್ತಾರೆ.

ಹೀಗೆ ಗಣೇಶೋತ್ಸವವು ಕೇವಲ ಧಾರ್ಮಿಕ ಆಚರಣೆಯಾಗಿ ಸೀಮಿತವಾಗದೆ, ಕುಟುಂಬದ ಸದಸ್ಯರು, ಸ್ನೇಹಿತರು ಹಾಗೂ ನೆರೆಹೊರೆಯವರನ್ನು ಒಗ್ಗೂಡಿಸುವ ಬಾಂಧವ್ಯದ ಹಬ್ಬವಾಗಿ ರೂಪುಗೊಂಡಿದೆ. ಭಕ್ತಿ, ಕಲೆ, ಸೃಜನಶೀಲತೆ ಮತ್ತು ಸಾಮಾಜಿಕ ಸಾಮರಸ್ಯವನ್ನು ಒಂದೆಡೆ ಬೆಸೆಯುವ ಗಣೇಶ್-ಪ್ರಿಯಾ ಕುಟುಂಬದ ಈ ಪ್ರಯತ್ನವು ಹಬ್ಬದ ಆಚರಣೆಗೆ ಹೊಸ ಆಯಾಮವನ್ನು ನೀಡುತ್ತಿದೆ.

# 'ರೂ 32,611 ಕೋಟಿ ಕರಾವಳಿ ಪ್ಯಾಕೇಜ್ ಬರಿ ಬಾಯಿಮಾತಿನ ಘೋಷಣೆ'

● ವಿಕ್ರಮ ವಾಹಿನಿ । ಬೆಂಗಳೂರು

ಮಂಗಳೂರಿನಲ್ಲಿ ನಡೆದ ರಾಜ್ಯ ಸಚಿವ ಸಂಪುಟ ಸಭೆಯಲ್ಲಿ ಕರಾವಳಿ ಭಾಗಕ್ಕೆ ಘೋಷಿಸಿರುವ 32,611 ಕೋಟಿ ಅಭಿವೃದ್ಧಿ ಪ್ಯಾಕೇಜ್‌ಗೆ ಅಗತ್ಯ ಅನುದಾನದ ಸ್ಪಷ್ಟತೆ ಇಲ್ಲ. ಇದು ಸರ್ಕಾರದ ಆರ್ಥಿಕ ಸ್ಥಿತಿಯನ್ನು ಮರೆಮಾಚುವ ಕಣ್ಣೊರೆಸುವ ತಂತ್ರವಾಗಿದೆ ಎಂದು ವಿಧಾನ ಪರಿಷತ್ ವಿರೋಧ ಪಕ್ಷದ ಮುಖ್ಯ ಸಚೇತಕ ಎನ್. ರವಿಕುಮಾರ್ ಆರೋಪಿಸಿದ್ದಾರೆ.



ಈ ಕುರಿತು ಪತ್ರಿಕಾ ಪ್ರಕಟಣೆ ಬಿಡುಗಡೆ ಮಾಡಿರುವ ಅವರು, ಬರ ಪರಿಹಾರಕ್ಕಾಗಿ ಸರ್ಕಾರ ಆದೇಶ ಹೊರಡಿಸಿ ತಿಂಗಳುಗಳಾದರೂ ರೈತರ ಖಾತೆಗಳಿಗೆ ಪರಿಹಾರದ ಹಣ ಜಮೆಯಾಗಿಲ್ಲ ಎಂದು ಟೀಕಿಸಿದ್ದಾರೆ. ರೈತರಿಗೆ ಪರಿಹಾರ ನೀಡಲು ಹಣದ ಕೊರತೆ ಎದುರಿಸುತ್ತಿರುವ ಸರ್ಕಾರವು ಕರಾವಳಿ ಭಾಗಕ್ಕೆ ರೂ 32,611 ಕೋಟಿ ಪ್ಯಾಕೇಜ್ ಘೋಷಿಸಿರುವುದು ಜನರಿಗೆ ಮಾಡಿರುವ ವಂಚನೆ ಎಂದು ಅವರು ದೂರಿದ್ದಾರೆ.

ರಾಜ್ಯದ ರಾಜಸ್ವ ಕೊರತೆ ರೂ 22,957 ಕೋಟಿಯಿಂದ ರೂ 25,449 ಕೋಟಿಗೆ ಹಾಗೂ ವಿತ್ತೀಯ ಕೊರತೆ ರೂ 91,261 ಕೋಟಿಯಿಂದ ರೂ 97,448 ಕೋಟಿಗೆ ಏರಿಕೆಯಾಗಿದೆ ಎಂದು ರವಿಕುಮಾರ್ ಹೇಳಿದ್ದಾರೆ. ವಾರ್ಷಿಕ ಸಾಲದ ಪ್ರಮಾಣವೂ ರೂ 1.16 ಲಕ್ಷ ಕೋಟಿಯಿಂದ ರೂ 1.32 ಲಕ್ಷ ಕೋಟಿಗೂ ಅಧಿಕವಾಗುವ ಸಾಧ್ಯತೆ ಇದೆ ಎಂದು ಅವರು ಉಲ್ಲೇಖಿಸಿದ್ದಾರೆ. ನೀರಾವರಿ, ಲೋಕೋಪಯೋಗಿ ಹಾಗೂ ಗ್ರಾಮೀಣಾಭಿವೃದ್ಧಿ ಇಲಾಖೆಗಳ ಕಾಮಗಾರಿಗಳಿಗೆ ಸಂಬಂಧಿಸಿದಂತೆ ರೂ 25 ಸಾವಿರದಿಂದ ರೂ 30 ಸಾವಿರ ಕೋಟಿಗೂ ಅಧಿಕ ಮೊತ್ತದ ಬಿಲ್‌ಗಳು ಬಾಕಿ ಉಳಿದಿವೆ ಎಂದು ಆರೋಪಿಸಿದ್ದಾರೆ.

ಗ್ರಾಮೀಣ ಮೂಲಸೌಕರ್ಯಕ್ಕೆ ರೂ 16 ಸಾವಿರ ಕೋಟಿ ಘೋಷಿಸಿರುವುದರ ಬಗ್ಗೆಯೂ ಪ್ರಶ್ನಿಸಿರುವ ಅವರು, ಈಗಾಗಲೇ ಪೂರ್ಣಗೊಂಡಿರುವ ಕಾಮಗಾರಿಗಳ ಬಿಲ್‌ಗಳನ್ನೇ ಪಾವತಿಸದೆ ಹೊಸ ಯೋಜನೆಗಳಿಗೆ ಹಣ ಎಲ್ಲಿಂದ ಬರುತ್ತದೆ ಎಂದು ಪ್ರಶ್ನಿಸಿದ್ದಾರೆ. ಕರಾವಳಿ ಅಭಿವೃದ್ಧಿ ಪ್ರಾಧಿಕಾರಕ್ಕೆ ಹಿಂದಿನ ಬಜೆಟ್‌ನಲ್ಲಿ ನಿಗದಿಪಡಿಸಿದ್ದ ಅನುದಾನವೂ ಸಮರ್ಪಕವಾಗಿ ಬಿಡುಗಡೆಯಾಗಿಲ್ಲ ಎಂದು ಹೇಳಿದ್ದಾರೆ.

ತುಳು ಭಾಷೆಗೆ ಎರಡನೇ ಅಧಿಕೃತ ಭಾಷೆ ಮಾನ್ಯತೆ ನೀಡಿರುವುದನ್ನು ಸ್ವಾಗತಿಸಿರುವ ರವಿಕುಮಾರ್, ಇದಕ್ಕೆ ಅಗತ್ಯವಾದ ಶಾಸನಬದ್ಧ ಪ್ರಕ್ರಿಯೆ, ಆಡಳಿತಾತ್ಮಕ ರೂಪುರೇಷೆ ಹಾಗೂ ಹಣಕಾಸಿನ ಹಂಚಿಕೆಯ ಬಗ್ಗೆ ಸರ್ಕಾರ ಸ್ಪಷ್ಟಪಡಿಸಬೇಕು ಎಂದು ಆಗ್ರಹಿಸಿದ್ದಾರೆ. ಆಳಸಮುದ್ರ ಮೀನುಗಾರರಿಗೆ ಡೀಸೆಲ್ ಸಬ್ಸಿಡಿ, ಕಡಲ ಕೊರೆತ ತಡೆ ಹಾಗೂ ಬಂದರುಗಳ ಹೂಳೆತ್ತುವಿಕೆಗೆ ಅಗತ್ಯ ಅನುದಾನ ಕಲ್ಪಿಸುವ ಬಗ್ಗೆಯೂ ಸ್ಪಷ್ಟ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದ್ದಾರೆ.

ಮಂಗಳೂರಿನಲ್ಲಿ ಘೋಷಿಸಿರುವ ರೂ 32,611 ಕೋಟಿ ಪ್ಯಾಕೇಜ್‌ಗೆ ಹಣಕಾಸಿನ ಮೂಲವೇನು, ಪ್ರಸಕ್ತ ಬಜೆಟ್‌ನಲ್ಲಿ ಎಷ್ಟು ಅನುದಾನ ಮೀಸಲಿಡಲಾಗಿದೆ ಹಾಗೂ ಯಾವ ಇಲಾಖೆಗಳ ಮೂಲಕ ಹಣ ಬಿಡುಗಡೆ ಮಾಡಲಾಗುತ್ತದೆ ಎಂಬುದನ್ನು ಸರ್ಕಾರ ಬಹಿರಂಗಪಡಿಸಬೇಕು. ಈ ಕುರಿತು ತಕ್ಷಣ ಆರ್ಥಿಕ ಶ್ವೇತಪತ್ರ ಹೊರಡಿಸಬೇಕು ಮತ್ತು ಈಗಾಗಲೇ ಬಾಕಿ ಇರುವ ಕಾಮಗಾರಿಗಳ ಬಿಲ್‌ಗಳನ್ನು ಪಾವತಿಸಿದ ಬಳಿಕವೇ ಹೊಸ ಯೋಜನೆಗಳನ್ನು ಕೈಗೆತ್ತಿಕೊಳ್ಳಬೇಕು ಎಂದು ರವಿಕುಮಾರ್ ಆಗ್ರಹಿಸಿದ್ದಾರೆ.

## ಶೈಕ್ಷಣಿಕ ಪ್ರವಾಸದಲ್ಲಿ ಸೆಲ್ಫೀ, ರೀಲ್ಸ್‌ಗೆ ಬ್ರೇಕ್

1ನೇ ಪುಟದಿಂದ

ಅನುಮೋದಿತ ಸ್ಥಳಗಳನ್ನು ಹೊರತುಪಡಿಸಿ ಬೇರೆಡೆಗೆ ತೆರಳುವಂತಿಲ್ಲ ಎಂದು ಸುತ್ತೋಲೆಯಲ್ಲಿ ತಿಳಿಸಲಾಗಿದೆ.

ಪ್ರವಾಸ ತಂಡದಲ್ಲಿ ಗರಿಷ್ಠ ನಾಲ್ವರು ಅಧ್ಯಾಪಕರು ಇರಬೇಕು. ಇಬ್ಬರು ಮಹಿಳಾ ಅಧ್ಯಾಪಕಿಯರು ಕಡ್ಡಾಯವಾಗಿ ತೆರಳಬೇಕು. ಒಬ್ಬ ಡಿ ಗ್ರೂಪ್ ನೌಕರರನ್ನು ಕರೆದೊಯ್ಯಲು ಅವಕಾಶವಿದ್ದು, ಕನಿಷ್ಠ ಒಬ್ಬ ಖಾಯಂ ಉಪನ್ಯಾಸಕ ವಿದ್ಯಾರ್ಥಿಗಳೊಂದಿಗೆ ಇರಬೇಕು. ಅತಿಥಿ ಉಪನ್ಯಾಸಕರ ನೇತೃತ್ವದಲ್ಲಿ ಪ್ರವಾಸ ನಡೆಸುವಂತಿಲ್ಲ.

ಪ್ರಯಾಣದ ದಿನ ಸೇರಿದಂತೆ ಗರಿಷ್ಠ ಐದು ದಿನಗಳೊಳಗೆ ಪ್ರವಾಸ ಪೂರ್ಣಗೊಳಿಸಬೇಕು. ಮಳೆಗಾಲದಲ್ಲಿ ಪ್ರವಾಸಕ್ಕೆ ಅನುಮತಿ ಇರುವುದಿಲ್ಲ. ನೀರಿನ ಹರಿವು, ದಟ್ಟ ಕಾಡು ಹಾಗೂ ಕಡಿದಾದ ಬೆಟ್ಟಗಳಿರುವ ಸ್ಥಳಗಳಿಗೆ ತೆರಳುವಾಗ ಮುಂಚಿತವಾಗಿ ಸುರಕ್ಷತಾ ಕ್ರಮ ಕೈಗೊಳ್ಳಬೇಕು. ಚಾರಣ ಅಥವಾ ಈಜಿಗೆ ನುರಿತ ವ್ಯಕ್ತಿಗಳಿದ್ದಲ್ಲಿ ಮಾತ್ರ ಸ್ಥಳೀಯರಿಂದ ಸುರಕ್ಷತಾ ಮಾಹಿತಿ ಪಡೆದು ಅವಕಾಶ ನೀಡಬೇಕು.

ಪ್ರವಾಸದ ಮಾಹಿತಿಯನ್ನು ಮುಂಚಿತವಾಗಿ ಸ್ಥಳೀಯ ಪೊಲೀಸ್ ಠಾಣೆಗೆ ನೀಡಬೇಕು. ನಿಯಮ ಉಲ್ಲಂಘಿಸಿ ಅಧ್ಯಾಪಕರು ಅಥವಾ ಸಿಬ್ಬಂದಿ ಪ್ರವಾಸಕ್ಕೆ ತೆರಳಿದರೆ ಅವರ ಜವಾಬ್ದಾರಿಯಲ್ಲಿಯೇ ಕ್ರಮ ಕೈಗೊಳ್ಳಲಾಗುವುದು ಎಂದು ಇಲಾಖೆ ಸ್ಪಷ್ಟಪಡಿಸಿದೆ.

ಇಲಾಖೆಯ ಸೂಚನೆಯನ್ನು ಸ್ವಾಗತಿಸಿರುವ ಕೆ.ಆರ್.ಪುರ ಪ್ರಥಮ ದರ್ಜೆ ಕಾಲೇಜಿನ ವಿದ್ಯಾರ್ಥಿ ಮಂಜುನಾಥ್, ಸುರಕ್ಷಿತ ಪ್ರವಾಸಿ ತಾಣಗಳಲ್ಲಿ ಸೆಲ್ಫೀ ತೆಗೆದುಕೊಳ್ಳುವುದಕ್ಕೆ ಸಂಪೂರ್ಣ ನಿಬರ್ಂಧ ವಿಧಿಸುವ ಅಗತ್ಯವೇನು ಎಂದು ಪ್ರಶ್ನಿಸಿದ್ದಾರೆ.

ಪ್ರವಾಸದ ಪ್ರಸ್ತಾವನೆಯನ್ನು ಕನಿಷ್ಠ 15 ದಿನಗಳ ಮುಂಚಿತವಾಗಿ ಇಲಾಖೆಗೆ ಸಲ್ಲಿಸಿ, ಪ್ರವಾಸದ ದಿನಾಂಕ, ಸ್ಥಳ, ವಿದ್ಯಾರ್ಥಿಗಳು ಮತ್ತು ಅಧ್ಯಾಪಕರ ವಿವರಗಳೊಂದಿಗೆ ಅಗತ್ಯ ದಾಖಲೆಗಳನ್ನು ಒದಗಿಸಬೇಕು.

## ಕಸ್ತೂರಿರಂಗನ್ ವರದಿ ಜಾರಿಗೆ ಒಕ್ಕೊರಲ ವಿರೋಧ

1ನೇ ಪುಟದಿಂದ

"ಶಿವಕುಮಾರ್ ಎಂದರೆ ಕಠೋರ ಎನ್ನುವ ಭಾವನೆ ಜನರಲ್ಲಿತ್ತು ಆದರೆ ಅವರು ಜನರ ನಡುವೆ ಬೆರೆಯುವುದು ನೋಡಿ ಅವರ ಸರಳತೆ ನಮಗೆಲ್ಲಾ ಅರ್ಥವಾಗಿದೆ. ಅಭಿಪ್ರಾಯ ಬದಲಾವಣೆಯಾಗಿದೆ" ಎಂದರು.

ಶಾಸಕ ಬೇಳೂರು ಗೋಪಾಲಕೃಷ್ಣ ಮಾತನಾಡಿ, "ಕಾಡುಕೋಣ, ಆನೆ, ಕೋತಿ, ಕೊಳೆರೋಗ, ಎಲೆಚುಕ್ಕೆ ರೋಗ ಜೊತೆಗೆ ಈ ಕಸ್ತೂರಿ ರಂಗನ್ ವರದಿ. ನಮ್ಮ ಭಾಗದ 457 ಹಳ್ಳಿಗಳು ಈ ವರದಿಯಲ್ಲಿ ಸೇರಿಕೊಂಡಿವೆ. ಜನರ ಆತಂಕವನ್ನು ಎಲ್ಲರೂ ಸೇರಿ ದೂರ ಮಾಡೋಣ" ಎಂದರು.

## 'ಮತ ಹಾಕುವುದಿಲ್ಲ' ಎಂದವರಿಗೆ ಸಿಂಧಿಯಾ ತಪರಾಕಿ

● ವಿಕ್ರಮ ವಾಹಿನಿ । ಗುಣ (ಮಧ್ಯಪ್ರದೇಶ)

ರಸ್ತೆ ಸಮಸ್ಯೆ ಬಗೆಹರಿಯದಿದ್ದರೆ ಮುಂದಿನ ಚುನಾವಣೆಯಲ್ಲಿ ಮತ ಹಾಕುವುದಿಲ್ಲ ಎಂದು ನಿವಾಸಿಗಳು ಎಚ್ಚರಿಕೆ ನೀಡಿದ್ದಕ್ಕೆ ಕೇಂದ್ರ ಸಚಿವ ಜ್ಯೋತಿರಾದಿತ್ಯ ಸಿಂಧಿಯಾ ಅಸಮಾಧಾನ ವ್ಯಕ್ತಪಡಿಸಿದ ಘಟನೆ ಮಧ್ಯಪ್ರದೇಶದ ಗುಣ ಜಿಲ್ಲೆಯಲ್ಲಿ ನಡೆದಿದೆ.



ಗುಲಾಬ್‌ಗಂಜ್ ಪ್ರದೇಶಕ್ಕೆ ಭೇಟಿ ನೀಡಿದ್ದ ಸಿಂಧಿಯಾ ಅವರನ್ನು ಸ್ಥಳೀಯ ನಿವಾಸಿಗಳು ಭೇಟಿಯಾಗಿ ಹದಗೆಟ್ಟ ರಸ್ತೆಗಳ ಸಮಸ್ಯೆ ಕುರಿತು ಮನವಿ ಸಲ್ಲಿಸಿದರು.

ಈ ವೇಳೆ, ಸಮಸ್ಯೆ ಪರಿಹರಿಸದಿದ್ದರೆ ಇನ್ನು ಮುಂದೆ ಮತ ಹಾಕುವುದಿಲ್ಲ ಎಂದು ಕೆಲವರು ಹೇಳಿದರು. ಇದಕ್ಕೆ ಪ್ರತಿಕ್ರಿಯಿಸಿದ ಸಿಂಧಿಯಾ, "ನನ್ನ ಮುಂದೆ ಇಂಥ ಭಾಷೆ ಬಳಸಬೇಡಿ" ಎಂದು ತೀವ್ರವಾಗಿ ಹೇಳಿದರು.

ಇದರಿಂದ ಸ್ಥಳದಲ್ಲಿ ಕೆಲಕಾಲ ಉದ್ವಿಗ್ನ ವಾತಾವರಣ ನಿರ್ಮಾಣವಾಯಿತು.

ಬಳಿಕ ನಿವಾಸಿಗಳ ಅಹವಾಲುಗಳನ್ನು ಆಲಿಸಿದ ಸಿಂಧಿಯಾ, ರಸ್ತೆ ಸಮಸ್ಯೆಯನ್ನು ಗಂಭೀರವಾಗಿ ಪರಿಗಣಿಸಿ ಪರಿಹಾರಕ್ಕೆ ಅಗತ್ಯ ಕ್ರಮ ಕೈಗೊಳ್ಳುವ ಭರವಸೆ ನೀಡಿದರು.

ಘಟನೆಯ ವಿಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿದ್ದು, ಸಿಂಧಿಯಾ ಅವರ ಪ್ರತಿಕ್ರಿಯೆ ಕುರಿತು ಚರ್ಚೆ ನಡೆಯುತ್ತಿದೆ.

# ರೈತರ ಬದುಕು ಉಳಿಸಲು ನಮ್ಮ ಸರ್ಕಾರ ಕೆಲಸ ಮಾಡಲಿದೆ: ಡಿ.ಕೆ. ಶಿವಕುಮಾರ್ ಭರವಸೆ

● ವಿಕ್ರಮ ವಾಹಿನಿ । ಬಾಳೆಹೊನ್ನೂರು

"ಕಸ್ತೂರಿ ರಂಗನ್ ವರದಿ ಸೇರಿದಂತೆ ರೈತರ ಬದುಕು ಉಳಿಸಲು ನಮ್ಮ ಸರ್ಕಾರ ಕೆಲಸ ಮಾಡಲಿದೆ. ಪರಿಸರ ಸೂಕ್ಷ್ಮ ವಲಯ ಸೇರಿದಂತೆ ಈ ಭಾಗದ ರೈತರ ಸಮಸ್ಯೆ ಬಗ್ಗೆ ಗಮನ ಸೆಳೆದಿದ್ದೀರಿ, ನನ್ನ ಕೈಲಾದ ಮಟ್ಟಿಗೆ ನಾನು ನಿಮಗೆ ಸಹಾಯ ಮಾಡುವೆ. ರಾಜ್ಯದ ಹಿತಕ್ಕಾಗಿ ಅಗತ್ಯವಿರುವ ಕಾನೂನು ತಿದ್ದುಪಡಿ ಮಾಡುವ ಪ್ರಯತ್ನ ಮಾಡುವೆ" ಎಂದು ಸಿಎಂ ಡಿ ಕೆ ಶಿವಕುಮಾರ್ ಅವರು ಭರವಸೆ ನೀಡಿದರು.

ಚಿಕ್ಕಮಗಳೂರು ಜಿಲ್ಲೆಯ ಬಾಳೆಹೊನ್ನೂರಿನಲ್ಲಿ ಶನಿವಾರ ನಡೆದ ಕಸ್ತೂರಿ ರಂಗನ್ ವರದಿ ಕುರಿತ ಸಾರ್ವಜನಿಕ ಸಭೆಯಲ್ಲಿ ಸಿಎಂ ಡಿ ಕೆ ಶಿವಕುಮಾರ್ ಅವರು ಮಾತನಾಡಿದರು.

"ನಿಮ್ಮ ರೈತರ ಮುಖಂಡರು, ಸಂಘಟನೆಗಳು ಈ ವಿಚಾರದಲ್ಲಿ ನನಗೆ ಅರಿವು ಮೂಡಿಸಿದ್ದೀರಿ. ಈ ವಿಚಾರಗಳನ್ನು ಬಿಡಿಸಿ ಹೇಳಿದ್ದೀರಿ. ಇದಕ್ಕೆ ಪರಿಹಾರ ನೀಡಲು, ತೀರ್ಮಾನ ಮಾಡಿ ನಿಮ್ಮ ಮುಂದೆ ಬಂದಿರುವೆ. ಉನ್ನತ ಮಟ್ಟದ ಸಮಿತಿ ರಚನೆ, ಕೇರಳ ಮಾದರಿಯಲ್ಲಿ ಭೌತಿಕ ಸಮೀಕ್ಷೆ ಸೇರಿದಂತೆ ನೀವು ಅನೇಕ ಸಲಹೆ ನೀಡಿದ್ದೀರಿ" ಎಂದು ತಿಳಿಸಿದರು.

"ಈ ಸಭೆಗೆ ಮೂಲ ಕಾರಣ ನಿಮ್ಮ ಶಾಸಕರು ಹಾಗೂ ಜಿಲ್ಲಾ ಮಂತ್ರಿಗಳು. ವಿರೋಧ ಪಕ್ಷದ ಸ್ನೇಹಿತರು ಅಧಿವೇಶನದಲ್ಲಿ ಚರ್ಚೆಗೆ ಅವಕಾಶ ನೀಡಲಿಲ್ಲ. ಹೀಗಾಗಿ ಶಾಸಕರ ಜೊತೆ ಚರ್ಚೆ ಮಾಡಿದೆ. ಆಗ ಕಸ್ತೂರಿ ರಂಗನ್ ವರದಿ ಬಗ್ಗೆ ಪ್ರಸ್ತಾಪ ಮಾಡಿದರು.

ಹೀಗಾಗಿ ಜನರು ಹಾಗೂ ಜನಪ್ರತಿನಿಧಿಗಳ ಅಭಿಪ್ರಾಯ ಪಡೆದು ರೈತರ ಬದುಕು ಉಳಿಸಲು ವಿಶೇಷ ಅಧಿವೇಶನ ಕರೆಯಲಾಗಿದೆ. ಈ ಅಧಿವೇಶನದಲ್ಲಿ ನಾನು ತೀರ್ಮಾನಕ್ಕೆ ಬರುವ ಮುನ್ನ, ನಿಮ್ಮ ಅಭಿಪ್ರಾಯ



ಸಿಎಂ ಡಿ ಕೆ ಶಿವಕುಮಾರ್ ಅವರು ಚಿಕ್ಕಮಗಳೂರು ಜಿಲ್ಲೆಯ ಬಾಳೆಹೊನ್ನೂರಿನ ಶ್ರೀ ಜಗದ್ಗುರು ರಂಭಾಪುರಿ ವೀರಸಿಂಹಾಸನ ಮಹಾಸಂಸ್ಥಾನ ಪೀಠದ ಜೀರ್ಣೋದ್ಧಾರ ಭೂಮಿ ಪೂಜೆ ಕಾರ್ಯಕ್ರಮವನ್ನು ಶನಿವಾರ ನೆರವೇರಿಸಿದರು. ರಂಭಾಪುರಿ ಜಗದ್ಗುರು ಶ್ರೀ ವೀರಸೋಮೇಶ್ವರ ಶಿವಾಚಾರ್ಯ ಸ್ವಾಮೀಜಿಯವರು, ಶಾಸಕರಾದ ಟಿ ಡಿ ರಾಜೇಗೌಡ, ಹೆಚ್ ಡಿ ತಮ್ಮಯ್ಯ ಮತ್ತಿತರರು ಉಪಸ್ಥಿತರಿದ್ದರು.

ಸಂಗ್ರಹಿಸಲು ಬಂದಿರುವೆ. ನನ್ನ ಕಷ್ಟಕಾಲದಲ್ಲಿ ನೀವು ಬೆನ್ನಿಗೆ ನಿಂತಿದ್ದೀರಿ.

ನಮಗೆ ಅಧಿಕಾರ ಕೊಟ್ಟು ಶಕ್ತಿ ನೀಡಿದ್ದೀರಿ. ದೇವರು ಕೊಟ್ಟಿರುವ ಅವಕಾಶದಲ್ಲಿ ನಿಮ್ಮ ಸೇವೆಗೆ ಸಂಕಲ್ಪ ಮಾಡಿದ್ದೇನೆ" ಎಂದು ಹೇಳಿದರು.

"ನಮ್ಮ ಹಿಂದಿನ ಸರ್ಕಾರಗಳು ಉಳುವವನಿಗೆ ಭೂಮಿ, ಬಗರ್ ಹುಕುಂ ಜಾರಿಗೆ ತಂದಿವೆ. ಈಗ ಮುಂದಿನ ದಿನಗಳಲ್ಲಿ ಬಾಕಿ ಇರುವ ಅರ್ಜಿ ವಿಲೇವಾರಿಗೆ ಕ್ರಮ ಕೈಗೊಳ್ಳುತ್ತೇವೆ. ಅರಣ್ಯ ಇಲಾಖೆ ಅಧಿಕಾರಿಗಳಿಗೆ ಸೂಚನೆ ನೀಡಿದ್ದು, ರೈತರು ಈಗಾಗಲೇ ಉಳುಮೆ ಮಾಡುತ್ತಿರುವ ಜಮೀನನ್ನು ಕಾಪಾಡಿಕೊಳ್ಳಿ, ಹೊಸದಾಗಿ ಯಾರೂ ಒತ್ತುವರಿ ಮಾಡಬೇಡಿ.

ಮಾಡಿದರೆ ನಾವು ಅವಕಾಶ ನೀಡಲು ಆಗುವುದಿಲ್ಲ. ರೈತರಿಗೆ ಯಾವುದೇ ರೀತಿ ತೊಂದರೆ ಕೊಡಬಾರದು ಎಂದು ಸೂಚಿರುವೆ. ಮುಂದಿನ ದಿನಗಳಲ್ಲಿ ನಿಮಗೆ ರಕ್ಷಣೆ ನೀಡುತ್ತೇವೆ" ಎಂದು ಆತ್ಮಸ್ಥೈರ್ಯ ತುಂಬಿದರು.

"ಈ ಭಾಗದ ಶಾಸಕರು ಕಾಫಿ ಲೀಸ್ ವಿಚಾರ, ಫಾರಂ 57 ವಿಚಾರ ಪ್ರಸ್ತಾಪಿಸಿದ್ದಾರೆ.

ಅರಣ್ಯ ಹಕ್ಕು ಕಾಯ್ದೆಯಲ್ಲಿ ಎಲ್ಲರಿಗೂ 25 ವರ್ಷ ನಿಗದಿ ಮಾಡಲು ಮುಂದಿನ ದಿನಗಳಲ್ಲಿ ಅಧಿವೇಶನದಲ್ಲಿ ನಿರ್ಣಯ ಕೈಗೊಂಡು ಕೇಂದ್ರಕ್ಕೆ ಪ್ರಸ್ತಾವನೆ ಸಲ್ಲಿಸಲಾಗುವುದು" ಎಂದರು.

"2022ರಲ್ಲಿ ಸಂಜಯ್ ಕುಮಾರ್ ಎಂಬ ಅಧಿಕಾರಿಯಿಂದ ವರದಿ ನೀಡಲು 2027ರವರೆಗೆ ಕಾಲಾವಕಾಶ ನೀಡಿರುವ ವಿಚಾರ ನನ್ನ ಗಮನಕ್ಕೆ ಬಂದಿದೆ. ಈ ಬಗ್ಗೆ ಕೇಂದ್ರ ಸಚಿವರ ಜೊತೆ ಚರ್ಚೆ ಮಾಡಿ ತೀರ್ಮಾನ ಮಾಡಲಾಗುವುದು. ಅಗತ್ಯ ಬಿದ್ದರೆ ಕೇಂದ್ರಕ್ಕೆ ಪ್ರತ್ಯೇಕ ನಿಯೋಗ ಕರೆದೊಯ್ಯುವೆ" ಎಂದರು.

**ಚಿಕ್ಕಮಗಳೂರು, ಶಿವಮೊಗ್ಗದಲ್ಲಿ ಸಚಿವ ಸಂಪುಟ ಸಭೆ**

"ಚಿಕ್ಕಮಗಳೂರು ಹಾಗೂ ಶಿವಮೊಗ್ಗದಲ್ಲಿ ಸಚಿವ ಸಂಪುಟ ಸಭೆ ಮಾಡುವೆ. ನಿಮ್ಮ ಎಲ್ಲಾ ಸಮಸ್ಯೆ ಬಗೆಹರಿಸದಿದ್ದರೂ, ಪಿಂಚಣಿ, ನಿವೇಶನ ಸೇರಿದಂತೆ ಅನೇಕ ಸಮಸ್ಯೆ ಬಗೆಹರಿಸಲು ಮುಂದಾಗುತ್ತೇವೆ.

ನಮ್ಮ ಸರ್ಕಾರ ವಾರ್ಷಿಕ 1 ಲಕ್ಷ ಕೋಟಿ ಹಣವನ್ನು ಬಡವರು, ರೈತರಿಗಾಗಿ ವೆಚ್ಚ ಮಾಡಲಾಗುತ್ತಿದೆ. ಗ್ಯಾರಂಟಿ ಯೋಜನೆಗಳಿಗೆ 53 ಸಾವಿರ ಕೋಟಿ, ರೈತರ ಪಂಪ್ ಸೆಟ್ ಗಳಿಗೆ ಉಚಿತ ವಿದ್ಯುತ್ ನೀಡಲು ವಾರ್ಷಿಕ 20 ಸಾವಿರ ಕೋಟಿ ವೆಚ್ಚ ಮಾಡಲಾಗುತ್ತಿದೆ" ಎಂದು ತಿಳಿಸಿದರು.

**ಕರಾವಳಿ ಜತೆಗೆ. ಮಲೆನಾಡಿಗೂ ಪ್ರವಾಸೋದ್ಯಮ ನೀತಿ**

"ಶುಕ್ರವಾರ ಮಂಗಳೂರಿನಲ್ಲಿ ಮೊದಲ ಬಾರಿಗೆ ಸಚಿವ ಸಂಪುಟ ಮಾಡಿದೆ. ಅಲ್ಲಿ ಕರಾವಳಿ ಜೊತೆಗೆ ಮಲೆನಾಡಿನ ಪ್ರಗತಿಗೆ ಪ್ರವಾಸೋದ್ಯಮ ನೀತಿ ರೂಪಿಸಿದ್ದೇವೆ.

ಮಲೆನಾಡು ಹಾಗೂ ಕರಾವಳಿ ಪ್ರದೇಶದಲ್ಲಿ ಬಂಡವಾಳ ಬರಬೇಕು, ಉದ್ಯೋಗ ಹೆಚ್ಚಾಬೇಕು, ವಲಸೆ ನಿಲ್ಲಿಸಬೇಕು ಎಂದು ರೂಪುರೇಷೆ ಮಾಡಿದ್ದೇವೆ" ಎಂದರು.

**ವಿರೋಧ ಪಕ್ಷಗಳಿಗೆ ರಾಜಕೀಯವೇ ಮುಖ್ಯವಾಗಿದೆ**

"ಐತಿಹಾಸಿಕ ಸಂಪುಟ ಸಭೆಗೆ ಯಾರು ಬೇಕಾದರೂ ಟೀಕೆ ಮಾಡಲಿ. ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಟೀಕೆಗಳಿಗೆ ಅವಕಾಶವಿದೆ. ಟೀಕೆ ಮಾಡಿದಾಗ ನಾವು ಎಚ್ಚರಿಕೆಯಿಂದ ಹೆಜ್ಜೆ ಇಡುತ್ತೇವೆ.

ನಾನು ಭಾವನೆ ಮೇಲೆ ರಾಜಕಾರಣ ಮಾಡುವುದಿಲ್ಲ. ನಿಮ್ಮ ಬದುಕಿಗಾಗಿ ನಾನು ಕೆಲಸ ಮಾಡುತ್ತೇನೆ. ಮುಂದಿನ ದಿನಗಳಲ್ಲಿ ಅಧಿವೇಶನದಲ್ಲಿ ಗಲಾಟೆಗೆ ಅವಕಾಶ ನೀಡುವುದಿಲ್ಲ.

ನಾನು ಹೃದಯ ವೈಶಾಲ್ಯತೆಯಿಂದ ಎಲ್ಲರನ್ನು ಒಟ್ಟಾಗಿ ಕರೆದುಕೊಂಡು ಹೋಗಲು ಮುಂದಾಗಿದ್ದೆ. ಯಾವುದೇ ವಿಚಾರ ಇಲ್ಲದೆ ನಾಗೇಂದ್ರ ರಾಜೀನಾಮೆಗೆ ಗಲಾಟೆ ಮಾಡಿದರು. ರಾಜೀನಾಮೆ ಪಡೆದ ಮೇಲೂ ಪಾದಯಾತ್ರೆ ಮಾಡಿದರು. ಅವರಿಗೆ ರಾಜಕಾರಣ ಮುಖ್ಯ ಎಂದು ತೋರಿಸಿದ್ದಾರೆ. ನಾನು ಕೂಡ ಜನರ ಮುಂದೆ ಬಂದಿರುವೆ" ಎಂದರು.

"ಬರ ಎದುರಾಗಿದೆ, 101 ತಾಲ್ಲೂಕುಗಳನ್ನು ಬರಪೀಡಿತ ಎಂದು ಘೋಷಣೆ ಮಾಡಲಾಗಿದೆ. ಬೇರೆ ಪ್ರದೇಶಗಳಲ್ಲಿ ಅಧ್ಯಯನ ನಡೆಯುತ್ತಿದ್ದೂ, 21 ದಿನ ಮಳೆಯಾಗಬಾರದು ಎಂಬ ಕೇಂದ್ರದ ಮಾರ್ಗಸೂಚಿ ಇದೆ.

ಒಂದೆರಡು ದಿನಗಳಲ್ಲಿ ಮತ್ತೊಂದು ಪಟ್ಟಿ ಬಿಡುಗಡೆ. ವಿಶೇಷ ಅಧಿವೇಶನದಲ್ಲಿ ಬರ ಹಾಗೂ ಕಸ್ತೂರಿ ರಂಗನ್ ವರದಿ ಬಗ್ಗೆ ಚರ್ಚೆ ಮಾಡಲಾಗುವುದು" ಎಂದರು.

"ನನ್ನ ಮೇಲೆ ವಿಶ್ವಾಸ ಇಟ್ಟು ಬಂದಿರುವ ನಿಮ್ಮ ಪ್ರೀತಿಗೆ ಧನ್ಯವಾದ ಅರ್ಪಿಸುವೆ. ನೀವು ನಮ್ಮನ್ನು ಭೇಟಿ ಮಾಡಲು ಕಷ್ಟವಾಗುತ್ತದೆ ಎಂದು ನಮ್ಮ ಸರ್ಕಾರವನ್ನು ಪ್ರಜಾಸೇವೆ ಮೂಲಕ ಜನರ ಮನೆ ಬಾಗಿಲಿಗೆ ತರಲು ಮುಂದಾಗಿದ್ದೇವೆ. ಜಿಲ್ಲಾ ಮಂತ್ರಿಗಳು ತಿಂಗಳಿಗೆ 2 ದಿನ, 2 ತಾಲ್ಲೂಕಿಗೆ ಹೋಗಬೇಕು" ಎಂದು ತಿಳಿಸಿದರು.

# ಬರ ನಿರ್ವಹಣೆಯಲ್ಲಿ ರಾಜ್ಯ ಸರಕಾರ ವಿಫಲ: ಕೇಂದ್ರ ಸಚಿವ

● ವಿಕ್ರಮ ವಾಹಿನಿ | ಬೆಂಗಳೂರು

ಕಸ್ತೂರಿ ರಂಗನ್ ವರದಿ ವಿಚಾರದಲ್ಲಿ ರಾಜ್ಯದ ಎಲ್ಲಾ ರಾಜಕೀಯ ಪಕ್ಷಗಳ ನಿಲುವು ಒಂದೇ ಆಗಿದೆ ಎಂದು ಹೇಳಿದ ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಅವರು; ಯಾವುದೇ ಕಾರಣಕ್ಕೂ ಈ ವರದಿಯನ್ನು ಅನುಷ್ಠಾನಕ್ಕೆ ತರಬಾರದು ಈ ವರದಿಯಿಂದ ರೈತರಿಗೆ ಧಕ್ಕೆ ಆಗಲಿದೆ ಎಂಬ ಅಭಿಪ್ರಾಯ ವ್ಯಾಪಕವಾಗಿದೆ ಎಂದು ತಿಳಿಸಿದರು.

ಜೆಡಿಎಸ್ ಪಕ್ಷದ ಕೇಂದ್ರ ಕಚೇರಿ ಜೆಪಿ ಭವನದಲ್ಲಿ ಶನಿವಾರ ಬೆಳಗ್ಗೆ ಮಾಧ್ಯಮಗಳ ಜತೆ ಮಾತನಾಡಿದ ಕೇಂದ್ರ ಸಚಿವರು; ಸೋಮವಾರದಿಂದ ವಿಧಾನಮಂಡಲದ ವಿಶೇಷ ಅಧಿವೇಶನ ನಡೆಯುತ್ತಿದೆ. ಅಧಿವೇಶನದಲ್ಲಿ ಈ ಬಗ್ಗೆ ಏನು ಚರ್ಚೆಯಾಗುತ್ತದೆ ಎಂಬುದನ್ನು ಕಾದು ನೋಡೋಣ ಎಂದರು.

ಕಸ್ತೂರಿ ರಂಗನ್ ವರದಿಯ ಬಗ್ಗೆ ಚರ್ಚೆ ನಡೆಯುತ್ತಿರುವುದು ಸಂತೋಷದ ವಿಚಾರವೇ. ಆದರೆ ಈ ಸರಕಾರ ಅದೆಷ್ಟು ದೃಢವಾಗಿ ರೈತರ ಪರ ನಿಲ್ಲುತ್ತದೆ ಎಂಬುದನ್ನು ನಾವು ಗಮನಿಸಬೇಕಾಗಿದೆ ಎಂದು ಸಚಿವರು ಪ್ರಶ್ನೆ ಒಂದಕ್ಕೆ ಉತ್ತರಿಸಿದರು.

ಶಿವಮೊಗ್ಗ, ಚಿಕ್ಕಮಗಳೂರು, ಕೊಡಗು, ಉತ್ತರ ಕನ್ನಡ, ದಕ್ಷಿಣ ಕನ್ನಡ ಸೇವಂತಿಯೇ ವಿವಿಧ ಜಿಲ್ಲೆಗಳ ಜನರು ಮತ್ತು ಬಹುಮುಖ್ಯವಾಗಿ ರೈತರು ಈ ವರದಿಯನ್ನು ಕಠಿಣವಾಗಿ ವಿರೋಧ ಮಾಡುತ್ತಿದ್ದಾರೆ. ರಾಜ್ಯ ಸರ್ಕಾರ ಜನಾಭಿಪ್ರಾಯಕ್ಕೆ ಅನುಗುಣವಾಗಿ



ನಡೆಯಬೇಕಾಗುತ್ತದೆ ಎಂದು ಕುಮಾರಸ್ವಾಮಿ ಅವರು ಒತ್ತಿ ಹೇಳಿದರು.

ವಿಚಿತ್ರವೆಂದರೆ ತಕ್ಷಣವೇ ಈ ಬಗ್ಗೆ ಸ್ಪಂದಿಸುವುದನ್ನು ಬಿಟ್ಟು ಮುಖ್ಯಮಂತ್ರಿಯ ಬರಗಾಲ ಮತ್ತು ಕಸ್ತೂರಿ ರಂಗನ್ ವರದಿಗಳ ಬಗೆಯೇ ಹಲವು ದಿನಗಳಿಂದ ಪುಕ್ಕಟೆ ಪ್ರಚಾರ ಪಡೆಯುತ್ತಿದ್ದಾರೆ ಎಂದು ಟೀಕಿಸಿದ ಕೇಂದ್ರ ಸಚಿವರು; ಜೆಡಿಎಸ್ ಪಕ್ಷದ ನಿಲುವು ರೈತರ ನಿಲುವೇ ಆಗಿದೆ. ನಾವು ರೈತರ ಪರ ಗಟ್ಟಿಯಾಗಿ ನಿಲ್ಲುತ್ತೇವೆ. ಎಲ್ಲಾ ಪಕ್ಷಗಳು ಈ ವಿಷಯದಲ್ಲಿ ಒಗ್ಗಟ್ಟಾಗಿ ಹೋರಾಟ ನಡೆಸಬೇಕಾಗುತ್ತದೆ ಎಂದು ಪ್ರತಿಪಾದಿಸಿದರು.

**ಬರ ನಿರ್ವಹಣೆಯಲ್ಲಿ ಸರ್ಕಾರ ವಿಫಲ:** ಜನರ ಹಿತವನ್ನು ಬದಿಗೊತ್ತಿ ಬೇರೆ ಬೇರೆ ವಿಷಯಗಳನ್ನು ಮಗ್ನವಾಗಿರುವ ರಾಜ್ಯ ಕಾಂಗ್ರೆಸ್ ಸರ್ಕಾರ ರೈತರನ್ನು ಮತ್ತು ರಾಜ್ಯದ ಜನರ ಹಿತವನ್ನು ಸಂಪೂರ್ಣವಾಗಿ ಕಡೆಗಣಿಸಿದೆ ಎಂದು ಸಚಿವ ಕುಮಾರಸ್ವಾಮಿ ಅವರು ಆರೋಪ ಮಾಡಿದರು.

ಬರದ ಬಗ್ಗೆ ಚರ್ಚೆ ಮಾಡಲು ಇವರಿಗೆ ಸಮಯ ಎಲ್ಲಿದೆ? ಬರೀ ಪ್ರಚಾರ ಗಿಟ್ಟಿಸುವುದರಲ್ಲಿಯೇ ಇವರು ಸಂಪೂರ್ಣ ಸಮಯ ವ್ಯಯ ಮಾಡಿಸುತ್ತಿದ್ದಾರೆ. ಇದುವರೆಗೂ ರೈತರ ಕಷ್ಟವನ್ನು ಆಲಿಸಿಲ್ಲ ಅವರಿಗೆ ಪರಿಹಾರವನ್ನು ಕೊಡುವ ಸಣ್ಣ ಪ್ರಯತ್ನವನ್ನು ಮಾಡಿಲ್ಲ. ರಾಜ್ಯದ ಉದ್ದಗಳು ಬೆಳೆಯು ಮೊಳಕೆ ಹಂತದಲ್ಲಿ ಸುಟ್ಟು ಭಸ್ಮವಾಗಿದೆ. ರೈತರ ದುಡಿಮೆ ದುಡ್ಡು ಮಣ್ಣುಪಾಲಾಗಿದೆ.

**ಸ್ವಂತ ಹಣದಿಂದಲೇ ಸಿಎಂ ಸಾಲಮನ್ನಾ ಮಾಡಬಹುದು!:** ರಾಜ್ಯ ಯಾವ ಸ್ಥಿತಿಯಲ್ಲಿದೆ ಎಂಬುದು ಈ ಮುಖ್ಯಮಂತ್ರಿಗೆ ಗೊತ್ತಿಲ್ಲವೇ? ಜನ ಜಾನುವಾರುಗಳಿಗೆ ನೀರಿಲ್ಲ, ದನ ಕರುಗಳಿಗೆ ಮೇವು ಸಿಗುತ್ತಿಲ್ಲ. ಏನೋ ಕುಮಾರಸ್ವಾಮಿ ಅವರು ಸಾಲಮನ್ನಾ ಮಾಡಿದ್ದಾರೆ, ಸಿದ್ದರಾಮಯ್ಯ ಸಾಲಮನ್ನಾ ಮಾಡಿದ್ದಾರೆ. ಹೀಗಾಗಿ ನಾನು ಕೂಡ ಸಾಲಮನ್ನಾ ಮಾಡಬೇಕು ಎಂದು ಮುಖ್ಯಮಂತ್ರಿ ಹೇಳುತ್ತಿದ್ದಾರಂತೆ. ಬೆಂಗಳೂರು ಸುತ್ತಮುತ್ತ ಬೇಕಾದಷ್ಟು ಲೂಟಿ ಹೊಡೆಯಲು ಹೊರಟಿದ್ದರಲ್ಲಾ? ಡಿಎಲ್ ಎಫ್ ತಾವರೆಕೆರೆಯ ಡಿವೈನಿಟಿ, ನೈಸ್ ವಿಚಾರದಲ್ಲಿ ಸಾವಿರಾರು ಕೋಟಿ ಲೂಟಿ ಹೊಡೆಯಲು ಹೊರಟೀದಾರಲ್ಲಾ? ಮನಸ್ಸು ಮಾಡಿದರೆ ಮುಖ್ಯಮಂತ್ರಿಗಳೇ ತಮ್ಮ ಕೈಯಿಂದಲೇ ಸಾಲಮನ್ನಾ ಮಾಡಬಹುದು! ಸರಕಾರದ ಆರ್ಥಿಕ ಇಲಾಖೆ ಯಾಕೆ? ಅವರ ಕೈಯಿಂದಲೇ, ವೈಯಕ್ತಿಕವಾಗೇ ಸಾಲಮನ್ನಾ ಮಾಡಬಹುದು ಎಂದು ಕುಮಾರಸ್ವಾಮಿ ಅವರು ವ್ಯಂಗ್ಯವಾಡಿದರು.

**ಊರಿಗೊಂದು ಕ್ಯಾಬಿನೆಟ್ ಮಾಡುವುದು ವಿಧಾನ ಸೌಧವೇನು ಟೂರಿಂಗ್ ಟಾಕೀಸಾ?:** ಈ ಸರ್ಕಾರ ಬಂದ ಮೇಲೆ ಊರಿಗೊಂದು ಸಂಪುಟ ಸಭೆ ಮಾಡುತ್ತಿರುವ ಬಗ್ಗೆ ಲೇವಡಿ ಮಾಡಿದ ಕೇಂದ್ರ ಸಚಿವರು; ವಿಧಾನಸೌಧದಲ್ಲಿ ಸಚಿವ ಸಂಪುಟ ಸಭೆ ನಡೆಸಲು ಕೆಂಗಲ್ ಹನುಮಂತಯ್ಯನವರು ಆ ಕಟ್ಟಡವನ್ನು ನಿರ್ಮಿಸಿದ್ದರು. ಈಗ ಜಿಲ್ಲೆಗಳಿಗೆ ದಂಡು ದಂಡಾಗಿ ಹೋಗಿ ದುಂದುವೆಚ್ಚ ಮಾಡಿಕೊಂಡು ಸಂಪುಟ ಸಭೆ ಮಾಡುತ್ತಿದ್ದಾರೆ. ಇದು ಪ್ರಚಾರದ ಸ್ಟಂಟ್ ಬಿಟ್ಟರೆ ಬೇರೆ ಏನೂ ಅಲ್ಲ. ಕೂನೇಪಕ್ಷ ಹೊರಗೆ ಕ್ಯಾಬಿನೆಟ್ ಮಾಡುವುದಕ್ಕೆ ಇವರು ಖರ್ಚು ಮಾಡುತ್ತಿರುವ ಹಣವನ್ನು ರೈತರಿಗಾದರೂ ಕೊಟ್ಟಿದ್ದಿದ್ದರೆ ಅವರಿಗೆ ಸಹಾಯ ಆಗುತ್ತಿತ್ತು ಎಂದರು.

ಮೊದಲೇ ರಾಜ್ಯದ ಬೊಕ್ಕಸಕ್ಕೆ ಭಾರ ಹೆಚ್ಚಾಗಿದೆ. ಅದರ ಜತೆಗೆ ಇಂಥ ದುಂದುವೆಚ್ಚ ಬೇರೆ. ಇಂತಹ ಪ್ರವಾಸಗಳು ಸರಕಾರಕ್ಕೆ ಹೊರೆಯೇ ಹೊರತು ಬೇರೆ ಏನೂ ಅಲ್ಲ. ಜನರ ತೆರಿಗೆ ಹಣವನ್ನು ಪೋಲು ಮಾಡಲಾಗುತ್ತಿದೆ. ಇಂತಹ ಸಭೆಗಳಿಂದ ರಾಜ್ಯ ಉದ್ಧಾರ ಆಗುವುದಿಲ್ಲ ಎಂದು ಸಚಿವರು ಹರಿಹಾಯ್ದರು.

# ಗರ್ಭಿಣಿ ಹಸುವಿನ ಮೇಲೆ ಹುಲಿ ದಾಳಿ

● ವಿಕ್ರಮ ವಾಹಿನಿ | ಚಾಮರಾಜನಗರ

ಜಮೀನಿನಲ್ಲಿ ಮೇಯುತ್ತಿದ್ದ ಗರ್ಭಿಣಿ ಹಸುವಿನ ಮೇಲೆ ಹುಲಿ ದಾಳಿ ನಡೆಸಿ ಕೊಂದು, ಬಳಿಕ ರೈತನನ್ನು ಬೆನ್ನಟ್ಟಿದ ಘಟನೆ ಚಾಮರಾಜನಗರ ತಾಲ್ಲೂಕಿನ ಕುಮಚಹಳ್ಳಿಯಲ್ಲಿ ನಡೆದಿದೆ. ಘಟನೆಯಿಂದ ಗ್ರಾಮಸ್ಥರಲ್ಲಿ ಆತಂಕ ಹೆಚ್ಚಾಗಿದೆ.

ಕುಮಚಹಳ್ಳಿ ಗ್ರಾಮದ ರೈತ ತಮ್ಮಯ್ಯ ಅವರಿಗೆ ಸೇರಿದ ಹಸು ಜಮೀನಿನಲ್ಲಿ ಮೇಯುತ್ತಿದ್ದ ವೇಳೆ ಹುಲಿ ದಾಳಿ ನಡೆಸಿದೆ. ಹಸುವನ್ನು ಕೊಂದು ಅದರ ದೇಹದ ಭಾಗವನ್ನು ತಿಂದಿರುವ ಹುಲಿ, ಬಳಿಕ ಸ್ಥಳದಲ್ಲಿದ್ದ ರೈತನನ್ನು ಬೆನ್ನಟ್ಟಿದೆ ಎನ್ನಲಾಗಿದೆ. ರೈತ ಅಪಾಯದಿಂದ ಪಾರಾಗಿದ್ದಾರೆ.

ಹುಲಿಯ ಚಲನವಲನದಿಂದ ಗ್ರಾಮಸ್ಥರು ಭಯಭೀತರಾಗಿದ್ದು, ಅರಣ್ಯ ಇಲಾಖೆ ಅಧಿಕಾರಿಗಳು ಹುಲಿಯನ್ನು ಪತ್ತೆಹಚ್ಚಿ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದ್ದಾರೆ.

# 20 ವರ್ಷ ಸೇವೆ ಸಲ್ಲಿಸಿದ ‘ಸಾವಿತ್ರಿಬಾಯಿ ಫುಲೆ’ ನೌಕೆ ನಿವೃತ್ತಿ



● ವಿಕ್ರಮ ವಾಹಿನಿ | ಕಾರವಾರ

ದೇಶದ ಕಡಲ ರಕ್ಷಣೆಯಲ್ಲಿ ಎರಡು ದಶಕಗಳ ಕಾಲ ಸೇವೆ ಸಲ್ಲಿಸಿದ ಭಾರತೀಯ ಕೋಸ್ಟ್ ಗಾರ್ಡ್‌ನ ‘ಸಾವಿತ್ರಿಬಾಯಿ ಫುಲೆ’ ನೌಕೆ ಸೋಮವಾರ ಕಾರವಾರದ ಬೈತಕೋಲ್ ಬಂದರಿನಲ್ಲಿ ಅಧಿಕೃತವಾಗಿ ನಿವೃತ್ತಿಯಾಯಿತು. ಪಶ್ಚಿಮ ಕರಾವಳಿ ಹಾಗೂ ಅರಬ್ಬಿ ಸಮುದ್ರದಲ್ಲಿ ವಿವಿಧ ಕಾರ್ಯಾಚರಣೆಗಳಲ್ಲಿ ಭಾಗವಹಿಸಿದ್ದ ನೌಕೆ, ದೇಶದ ಸಮುದ್ರ ಗಡಿ ರಕ್ಷಣೆಯ ಜೊತೆಗೆ ಸಂಕಷ್ಟದಲ್ಲಿದ್ದ ಮೀನುಗಾರರ ನೆರವಿಗೂ ಹಲವು ಬಾರಿ ಧಾವಿಸಿತ್ತು. ನಿವೃತ್ತಿ ಸಮಾರಂಭದಲ್ಲಿ ನೌಕೆಯ ಕಮಾಂಡೆಂಟ್ ಗೌರವ್ ಶ್ರೀವಾಸ್ತವ್ ಧ್ವಜ ಇಳಿಸಿ ಅಂತಿಮ ವಿದಾಯ ಸಲ್ಲಿಸಿದರು.

ಮಹಿಳಾ ಶಿಕ್ಷಣದ ಕ್ಷೇತ್ರದಲ್ಲಿ ಮಹತ್ವದ ಕೊಡುಗೆ ನೀಡಿದ ಸಾವಿತ್ರಿಬಾಯಿ ಫುಲೆ ಅವರ ಸ್ಮರಣಾರ್ಥ 2005ರಲ್ಲಿ ಗೋವಾ ಶಿಪ್‌ಯಾರ್ಡ್‌ನಲ್ಲಿ ಈ ನೌಕೆಯನ್ನು ನಿರ್ಮಿಸಲಾಗಿತ್ತು. 2006ರ ಅಕ್ಟೋಬರ್ 28ರಂದು ಗೋವಾದಲ್ಲಿ ದೇಶ ಸೇವೆಗೆ ಸಮರ್ಪಿಸಲಾಯಿತು. ಬಳಿಕ ಮಂಗಳೂರಿನಲ್ಲಿ ಕಾರ್ಯನಿರ್ವಹಿಸಿದ್ದ ನೌಕೆ, 2021ರ ಏಪ್ರಿಲ್‌ನಿಂದ ಕಾರವಾರವನ್ನು ತನ್ನ ನೆಲೆ ಮಾಡಿಕೊಂಡಿತ್ತು.

# ತಿರುಪತಿ ಲಡ್ಡುಗೆ ಕಲಬೆರಕೆ ತುಪ್ಪ: ಇಡಿಯಿಂದ ಪ್ರಮೋಟರ್ ಬಂಧನ



● ವಿಕ್ರಮ ವಾಹಿನಿ | ಹೈದರಾಬಾದ್

ತಿರುಮಲ ತಿರುಪತಿ ದೇವಸ್ಥಾನಕ್ಕೆ (ಟಿಟಿಡಿ) ಕಲಬೆರಕೆ ತುಪ್ಪ ಪೂರೈಕೆ ಮಾಡಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಜಾರಿ ನಿರ್ದೇಶನಾಲಯ (ಇಡಿ) ಎಂ/ಎಸ್ ಸುಕೃತಿ ಫುಡ್ಸ್ ಪ್ರೈವೇಟ್ ಲಿಮಿಟೆಡ್‌ನ ಪ್ರಮೋಟರ್ ಕೈಲಾಶ್ ಚಂದ್ ಮಂಗಲಾ ಅವರನ್ನು ಬಂಧಿಸಿದೆ.

ಪಿಎಂಎಲ್ಎ ಅಡಿಯಲ್ಲಿ ಬಂಧಿಸಲಾಗಿರುವ ಮಂಗಲಾ ಅವರನ್ನು ವಿಶಾಖಪಟ್ಟಣದ ವಿಶೇಷ ನ್ಯಾಯಾಲಯದ ಮುಂದೆ ಹಾಜರುಪಡಿಸಲಾಗಿದ್ದು, ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ. ತಿರುಪತಿ ಪೂರ್ವ ಪೊಲೀಸ್ ಠಾಣೆಯಲ್ಲಿ ದಾಖಲಾಗಿದ್ದ ಎಫ್‌ಐಆರ್ ಆಧರಿಸಿ ಇಡಿ ತನಿಖೆ ನಡೆಸುತ್ತಿದೆ.


ಇಡಿ ಪ್ರಕಾರ, ಪಾಮ್ ಆಯಿಲ್, ಪಾಮ್ ಕರ್ನಲ್ ಆಯಿಲ್, ಪಾಮೋಲಿನ್ ಸೇರಿದಂತೆ ವಿವಿಧ ಪದಾರ್ಥಗಳನ್ನು ಬಳಸಿ ಕಲಬೆರಕೆ ತುಪ್ಪ ತಯಾರಿಸಿ ‘ಅಗ್‌ಮಾರ್ಕ್ ಸ್ಪೆಷಲ್ ತುಪ್ಪ’ ಹೆಸರಿನಲ್ಲಿ ಟಿಟಿಡಿಗೆ ಪೂರೈಸಲಾಗುತ್ತಿತ್ತು. 2019ರಿಂದ 2024ರವರೆಗೆ ಸುಮಾರು ರೂ 230 ಕೋಟಿ ಮೌಲ್ಯದ ಕಲಬೆರಕೆ ತುಪ್ಪ ಪೂರೈಕೆಯಾಗಿದ್ದು, ಇದರಲ್ಲಿ ರೂ 96 ಕೋಟಿ ಮೌಲ್ಯದ ತುಪ್ಪವನ್ನು ಮಂಗಲಾ ಅವರೇ ತಯಾರಿಸಿದ್ದರು ಎಂದು ಇಡಿ ಆರೋಪಿಸಿದೆ. ಕಲಬೆರಕೆ ಪದಾರ್ಥಗಳ ಖರೀದಿ ಹಾಗೂ ಕಾರ್ಖಾನೆಯಲ್ಲಿ ತುಪ್ಪ ತಯಾರಿಕೆಯಲ್ಲಿ ಮಂಗಲಾ ಪ್ರಮುಖ ಪಾತ್ರ ವಹಿಸಿದ್ದರು ಎಂದು ತನಿಖಾ ಸಂಸ್ಥೆ ತಿಳಿಸಿದೆ.

# ಅಮಿತ್ ಶಾ ಭೇಟಿಮಾಡಿದ ಬಿ.ವೈ ವಿಜಯೇಂದ್ರ

● ವಿಕ್ರಮ ವಾಹಿನಿ | ಹುಬ್ಬಳ್ಳಿ

*ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಅವರು ಶನಿವಾರ ಕೇಂದ್ರದ ಗೃಹ ಸಚಿವ ಅಮಿತ್ ಶಾ ಜೀ ಅವರನ್ನು ಭೇಟಿ ಮಾಡಿದರು.*

*ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರದ ಭ್ರಷ್ಟಾಚಾರ ಮತ್ತು ಜನವಿರೋಧಿ ನೀತಿಗಳ ವಿರುದ್ಧ ಅಭೂತಪೂರ್ವ ಯಶಸ್ಸು ಕಂಡ ಬಳ್ಳಾರಿ ಚಲೋ ಪಾದಯಾತ್ರೆಯ ಸಂಪೂರ್ಣ ವಿವರಗಳನ್ನು ಇದೇ ಸಂದರ್ಭದಲ್ಲಿ ಅಮಿತ್ ಶಾ ಜೀ ರವರಿಗೆ ವಿಜಯೇಂದ್ರ ಅವರು ಸಲ್ಲಿಸಿದರು.*



*ಬಳ್ಳಾರಿ ಚಲೋ ಯಾತ್ರೆಯುದ್ದಕ್ಕೂ ಅಸಂಖ್ಯಾತ ಕಾರ್ಯಕರ್ತರು ಹಾಗೂ ಸಾರ್ವಜನಿಕರು ತೋರಿದ ಅಭೂತಪೂರ್ವ ಬೆಂಬಲದ ಚಿತ್ರಣವನ್ನು ವಿವರಿಸಲಾಯಿತು. ಬರುವ ದಿನಗಳಲ್ಲಿ ಈ ಭ್ರಷ್ಟ ಕಾಂಗ್ರೆಸ್ ಸರ್ಕಾರದ ವೈಫಲ್ಯಗಳನ್ನು ಜನರ ಮುಂದಿಡಲು, ನಮ್ಮ ಹೋರಾಟವನ್ನು ಇನ್ನಷ್ಟು ತೀವ್ರಗೊಳಿಸಲು ಅಮಿತ್ ಶಾ ಅವರು ಮಾರ್ಗದರ್ಶನ ನೀಡಿದರು.*

*ಬಳ್ಳಾರಿ ಚಲೋ ಸೇರಿದಂತೆ ರಾಜ್ಯದಲ್ಲಿ ಪಕ್ಷ ಸಂಘಟನೆಯ ಚಟುವಟಿಗಳ ಕುರಿತು ಅಮಿತ್ ಶಾ ಜೀ ಮೆಚ್ಚುಗೆ ವ್ಯಕ್ತಪಡಿಸಿದರು.*

*2028ರಲ್ಲಿ ರಾಜ್ಯದಲ್ಲಿ ಮತ್ತೆ ಬಿಜೆಪಿಯ ಜನಪರ ಸರ್ಕಾರವನ್ನು ಅಧಿಕಾರಕ್ಕೆ ತರುವ ನಿಟ್ಟಿನಲ್ಲಿ ಸಂಘಟಿತ ಹೋರಾಟ ಹಾಗೂ ಜನಜಾಗೃತಿ ಮೂಡಿಸಲು ತಿಳಿಸಿದರು.*

# ಇಂದ್ರಪ್ರಸ್ಥದಲ್ಲಿ ವೈಭವದ ಶ್ರೀನಿವಾಸ ಕಲ್ಯಾಣೋತ್ಸವ

● ವಿಕ್ರಮ ವಾಹಿನಿ | ನವದೆಹಲಿ

ಪೇಜಾವರ ಶ್ರೀ ವಿಶ್ವಪ್ರಸನ್ನತೀರ್ಥ ಸ್ವಾಮೀಜಿಯವರ 39ನೇ ಚಾತುರ್ಮಾಸ್ಯ ವ್ರತದ ಪರಿಸಮಾಪ್ತಿಗೆ ಕೆಲವೇ ದಿನಗಳು ಬಾಕಿ ಇರುವ ಸಂದರ್ಭದಲ್ಲಿ, ವಸಂತ್ ಕುಂಜ್‌ನ ವೇದವ್ಯಾಸ ಗುರುಕುಲದಲ್ಲಿ ವಿವಿಧ ಧಾರ್ಮಿಕ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳು ಭಕ್ತಿಭಾವದಿಂದ ನಡೆಯುತ್ತಿವೆ. ಇದರ ಅಂಗವಾಗಿ ಶುಕ್ರವಾರ ಸಂಜೆ ದೆಹಲಿಯ ತಿರುಮಲ ತಿರುಪತಿ ದೇವಸ್ಥಾನ (ಟಿಟಿಡಿ)ಯ ಸಂಯೋಜನೆಯಲ್ಲಿ ಲೋಕಕ್ಷೇಮಾರ್ಥ ವೈಭವದ ಶ್ರೀನಿವಾಸ ಕಲ್ಯಾಣೋತ್ಸವ ನೆರವೇರಿತು.




ಶ್ರೀನಿವಾಸ ಕಲ್ಯಾಣೋತ್ಸವವನ್ನು ಕಣ್ತುಂಬಿಕೊಂಡ ಇಂದ್ರಪ್ರಸ್ಥದ ನೂರಾರು ಭಕ್ತರು ಎರಡು ಗಂಟೆಗಳ ಕಾಲ ನಡೆದ ಅಪರೂಪದ ಧಾರ್ಮಿಕ ಉತ್ಸವವನ್ನು ತದೇಕಚಿತ್ತದಿಂದ ಆಸ್ವಾದಿಸಿ ಧನ್ಯರಾದರು. ಡಾ. ವಿಠೋಬಾಚಾರ್ಯ ದಂಪತಿಗಳು ಸಂಕಲ್ಪ ವಿಧಿಯನ್ನು ನೆರವೇರಿಸಿ, ಕಲ್ಯಾಣೋತ್ಸವದ ಯಜಮಾನಿಕೆಯನ್ನು ವಹಿಸಿದರು.

ಕಾರ್ಯಕ್ರಮದಲ್ಲಿ ಸಾನ್ನಿಧ್ಯ ವಹಿಸಿದ್ದ ಪೇಜಾವರ ಶ್ರೀ ವಿಶ್ವಪ್ರಸನ್ನತೀರ್ಥ ಸ್ವಾಮೀಜಿ, ಶ್ರೀನಿವಾಸ



ಕಲ್ಯಾಣೋತ್ಸವದ ಮೂಲಕ ದೇಶಕ್ಕೆ ಹಾಗೂ ಸನಾತನ ಧರ್ಮಕ್ಕೆ ಎದುರಾಗಬಹುದಾದ ಎಲ್ಲ ಆಪತ್ತು-ವಿಪತ್ತುಗಳು ದೂರವಾಗಿ, ನಾಡಿನಾದ್ಯಂತ ಸುಖ, ಸಮೃದ್ಧಿ, ಶಾಂತಿ ಮತ್ತು ನೆಮ್ಮದಿ ನೆಲೆಸಲಿ ಎಂದು ಪ್ರಾರ್ಥಿಸಿದರು.

ವೈಭವದ ಶ್ರೀನಿವಾಸ ಕಲ್ಯಾಣೋತ್ಸವವನ್ನು ಆಯೋಜಿಸಿದ ಟಿಟಿಡಿ ಅಧಿಕಾರಿಗಳನ್ನು ಶ್ರೀಗಳು ಅಭಿನಂದಿಸಿದರು. ವೇದವ್ಯಾಸ ಗುರುಕುಲದಲ್ಲಿ ನಡೆಯುತ್ತಿರುವ ನಿರಂತರ ಧಾರ್ಮಿಕ ಕಾರ್ಯಕ್ರಮಗಳು ಇಂದ್ರಪ್ರಸ್ಥದ ಆಸ್ತಿಕರಲ್ಲಿ ಭಕ್ತಿ ಹಾಗೂ ಆಧ್ಯಾತ್ಮಿಕ ಚೈತನ್ಯವನ್ನು ಹೆಚ್ಚಿಸುತ್ತಿವೆ.

# ವಂದೇ ಮಾತರಂ ಗಾಯನಕ್ಕೆ ಶಾಸಕ ಚನ್ನಬಸಪ್ಪ ಆಕ್ಷೇಪ

● ವಿಕ್ರಮ ವಾಹಿನಿ | ಶಿವಮೊಗ್ಗ

ತೀರ್ಥಹಳ್ಳಿಯಲ್ಲಿ ಕಸ್ತೂರಿರಂಗನ್ ವರದಿ ಕುರಿತು ಸಾರ್ವಜನಿಕರು, ರೈತರು ಹಾಗೂ ತಜ್ಞರೊಂದಿಗೆ ನಡೆದ ಸಂವಾದ ಕಾರ್ಯಕ್ರಮದಲ್ಲಿ ‘ವಂದೇ ಮಾತರಂ’ ಗೀತೆಯ ಎರಡು ಚರಣಗಳನ್ನು ಮಾತ್ರ ಹಾಡಿದ್ದಕ್ಕೆ ಶಿವಮೊಗ್ಗ ಶಾಸಕ ಚನ್ನಬಸಪ್ಪ ಆಕ್ಷೇಪ ವ್ಯಕ್ತಪಡಿಸಿದರು. ಈ ವೇಳೆ ವೇದಿಕೆ ಬಳಿ ಕೆಲಕಾಲ ಗೊಂದಲದ ವಾತಾವರಣ ನಿರ್ಮಾಣವಾಯಿತು.

ಕಾರ್ಯಕ್ರಮದಲ್ಲಿ ಮೈಕ್ ಪಡೆದ ಶಾಸಕ ಚನ್ನಬಸಪ್ಪ, ‘ವಂದೇ ಮಾತರಂ’ ಗೀತೆಯನ್ನು ಪೂರ್ಣವಾಗಿ ಹಾಡದೆ ಇರುವುದರಿಂದ ಭಾವನೆಗಳಿಗೆ ಧಕ್ಕೆಯಾಗಿದೆ ಎಂದು ಆಕ್ಷೇಪಿಸಿದರು. ಇದೇ ರೀತಿ ಮುಂದುವರಿದರೆ ವೇದಿಕೆಯಿಂದ ನಿರ್ಗಮಿಸುವುದಾಗಿ ಎಚ್ಚರಿಕೆ ನೀಡಿದರು. ಇದಕ್ಕೆ ಸಭಿಕರಿಂದಲೂ ಪ್ರತಿಕ್ರಿಯೆ ವ್ಯಕ್ತವಾಯಿತು.

ಈ ವೇಳೆ ವೇದಿಕೆ ಸಮೀಪ ಕಾಂಗ್ರೆಸ್ ಕಾರ್ಯಕರ್ತರು ಘೋಷಣೆಗಳನ್ನು ಕೂಗಿದರು. ಬಳಿಕ ಮಾತನಾಡಿದ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಹಿಂದಿನಿಂದಲೂ ಕಾರ್ಯಕ್ರಮಗಳಲ್ಲಿ ‘ವಂದೇ ಮಾತರಂ’ ಗೀತೆಯ ಎರಡು ಚರಣಗಳನ್ನು ಹಾಡಿಕೊಂಡು ಬರುತ್ತಿದ್ದೇವೆ ಎಂದು ಹೇಳಿದರು.

ಜನರ ಬದುಕು ಮತ್ತು ಸಮಸ್ಯೆಗಳ ಕುರಿತು ಚರ್ಚಿಸಲು ತಾವು ಕಾರ್ಯಕ್ರಮಕ್ಕೆ ಬಂದಿದ್ದೇನೆ. ಭಾವನೆಗಳ ವಿಚಾರದಲ್ಲಿ ರಾಜಕೀಯ ಮಾಡುವ ಉದ್ದೇಶವಿಲ್ಲ ಎಂದು ಮುಖ್ಯಮಂತ್ರಿ ಹೇಳಿದರು. ಈ ಮೂಲಕ ಚನ್ನಬಸಪ್ಪ ಅವರ ಆಕ್ಷೇಪಕ್ಕೆ ಪ್ರತಿಕ್ರಿಯಿಸಿದರು.


ತೀರ್ಥಹಳ್ಳಿಯ ಕಾರ್ಯಕ್ರಮದಲ್ಲಿ ಕಸ್ತೂರಿರಂಗನ್ ವರದಿಯಿಂದ ಮಲೆನಾಡಿನ ರೈತರು ಹಾಗೂ ಸ್ಥಳೀಯ ಜನರ ಮೇಲೆ ಉಂಟಾಗಬಹುದಾದ ಪರಿಣಾಮಗಳ ಕುರಿತು ಸಾರ್ವಜನಿಕರು, ರೈತರು ಮತ್ತು ತಜ್ಞರಿಂದ ಅಭಿಪ್ರಾಯಗಳನ್ನು ಪಡೆಯಲಾಯಿತು. ವರದಿ ಅನುಷ್ಠಾನದ ಕುರಿತು ತಮ್ಮ ಆತಂಕಗಳು ಹಾಗೂ ಬೇಡಿಕೆಗಳನ್ನು ಸಭೆಯಲ್ಲಿ ಪ್ರತಿನಿಧಿಗಳು ಸರ್ಕಾರದ ಗಮನಕ್ಕೆ ತಂದರು. ವಂದೇ ಮಾತರಂ ಗಾಯನದ ವಿಚಾರವಾಗಿ ಶಾಸಕ ಚನ್ನಬಸಪ್ಪ ಆಕ್ಷೇಪ ವ್ಯಕ್ತಪಡಿಸಿದ ಬಳಿಕ ಕೆಲಕಾಲ ಘೋಷಣೆಗಳು ಕೇಳಿಬಂದವು. ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಪ್ರತಿಕ್ರಿಯೆ ನೀಡಿದ ನಂತರ ಪರಿಸ್ಥಿತಿ ತಿಳಿಗೊಂಡು ಕಾರ್ಯಕ್ರಮ ಮುಂದುವರಿಯಿತು.

# 30 ನಿಮಿಷದಲ್ಲೇ ಕಟ್ಟಡ ನಕ್ಷೆ ಅನುಮೋದನೆ

● ವಿಕ್ರಮ ವಾಹಿನಿ | ಬೆಂಗಳೂರು

ಮನೆ ನಿರ್ಮಾಣಕ್ಕೆ ಕಟ್ಟಡ ನಕ್ಷೆ ಅನುಮೋದನೆ ಪಡೆಯಲು ಇನ್ನು ಮುಂದೆ ತಿಂಗಳುಗಟ್ಟಲೆ ಕಾಯಬೇಕಿಲ್ಲ. ಕೇವಲ 15ರಿಂದ 30 ನಿಮಿಷಗಳಲ್ಲಿ ನಕ್ಷೆ ಅನುಮೋದನೆ ದೊರೆಯುವಂತೆ ಸುಧಾರಿತ ‘ನಂಬಿಕೆ ನಕ್ಷೆ 2.0’ ವ್ಯವಸ್ಥೆಯನ್ನು ಜಾರಿಗೆ ತರಲಾಗಿದೆ ಎಂದು ನಗರಾಭಿವೃದ್ಧಿ ಸಚಿವ ಕೃಷ್ಣಬೈರೇಗೌಡ ತಿಳಿಸಿದ್ದಾರೆ.

ನಗರದಲ್ಲಿ ಶನಿವಾರ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, 2024ರಲ್ಲಿ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ‘ನಂಬಿಕೆ ನಕ್ಷೆ’ ಯೋಜನೆಗೆ ಚಾಲನೆ ನೀಡಿದ್ದರು. ಮುಖ್ಯಮಂತ್ರಿ ಅವರ ಸೂಚನೆ ಮೇರೆಗೆ ವ್ಯವಸ್ಥೆಯನ್ನು ಮತ್ತಷ್ಟು ಸರಳೀಕರಿಸಿ ‘ನಂಬಿಕೆ ನಕ್ಷೆ 2.0’ ರೂಪದಲ್ಲಿ ಜಾರಿಗೆ ತರಲಾಗಿದೆ ಎಂದರು.



ಈ ಹಿಂದೆ ಕಟ್ಟಡ ನಕ್ಷೆ ಅನುಮೋದನೆಗೆ ಎರಡು-ಮೂರು ತಿಂಗಳು ಸಮಯ ಬೇಕಾಗುತ್ತಿತ್ತು. ಹೊಸ ವ್ಯವಸ್ಥೆಯಿಂದ ಈ ಪ್ರಕ್ರಿಯೆ 15ರಿಂದ 30 ನಿಮಿಷಗಳಲ್ಲಿ ಪೂರ್ಣಗೊಳ್ಳಲಿದೆ. ಇದರಿಂದ ಸಾರ್ವಜನಿಕರಿಗೆ ಸಮಯ ಉಳಿತಾಯವಾಗುವುದರ ಜತೆಗೆ ಅನುಮೋದನೆ ಪ್ರಕ್ರಿಯೆಯಲ್ಲಿ ಪಾರದರ್ಶಕತೆ ಹೆಚ್ಚಲಿದೆ ಎಂದು ಸಚಿವರು ಹೇಳಿದರು.

ಸರ್ಕಾರಿ ವ್ಯವಸ್ಥೆಗಳ ಮೇಲೆ ಜನರಿಗೆ ನಂಬಿಕೆ ಹೆಚ್ಚಿಸುವ ಉದ್ದೇಶದಿಂದ ‘ನಂಬಿಕೆ ನಕ್ಷೆ’ ಉಪಕ್ರಮವನ್ನು ಮತ್ತಷ್ಟು ಸುಧಾರಿಸಲಾಗಿದೆ ಎಂದು ಕೃಷ್ಣಬೈರೇಗೌಡ ತಿಳಿಸಿದರು.

# ಹಾಲಿನ ಖರೀದಿ ದರ ಹೆಚ್ಚಳಕ್ಕೆ ರೈತರ ಒತ್ತಾಯ

● ವಿಕ್ರಮ ವಾಹಿನಿ | ಬೆಂಗಳೂರು

ಮೇವು ಬೆಲೆ ಏರಿಕೆ, ಹಸಿರು ಹುಲ್ಲಿನ ಕೊರತೆ ಸೇರಿದಂತೆ ಹಲವು ಸಮಸ್ಯೆಗಳಿಂದ ಹಾಲು ಉತ್ಪಾದಕರು ಸಂಕಷ್ಟದಲ್ಲಿದ್ದು, ಹಾಲಿನ ಖರೀದಿ ದರ ಹೆಚ್ಚಿಸುವಂತೆ ರೈತರು ಸರ್ಕಾರಕ್ಕೆ ಮನವಿ ಮಾಡಿದ್ದಾರೆ. ಈ ಕುರಿತು ಸಂಬಂಧಪಟ್ಟವರ ಸಭೆ ಕರೆದು ಚರ್ಚಿಸಿ ಸೂಕ್ತ ನಿರ್ಧಾರ ಕೈಗೊಳ್ಳುವುದಾಗಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ.

ನೆರೆಯ ರಾಜ್ಯಗಳಲ್ಲಿ ಹಾಲಿಗೆ ಹೆಚ್ಚಿನ ಖರೀದಿ ದರ ದೊರೆಯುತ್ತಿರುವ ಹಿನ್ನೆಲೆಯಲ್ಲಿ ರಾಜ್ಯದ ಕೆಲ ರೈತರು ಸಹಕಾರ ಸಂಘಗಳಿಗೆ ಹಾಲು ಪೂರೈಸುವ ಬದಲು ನೆರೆಯ ರಾಜ್ಯಗಳು ಹಾಗೂ ಖಾಸಗಿ ಸಂಸ್ಥೆಗಳಿಗೆ ಹಾಲು ಮಾರಾಟ ಮಾಡುತ್ತಿದ್ದಾರೆ. ಇದರಿಂದ ರಾಜ್ಯದಲ್ಲಿ ಹಾಲಿನ ಉತ್ಪಾದನೆಯಲ್ಲೂ ಇಳಿಕೆಯಾಗಿದೆ ಎಂದು ರೈತರು ತಿಳಿಸಿದ್ದಾರೆ.

ಮೇವು ಮತ್ತು ಹಸಿರು ಹುಲ್ಲಿನ ಬೆಲೆ ಏರಿಕೆಯಿಂದ ಉತ್ಪಾದನಾ ವೆಚ್ಚ ಹೆಚ್ಚಾಗಿರುವ ಹಿನ್ನೆಲೆಯಲ್ಲಿ ಹಾಲಿನ ಖರೀದಿ ದರ ಹೆಚ್ಚಳ ಅಗತ್ಯವಾಗಿದೆ ಎಂದು ರೈತರು ಒತ್ತಾಯಿಸಿದ್ದಾರೆ. ರೈತರ ಬೇಡಿಕೆ ಕುರಿತು ಸಂಬಂಧಪಟ್ಟ ಅಧಿಕಾರಿಗಳು ಹಾಗೂ ಹಾಲು ಉತ್ಪಾದಕರ ಪ್ರತಿನಿಧಿಗಳೊಂದಿಗೆ ಸಭೆ ನಡೆಸಿ ಶೀಘ್ರದಲ್ಲಿ ನಿರ್ಧಾರ ಕೈಗೊಳ್ಳುವುದಾಗಿ ಮುಖ್ಯಮಂತ್ರಿ ಭರವಸೆ ನೀಡಿದ್ದಾರೆ.

# ಹತ್ರಾಸ್ ಹೇಳಿಕೆ: ರಾಹುಲ್‌ಗೆ ಕೋರ್ಟ್ ನೋಟಿಸ್

● ವಿಕ್ರಮ ವಾಹಿನಿ | ಲಖನೌ

ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ವಿರುದ್ಧದ ಮಾನನಷ್ಟ ಮೊಕದ್ದಮೆಗೆ ಸಂಬಂಧಿಸಿದಂತೆ ಹತ್ರಾಸ್‌ನ ಎಂಪಿ-ಎಂಎಲ್ಎ ವಿಶೇಷ ನ್ಯಾಯಾಲಯ ಶನಿವಾರ ನೋಟಿಸ್ ಜಾರಿ ಮಾಡಿದ್ದು, ಪ್ರಕರಣದ ಮುಂದಿನ ವಿಚಾರಣೆಯನ್ನು ಅಕ್ಟೋಬರ್ 15ಕ್ಕೆ ನಿಗದಿಪಡಿಸಿದೆ ಎಂದು ದೂರುದಾರರ ಪರ ವಕೀಲ ಮುನ್ನಾ ಸಿಂಗ್ ಪುಂಧೀರ್ ತಿಳಿಸಿದ್ದಾರೆ.

2024ರ ಡಿಸೆಂಬರ್ 12ರಂದು ಬೂಲ್‌ಗರ್ಹಿ ಗ್ರಾಮಕ್ಕೆ ಭೇಟಿ ನೀಡಿದ್ದ ವೇಳೆ ರಾಹುಲ್ ಗಾಂಧಿ, ಅತ್ಯಾಚಾರ ಆರೋಪಿಗಳು ಮುಕ್ತವಾಗಿ ಓಡಾಡುತ್ತಿದ್ದಾರೆ ಹಾಗೂ ಸಂತ್ರಸ್ತೆಯ ಕುಟುಂಬ ಮನೆಯಲ್ಲೇ ಬಂಧಿಯಾಗಿರುವಂತಾಗಿದೆ ಎಂದು ಹೇಳಿದ್ದರು ಎಂಬುದು ದೂರುದಾರರ ಆರೋಪ.

ಈ ಪ್ರಕರಣದ ಹಿಂದಿನ ಅರ್ಜಿಗಳನ್ನು ಮೇ 13ರಂದು ನ್ಯಾಯಾಲಯ ವಜಾಗೊಳಿಸಿತ್ತು. ಹೊಸ ಅರ್ಜಿ ಅಂಗೀಕಾರಗೊಂಡ ಬಳಿಕ ಪ್ರಕರಣವು ಹೆಚ್ಚುವರಿ ಜಿಲ್ಲಾ ನ್ಯಾಯಾಧೀಶ ವಿಜಯ್ ಕುಮಾರ್-II ಅವರ ನ್ಯಾಯಾಲಯದಲ್ಲಿ ವಿಚಾರಣೆಗೆ ಬಂದಿದೆ.

ಸಿಬಿಐ ತನಿಖೆ ಹಾಗೂ ವಿಚಾರಣೆಯ ಬಳಿಕ ಪ್ರಕರಣದ ಮೂವರು ಆರೋಪಿಗಳು ದೋಷಮುಕ್ತರಾಗಿದ್ದು, ಮತ್ತೊಬ್ಬ ವ್ಯಕ್ತಿ ತಪ್ಪಿತಸ್ಥನೆಂದು ತೀರ್ಪುಗೊಂಡಿದ್ದಾನೆ. ದೂರುದಾರರು ರಾಹುಲ್ ಗಾಂಧಿಗೆ ಕಾನೂನು ನೋಟಿಸ್ ನೀಡಿ, ಮೂವರು ದೋಷಮುಕ್ತರಿಗೆ ತಲಾ 50 ಲಕ್ಷದಂತೆ ಒಟ್ಟು 1.5 ಕೋಟಿ ಪರಿಹಾರಕ್ಕೆ ಬೇಡಿಕೆ ಇಟ್ಟಿದ್ದರು ಎಂದು ವಕೀಲರು ತಿಳಿಸಿದ್ದಾರೆ.

# ಸಹಕಾರ ಪದ್ಧತಿಯಿಂದ ರೈತರ ಪ್ರಗತಿ: ಸಿಎಂ ಅಭಿಮತ

● ವಿಕ್ರಮ ವಾಹಿನಿ | ಶಿವಮೊಗ್ಗ/ ತೀರ್ಥಹಳ್ಳಿ

"ಜೊತೆಗೂಡುವುದು ಆರಂಭ, ಜೊತೆಗೂಡಿ ಆಲೋಚಿಸುವುದು ಪ್ರಗತಿ, ಜೊತೆಗೂಡಿ ಕೆಲಸ ಮಾಡುವುದು ಯಶಸ್ಸು. ಇದೇ ಸಹಕಾರ ತತ್ವ. ಸಹಕಾರ ಪದ್ಧತಿಯಿಂದ ರೈತರ ಪ್ರಗತಿ ಸಾಧ್ಯವಾಗಿದೆ" ಎಂದು ಸಿಎಂ ಡಿ ಕೆ ಶಿವಕುಮಾರ್ ಅವರು ಹೇಳಿದರು. ತೀರ್ಥಹಳ್ಳಿ ತಾಲ್ಲೂಕು ವ್ಯವಸಾಯೋತ್ಪನ್ನ ಮಾರಾಟ ಸಹಕಾರ ಸಂಘ (ಟಿಎಪಿಸಿಎಂಎಸ್) ಅಮೃತ ಮಹೋತ್ಸವವನ್ನು ಶನಿವಾರ ಉದ್ಘಾಟಿಸಿ ಮಾತನಾಡಿದರು.

"ನನಗೂ ಸಹಕಾರಿ ಚಳುವಳಿಗೂ ಅವಿನಾಭಾವ ಸಂಬಂಧ. ರಾಮಕೃಷ್ಣ ಹೆಗಡೆ ಅವರು 1983ರಲ್ಲಿ ಕನಕಪುರ ಕ್ಷೇತ್ರದಿಂದ ಗೆದ್ದು ಮುಖ್ಯಮಂತ್ರಿಯಾದರು. ಆಗ ನನಗೆ 22 ವರ್ಷ. ಆಗ ನಾನೂ ಟಿಎಪಿಸಿಎಂಸ್ ಚುನಾವಣೆಗೆ ಸಾಮಾನ್ಯ ಕ್ಷೇತ್ರದಿಂದ ನಿಂತು ಗೆದ್ದಿದ್ದೆ. ಆದರೂ ನಾನು ಟಿಎಪಿಸಿಎಂಎಸ್ ಕಾರ್ಯಕ್ರಮಕ್ಕೆ ಹೋದವನಲ್ಲ. ಶಾಸಕರಾದ ಅರಗ ಜ್ಞಾನೇಂದ್ರ ಅವರ ಒತ್ತಾಯದ ಮೇರೆಗೆ ಇಲ್ಲಿದೆ ಬಂದೆ" ಎಂದರು. "ಕಬ್ಬಿನ ಕಾರ್ಖಾನೆಗಳು ಸಹಕಾರಿ ಪದ್ಧತಿಯಲ್ಲಿ ನಡೆದು ರೈತರನ್ನು ಕಾಪಾಡಿವೆ. ಮಲೆನಾಡು ಭಾಗದಲ್ಲಿ ಬಸ್, ಆಸ್ಪತ್ರೆ, ಬ್ಯಾಂಕ್‌ಗಳು ಸಹಕಾರಿ ಪದ್ಧತಿಯಲ್ಲಿ ನಡೆಯುತ್ತಿವೆ. ಇದು ಈ ಭಾಗದ ಹೆಗ್ಗಳಿಕೆ. ಟಿಎಪಿಸಿಎಂಎಸ್ 75 ವರ್ಷ ಆಚರಿಸುತ್ತಿದೆ. ಒಂದು ಸಂಸ್ಥೆ ಇಷ್ಟು ವರ್ಷಗಳ ಕಾಲ ಉಳಿಯುವುದು ಕಷ್ಟ. ಅದನ್ನು ತೀರ್ಥಹಳ್ಳಿ ಟಿಎಪಿಸಿಎಂಎಸ್ ಸುಳ್ಳಾಗಿಸಿದೆ. ಇಲ್ಲಿನ ಆಡಳಿತ ಮಂಡಳಿಗೆ ಅಭಿನಂದನೆಗಳು" ಎಂದರು.

"ಮಲೆನಾಡು ಭಾಗಕ್ಕೆ ಹೊಸ ಪ್ರವಾಸೋದ್ಯಮ ನೀತಿ, ಹೆಚ್ಚುವರಿ ಆಡಳಿತ ಭಾಷೆಯಾಗಿ ತುಳು ಎಂದು ಘೋಷಣೆ ಮಾಡಲಾಗಿದೆ. ಹೀಗೆ ಅನೇಕ ಐಸಿಹಾಸಿಕ ನಿರ್ಣಯಗಳನ್ನು ಕರಾವಳಿ ಭಾಗದಲ್ಲಿ ಸಚಿವ ಸಂಪುಟ ನಡೆಸಿ ನಮ್ಮ ಸರ್ಕಾರ ತೆಗೆದುಕೊಂಡಿದೆ. ಮಲೆನಾಡು ಭಾಗವನ್ನು ಉಳಿಸುವ ಬಗ್ಗೆ ಜನರ ಅಭಿಪ್ರಾಯ ಪಡೆದು ತೀರ್ಮಾನ, ಚರ್ಚೆ ಮಾಡೋಣ" ಎಂದರು.




**ಸಿಎಂ ಡಿ ಕೆ ಶಿವಕುಮಾರ್ ಕಸ್ತೂರಿ ರಂಗನ್ ವರದಿ ವಿಚಾರವಾಗಿ ಚರ್ಚಿಸಲು ಶಿವಮೊಗ್ಗದ ತೀರ್ಥಹಳ್ಳಿಯಲ್ಲಿ ಶನಿವಾರ ಹಮ್ಮಿಕೊಂಡಿದ್ದ ಸಾರ್ವಜನಿಕರೊಂದಿಗೆ ನೇರ ಸಂವಾದ ಸಭೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ಸಚಿವರಾದ ರಾಮಲಿಂಗಾರೆಡ್ಡಿ, ಮಧು ಬಂಗಾರಪ್ಪ, ಸಂಸದ ಬಿ ವೈ ರಾಘವೇಂದ್ರ, ಶಾಸಕ ಬೇಳೂರು ಗೋಪಾಲಕೃಷ್ಣ, ಆರಗ ಜ್ಞಾನೇಂದ್ರ, ಶಾರದ ಪೂರ್ಯನಾಯ್ಕ್, ಎಸ್ ಎನ್ ಚನ್ನಬಸಪ್ಪ, ಪರಿಷತ್ ಸದಸ್ಯರಾದ ಬಲ್ಕಿಸ್ ಬಾನು, ಧನಂಜಯ್ ಸರ್ಜಿ, ಡಿ ಎಸ್ ಅರುಣ್ ಮಲೆನಾಡು ಅಭಿವೃದ್ಧಿ ಮಂಡಳಿ ಅಧ್ಯಕ್ಷರಾದ ಮಂಜುನಾಥ ಗೌಡ, ಭದ್ರಾ ಅಚ್ಚುಕಟ್ಟು ಪ್ರದೇಶ ಪ್ರಾಧಿಕಾರ ಅಧ್ಯಕ್ಷ ಅಂಶುಂಮನ್, ಸೂಡಾ ಅಧ್ಯಕ್ಷ ಉಮೇಶ್, ಜವಳಿ ಅಭಿವೃದ್ಧಿ ನಿಗಮದ ಅಧ್ಯಕ್ಷ ಚೇತನ್ ಗೌಡ, ಶ್ರೀನಿವಾಸನ್ ಕರಿಯಣ್ಣ, ಆರ್ ಪ್ರಸನ್ನ ಕುಮಾರ್, ಹೆಚ್ ಪಿ ಯೋಗೀಶ್, ಎಂ ಶ್ರೀಕಾಂತ್ ಮತ್ತಿತರರು ಉಪಸ್ಥಿತರಿದ್ದರು.**

www.VIKRAMAVAHINI.com
ಕನ್ನಡ ದಿನಪತ್ರಿಕೆ
PRGI NO: KARKAN/2018/78481
ಸತ್ಯದ ಹಾದಿ । ಜನಪರ ದನಿ । ರಾಷ್ಟ್ರೀಯ ದೃಷ್ಟಿ
ವಿಕ್ರಮ ವಾಹಿನಿ

# ‘ಆರ್ ಅಶೋಕ್ ಅವರಿಗೆ ಮೀನು ಕಳುಹಿಸಿ, ಅವರ ಆಸೆ ತೀರಿಸೋಣ’

## ಬಂದರಿನ ಅಭಿವೃದ್ಧಿ ಕುರಿತು ಮೀನುಗಾರರು ಹಾಗೂ ಅಧಿಕಾರಿಗಳಿಂದ ಮಾಹಿತಿ ಸಂಗ್ರಹ

● ವಿಕ್ರಮ ವಾಹಿನಿ । ಮಂಗಳೂರು

ಮಂಗಳೂರಿನಲ್ಲಿ ಮೊದಲ ಬಾರಿಗೆ ಸಚಿವ ಸಂಪುಟ ಸಭೆ ನಡೆಸಿ ಹೊಸ ಅಧ್ಯಾಯ ಬರೆದಿರುವ ಸಿಎಂ ಡಿ ಕೆ ಶಿವಕುಮಾರ್ ಅವರು ಶನಿವಾರ ಬೆಳ್ಳಂ ಬೆಳಗ್ಗೆ ಮಂಗಳೂರು ಮೀನುಗಾರಿಕೆ ಬಂದರಿಗೆ ದಿಢೀರ್ ಭೇಟಿ ನೀಡಿ ಮೀನುಗಾರರ ಮನದ ಮಾತುಗಳಿಗೆ, ಅವರ ಸಮಸ್ಯೆಗಳಿಗೆ ಕಿವಿಗೊಟ್ಟರು.

ಬೆಳಗ್ಗೆ 6 ಗಂಟೆಗೆ ಬಂದರಿಗೆ ಭೇಟಿ ನೀಡಿದ ಸಿಎಂ, ಬಂದರು ಪ್ರದೇಶದ ಪರಿಸ್ಥಿತಿಯನ್ನು ಕಣ್ಣಾರೆ ಕಂಡರು. ಜತೆಗೆ ಮೀನುಗಾರಿಕೆ ಬೋಟ್ ನಲ್ಲಿ ಪ್ರಯಾಣ ಮಾಡಿ ಬಂದರು ಅಭಿವೃದ್ಧಿಗೆ ಈಗಾಗಲೇ ಕೈಗೊಂಡಿರುವ ಅಭಿವೃದ್ಧಿ ಯೋಜನೆಗಳು ಹಾಗೂ ಮುಂದೆ ಕೈಗೊಳ್ಳಬೇಕಾಗಿರುವ ಕ್ರಮಗಳ ಬಗ್ಗೆ ಅಧಿಕಾರಿಗಳು ಹಾಗೂ ಮೀನುಗಾರರ ಮುಖಂಡರಿಂದ ಮಾಹಿತಿ ಪಡೆದರು.

"ಸದ್ಯ 200 ಬೋಟ್ ಗಳಿಗೆ ಡಾಕ್ ವ್ಯವಸ್ಥೆ ಇದ್ದು, ಪಾಲ್ಗುಣಿ, ನೇತ್ರಾವತಿ ನದಿ ಹಾಗೂ ಅರಬ್ಬಿ ಸಮುದ್ರ ಸೇರುವ ತ್ರಿವೇಣಿ ಸಂಗಮ ಜಾಗದಲ್ಲಿ ಬೋಟ್ ಗಳಿಗೆ ಹೊಸ ಡಾಕ್ ಗಳನ್ನು ಮಾಡಿದರೆ ಹೆಚ್ಚಿನ ಬೋಟ್ ಗಳ ನಿಲ್ದಾಣಕ್ಕೆ ಅವಕಾಶವಾಗುತ್ತದೆ. ಇದಕ್ಕಾಗಿ ಡಜ್ಜಿಂಗ್ ಮಾಡಬೇಕಾಗಿದೆ. 25 ವರ್ಷಗಳಿಂದ ಡಜ್ಜಿಂಗ್ ಆಗಿಲ್ಲ, ಎರಡು ನದಿ ಹಾಗೂ ಅಳಿವೆ ಬಾಗಿಲಲ್ಲಿ ಡಜ್ಜಿಂಗ್ ಮಾಡಬೇಕಾಗಿದೆ" ಎಂದು ಮೀನುಗರರ ಸಂಘದ ಮಾಜಿ ಅಧ್ಯಕ್ಷ ಚೇತನ್ ಬೆಂಗ್ರೆ ಹಾಗೂ ಮೋಹನ್ ಬೆಂಗ್ರೆ ಅವರು ಸಿಎಂಗೆ ವಿವರಿಸಿದರು.

"ಬಂದರಿನ ತಟದಲ್ಲಿ ಮರಳು ತುಂಬಿಕೊಂಡಿರುವ ಹಿನ್ನೆಲೆಯಲ್ಲಿ ಅವುಗಳನ್ನು ತೆಗೆಯಬೇಕು. ಈ ಭಾಗದಲ್ಲಿ ಎಲ್ಲಿ ಆಳವಾದ ಜಾಗ ಇದೆ ಎಂದು ಚಾನಲ್ ಮಾರ್ಕಿಂಗ್ ಬಾಯ್ಸ್ ಗಳನ್ನು ಹಾಕಿದರೆ ಬೋಟ್ ಗಳ ಸುಗಮ ಸಾಗಣೆಗೆ ನೆರವಾಗುತ್ತದೆ" ಎಂದು ಅಧಿಕಾರಿಗಳು ಮಾಹಿತಿ ನೀಡಿದರು. ನಂತರ ಅಗತ್ಯ ಕ್ರಮಗಳನ್ನು ಕೈಗೊಳ್ಳುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

**ವ್ಯಾಪಾರ ಸ್ಥಗಿತ; ಸಿಎಂ ಸಿಡಿಮಿಡಿ:** ಇನ್ನು ಸಿಎಂ ಭೇಟಿ ಹಿನ್ನೆಲೆಯಲ್ಲಿ ಬಂದರಿನಲ್ಲಿ ವ್ಯಾಪಾರ ಮಾಡಲು ಮೀನುಗಾರರಿಗೆ ಅವಕಾಶ ನೀಡದಿರುವುದನ್ನು ಗಮನಿಸಿದ ಸಿಎಂ ಅಧಿಕಾರಿಗಳ ವಿರುದ್ಧ ಸಿಡಿಮಿಡಿಗೊಂಡರು. ಯಾವುದೇ ಕಾರಣಕ್ಕೂ ವ್ಯಾಪಾರ ನಿಲ್ಲಬಾರದು, ಇದರಿಂದ ಮೀನುಗಾರರು ಹಾಗೂ ವ್ಯಾಪಾರಿಗಳ ಜೀವನಕ್ಕೆ ತೊಂದರೆಯಾಗಬಾರದು. ತಕ್ಷಣ ವ್ಯಾಪಾರ ಪ್ರಾರಂಭಿಸಿ" ಎಂದು ಸೂಚಿಸಿದರು.

**ವ್ಯಾಪಾರ ನಿಲ್ಲಿಸಿದವರ ವಿರುದ್ಧ ಕ್ರಮ:** ‘ನಾನು ಭೇಟಿ ನೀಡಿರುವ ಸಂದರ್ಭದಲ್ಲಿ ಮಂಗಳೂರಿನ ಬಂದರು ಚಟವಟಿಕೆಗಳು ಸ್ಥಬ್ದವಾಗಿವೆ. ಇದಕ್ಕೆ ಕಾರಣ ಏನು ಎಂಬುದನ್ನು ಅರಿಯಲು ವರದಿ ನೀಡುವಂತೆ ಡಿಸಿ ಹಾಗೂ ಆಯುಕ್ತರಿಗೆ ನಿರ್ದೇಶನ ನೀಡಿದ್ದೇನೆ. ಇದಕ್ಕೆ ಅಧಿಕಾರಿಗಳು ಕಾರಣರಾಗಿದ್ದರೆ ಅವರನ್ನು ಅಮಾನತು ಮಾಡುತ್ತೇನೆ. ಅಕ್ರಮಗಳನ್ನು ಮುಚ್ಚಿಡುವ ದೃಷ್ಟಿಯಿಂದ ಈ ಕೆಲಸ ಮಾಡಿದ್ದರೆ ಸೂಕ್ತ ಕ್ರಮ ಕೈಗೊಳ್ಳುತ್ತೇನೆ. ನನಗೆ ಯಾವ ಭದ್ರತೆಯ ಅಗತ್ಯವಿಲ್ಲ. ನಾನು ಮೀನುಗಾರರು, ವರ್ತಕರು ಹಾಗೂ ದೋಣಿಯನ್ನೇ ನಂಬಿರುವ ಬೆಸ್ತ ಸಮುದಾಯದ ಬದುಕಿನ ವಾಸ್ತವ ಸ್ಥಿತಿಗತಿಯನ್ನು ಅರಿಯಲು ಬಂದಿದ್ದೇನೆ’ ಎಂದರು.



ಸಿಎಂ ಡಿ ಕೆ ಶಿವಕುಮಾರ್ ಮಂಗಳೂರಿನ ಬಂದರಿಗೆ ಶನಿವಾರ ಬೆಳಗಿನ ಜಾವ ದಿಢೀರ್ ಭೇಟಿ ನೀಡಿ ಪರಿಶೀಲನೆ ನಡೆಸಿ, ಮೀನುಗಾರು ಹಾಗೂ ವ್ಯಾಪಾರಿಗಳೊಂದಿಗೆ ಮಾತುಕತೆ ನಡೆಸಿದರು. ಸಚಿವರಾದ ಯು ಟಿ ಖಾದರ್, ಕಾಂಗ್ರೆಸ್ ಮುಖಂಡರಾದ ಪದ್ಮರಾಜ್, ಇನಾಯತ್ ಅಲಿ, ದಕ್ಷಿಣ ಕನ್ನಡ ಜಿಲ್ಲಾ ಟ್ರಾಲ್ ಬೋಟ್ ಮೀನುಗಾರರ ಸಂಘದ ಮಾಜಿ ಅಧ್ಯಕ್ಷರಾದ ಚೇತನ್ ಬೆಂಗ್ರೆ, ಮೋಹನ್ ಬೆಂಗ್ರೆ ಮತ್ತಿತರರ ಸ್ಥಳೀಯ ಮುಖಂಡರು ಇದ್ದರು. ಸಿಎಂ ನಂತರ ಮಾಧ್ಯಮಗಳ ಜೊತೆ ಮಾತನಾಡಿದರು.

**ಅಕ್ರಮ, ಕಾನೂನು ಉಲ್ಲಂಘಿಸಿದರೆ ಕ್ರಮ:** "ದೇಶದ ವಿವಿಧ ಮೂಲೆಗಳಿಂದ ಇಲ್ಲಿಗೆ ಬಂದು ವ್ಯಾಪಾರ ವಹಿವಾಟು ನಡೆಸುತ್ತಾರೆ. ಅವರಿಗೆ ಯಾವುದೇ ರೀತಿಯ ತೊಂದರೆ ಆಗಬಾರದು. ಮೂಲ ಸೌಕರ್ಯಗಳು ದೊರೆಯಬೇಕು, ವಾಹನ ಸಂಚಾರ ಸುಗಮವಾಗಿರಬೇಕು. ಇಲ್ಲಿ ರಸ್ತೆಯನ್ನು ನಿರ್ಬಂದಿಸಿರುವುದು, ಅಕ್ರಮವಾಗಿ ಕಾಂಪೌಂಡ್ ಹಾಕಿರುವುದೆಲ್ಲವೂ ನನ್ನ ಗಮನಕ್ಕೆ ಬಂದಿದೆ.

ಕಾನೂನು ಉಲ್ಲಂಘಿಸಿರುವವರು ಎಷ್ಟೇ ದೊಡ್ಡವರಾಗಿದ್ದರೂ, ಪ್ರಭಾವಶಾಲಿಗಳಾದರು ಯಾವುದೇ ಮುಲಾಜಿಲ್ಲದೇ ಕ್ರಮ ಜರುಗಿಸಬೇಕು. ಖಾಸಗಿ ಆಸ್ತಿಯಾಗಿದ್ದರೆ ದಾಖಲೆಗಳನ್ನು ನೋಡಿ ಸರ್ಕಾರದ ವಶಕ್ಕೆ ಪಡೆಯುತ್ತೇವೆ. ಅಭಿವೃದ್ಧಿಯನ್ನು ಮಾಡುತ್ತೇವೆ" ಎಂದು ಖಡಕ್ ಎಚ್ಚರಿಕೆ ನೀಡಿದರು.

"ಸಣ್ಣ ಮೀನುಗಾರರು ಬೋಟ್ ಗಳನ್ನು ನಿಲ್ಲಿಸುವ ವಿಚಾರವಾಗಿ ಎದುರಿಸುತ್ತಿರುವ ಸಮಸ್ಯೆಗಳನ್ನು ನನ್ನ ಗಮನಕ್ಕೆ ತಂದಿದ್ದಾರೆ. ಜಿಲ್ಲಾ ಉಸ್ತುವಾರಿ ಮಂತ್ರಿಗಳು ಹಾಗೂ ಅಧಿಕಾರಿಗಳೊಂದಿಗೆ ಚರ್ಚಿಸಿ ಈ ಬಗ್ಗೆ ತೀರ್ಮಾ ಮಾಡುತ್ತೇವೆ" ಎಂದು ಹೇಳಿದರು.

"ಮೀನುಗಾರರದ್ದು ದೊಡ್ಡ ಸಮುದಾಯ. ಎಲ್ಲಾ ವರ್ಗದ ಜನ ಸೌಹಾರ್ದತೆಯಿಂದ ಇಲ್ಲಿ ಕೆಲಸ ಮಾಡುತ್ತಿದ್ದಾರೆ. ಆರ್ಥಿಕ ಶಕ್ತಿ ಕೇಂದ್ರ. ಈ ಸಮುದಾಯಕ್ಕೆ ಪ್ರೋತ್ಸಾಹ ಕೊಡಬೇಕು. ಹೀಗಾಗಿ, ಇಲ್ಲಿ ಪ್ರತ್ಯೇಕ ವಿಶ್ವವಿದ್ಯಾಲಯವನ್ನು ಸ್ಥಾಪನೆ ಮಾಡಲಾಗುವುದು. ನಾವು ಈಗ ಇರುವ 40-50 ಸೀಟುಗಳನ್ನು 200ಕ್ಕೆ ಏರಿಕೆ ಮಾಡಲಾಗುವುದು, ವಿದ್ಯಾಭ್ಯಾಸ, ಸಮುದ್ರ ಮೆಟ್ರೋ, ನೀಲಿ ಆರ್ಥಿಕತೆಗೆ ಒತ್ತು ನೀಡುವ ಕುರಿತು ನಮ್ಮ ಸರ್ಕಾರ ತೀರ್ಮಾನಿಸಿದೆ" ಎಂದರು.

**16 ಸಾವಿರ ಕೋಟಿ ನಿಮ್ಮ ಮೂಲಸೌಕರ್ಯಕ್ಕೆ:** "ಈಗಾಗಲೇ 32 ಸಾವಿರ ಕೋಟಿ ಮೊತ್ತವನ್ನು ಅಭಿವೃದ್ಧಿಗಾಗಿ ಘೋಷಣೆ ಮಾಡಿದ್ದೇವೆ. ಇದರಲ್ಲಿ 16 ಸಾವಿರ ಕೋಟಿ ಇಲ್ಲಿನ ಗ್ರಾಮೀಣ ಭಾಗದ ರಸ್ತೆ, ನೀರಿನಂಥ ಮೂಲ ಸೌಕರ್ಯಕ್ಕೆ ನೀಡಲಾಗಿದೆ. ಮಂಗಳೂರು, ಕಾರವಾರಗಳಲ್ಲಿ ಎಲ್ಲೆಲ್ಲಿ ವಹಿವಾಟು ನಡೆಯುತ್ತದೆ ಎಂಬುದರ ಬಗ್ಗೆ ಸಮಗ್ರ ವರದಿ ಪಡೆದು, ಸಮುದ್ರ ಪಕ್ಕದ ಮೀನುಗಾರ ಕುಟುಂಬಕ್ಕೆ ಅಗತ್ಯ ತಾಂತ್ರಿಕ ನೆರವನ್ನು ನೀಡಲು ಯೋಜನೆ ರೂಪಿಸುತ್ತೇವೆ. ಕೆಲವೊಂದು ಸಮಸ್ಯೆಗಳನ್ನು ಮೀನುಗಾರರು ನೇರವಾಗಿ ಹಂಚಿಕೊಳ್ಳಲು ಸಾಧ್ಯವಾಗದೇ ಇರಬಹುದು. ಚಿಂತೆ ಇಲ್ಲ, ಗುಪ್ತ ವರದಿ ತರಿಸಿಕೊಳ್ಳುತ್ತೇನೆ. ಮಾಫಿಯಾಗಳು ಇದೆಯಾ. ತೊಂದರೆ ಆಗುತ್ತಿದೆಯಾ ಎನ್ನುವುದನ್ನು ಗಮನಿಸುತ್ತೇನೆ. ಒಟ್ಟಾರೆ, ನ್ಯಾಯ ಬದ್ಧವಾಗಿ ವ್ಯಾಪಾರ ವಹಿವಾಟು ನಡೆಯಬೇಕು. ಮೀನುಗಾರರ ಸಮುದಾಯ ಅಭಿವೃದ್ಧಿಯಾಗಬೇಕು ಎನ್ನುವುದು ನಮ್ಮ ಗುರಿ" ಎಂದರು.

ಅಳಿವೆಬಾಗಿಲಲ್ಲಿ 35 ವರ್ಷದಿಂದ ಹೂಳು ಎತ್ತಿಲ್ಲ ಅಪಾಯಕಾರಿಯಾಗಿದೆ ಎಎಂಬ ಮಾಧ್ಯಮಗಳ ಪ್ರಶ್ನೆಗೆ ಉತ್ತರಿಸಿದ ಸಿಎಂ, "ಈ ವಿಚಾರ ನನ್ನ ಗಮನಕ್ಕೆ ಬಂದಿದೆ. ಅಲ್ಲಿ ದೋಣಿಯೊಂದು ನಿಂತಿದೆ. ಅದು ಇದೇ ಕಾರಣಕ್ಕೆ ಎನ್ನುವುದು ಸಚಿವ ಖಾದರ್ ಅವರು ವಿವರಿಸಿದ್ದಾರೆ.

ಹೂಳನ್ನು ಸಮುದ್ರಕ್ಕೆ ಬಿಡಬೇಕು ಎಂದು ಕೆಲವರು ಸಲಹೆ ನೀಡಿದ್ದಾರೆ. ಇನ್ನೂ ಕೆಲವರು ಆ ಪ್ರದೇಶವನ್ನು ಮತ್ತಷ್ಟು ವಿಸ್ತಾರ ಮಾಡಿ ಎಂದೂ ಹೇಳಿದ್ದಾರೆ. ಕೇಂದ್ರದ ತಾಂತ್ರಿಕ ಸಮಿತಿ ಇದಕ್ಕೆ ಸಲಹೆ ಕೊಡಬೇಕಂತೆ. ಈ ಬಗ್ಗೆ ಸೂಕ್ತ ಮಾಹಿತಿ ಪಡೆದು ಅಗತ್ಯ ಕ್ರಮ ಕೈಗೊಳುತ್ತೇವೆ.

ಹೂಳು ತೆಗೆಯುವ ಪ್ರಕ್ರಿಯೆಗೆ ಲೀಸ್ ಪಡೆಯಬೇಕೆ ಅಥವಾ ಯಂತ್ರ, ದೋಣಿಗಳನ್ನು ಖರೀದಿಸಿ ಹೂಳು ತೆಗೆಸಬೇಕೆ ಎನ್ನುವುದನ್ನು ತೀರ್ಮಾನಿಸುತ್ತೇನೆ. ಈ ಹಿಂದೆ ಸರ್ಕಾರದಿಂದಲೇ ಹೂಳು ತೆಗೆಸುವ ವ್ಯವಸ್ಥೆ ಇತ್ತು. ಈಗಿಲ್ಲ" ಎಂದರು.

**ಕರಾವಳಿ ರಾಜ್ಯ ಮಾತ್ರವಲ್ಲ, ದೇಶದ ಸಂಪತ್ತು:** ನಿನ್ನೆ ಸಚಿವ ಸಂಪುಟಕ್ಕೆ ಈ ಭಾಗದ ಜನರಿಂದ ಬೆಂಬಲ ವ್ಯಕ್ತವಾಗಿದೆಯೇ ಎಂದು ಕೇಳಿದಾಗ "ಕರಾವಾಳಿ ರಾಜ್ಯದ ಸಂಪತ್ತು ಮಾತ್ರವಲ್ಲ ರಾಷ್ಟ್ರದ ಸಂಪತ್ತು ಕೂಡ ಆಗಿದೆ. ಇದನ್ನು ನಾವು ಕಾಪಾಡಬೇಕು. ಮಂಗಳೂರಿಗಾಗಿ ಅಭಿವೃದ್ಧಿಯ ಪಥ ಚಿಂತನೆ ಮಾಡುತ್ತಿದ್ದೇವೆ. ನಮ್ಮ ಸರ್ಕಾರ ಕರವಾಳಿ ಭಾಗದ ಸಮಗ್ರ ಅಭಿವೃದ್ಧಿಗೆ ಒತ್ತು ನೀಡಲಿದೆ. ಇದಕ್ಕಾ 3-4 ಹೊಸ ನೀತಿಗಳನ್ನು ಜಾರಿ ಮಾಡಲು ಚಿಂತನೆ ನಡೆಸಿದ್ದೇವೆ. ಕರಾವಳಿಯಲ್ಲಿ ಹೂಡಿಕೆದಾರರಿಗೆ ಪ್ರೋತ್ಸಾಹ ಕೊಡಬೇಕು. ಹೊಸದಾಗಿ ಹೂಡಿಕೆ ಮಾಡುವವರಿಗೆ ಮೂಲಸೌಕರ್ಯಗಳನ್ನು ಒದಗಿಸಬೇಕು. ಅವರು ಬಂದಾಗ ಇಳಿದುಕೊಳ್ಳುವುದಕ್ಕೆ ಒಳ್ಳೆಯ ಹೋಟೆಲ್ ಗಳ ನಿರ್ಮಾಣ ಮಾಡಬೇಕು. ಇರುವ ಜಾಗವನ್ನು ಗುರಿತಿಸಿ ಕಾನೂನಿನ ಚೌಕಟ್ಟಿನಲ್ಲಿ ಪಿಪಿಪಿ ಮಾದರಿಯಲ್ಲಿ ನಿರ್ಮಾಣಕ್ಕೆ ಅವಕಾಶ ಮಾಡಿಕೊಡುತ್ತೇವೆ" ಎಂದು ವಿವರಿಸಿದರು.

ಆರ್ ಅಶೋಕ್ ಅವರಿಗೆ ಮೀನು ಕಳುಹಿಸಿ ಆಸೆ ತೀರಿಸೋಣ

"ವಿರೋಧ ಪಕ್ಷ ನಾಯಕ ಅಶೋಕ್ ಅವರಿಗೆ ಮೀನು ತಿನ್ನುವ ಆಸೆಯಾಗಿದೆ. ಅವರಿಗೆ ಮೀನು ಬೇಕಂತೆ. ಮಂಗಳೂರಿನಿಂದಲೇ ಮೀನನ್ನು ಕಳುಹಿಸಿ, ಅವರ ಆಸೆ ತೀರಿಸೋಣ" ಎಂದು ತಿರುಗೇಟು ನೀಡಿದರು. ‘ನಾವು ಕರಾವಳಿ ಅಭಿವೃದ್ಧಿಯ ಬಗ್ಗೆ ಚಿಂತನೆ ಮಾಡುತ್ತಿದ್ದೇವೆ. ವಿರೋಧ ಪಕ್ಷಗಳು ನಮ್ಮ ಅಭಿವೃದ್ಧಿಯ ಪ್ರವಾಸದ ಬಗ್ಗೆ ಕುಹಕಿ ಮಾತುಗಳನ್ನು ಆಡುತ್ತಿವೆ. ವಿರೋಧ ಪಕ್ಷದ ನಾಯಕರು ಮುಖ್ಯಮಂತ್ರಿಗಳು ಮೀನು ತಿನ್ನೋಕೆ ಮಂಗಳೂರಿಗೆ ಹೋಗಿದ್ದಾರೆ ಎಂದಿದ್ದಾರೆ.

**ತುಳು ಭಾಷೆ ಈ ಭಾಗದ ಜನರ ಹೆಮ್ಮೆ:** ತುಳು ಭಾಷೆಯನ್ನು ಎರಡನೇ ಅಧಿಕೃತ ಭಾಷೆಯಾಗಿ ಘೋಷಣೆ ಮಾಡಿರುವ ಬಗ್ಗೆ ಕೇಳಿದಾಗ, "ತುಳು ಭಾಷೆ ಈ ಭಾಗದ ಜನರ ಹೆಮ್ಮೆ. ಇದು ಈ ಭಾಗದ ಜನರ ನಿರೀಕ್ಷೆಯಗಿತ್ತು. ಎಲ್ಲಾ ಪಕ್ಷದ ನಾಯಕರು ಇದನ್ನು ಬಯಸಿದ್ದರು. ಹೀಗಾಗಿ ನಮ್ಮ ಸರ್ಕಾರ ಮೊದಲ ಬಾರಿಗೆ ಮಂಗಳೂರಿನಲ್ಲಿ ಸಚಿವ ಸಂಪುಟ ಸಭೆ ನಡೆಸಿ ತೀರ್ಮಾನ ಮಾಡಿದ್ದೇವೆ" ಎಂದು ತಿಳಿಸಿದರು.

ಕಸ್ತೂರಿ ರಂಗನ್ ವಿಚಾರವಾಗಿ ಜನರ ಅಭಿಪ್ರಾಯ ಸಂಗ್ರಹಿಸುತ್ತಿರುವೆ:

ಕಸ್ತೂರಿ ರಂಗನ್ ವಿಚಾರವಾಗಿ ತೀರ್ಥಹಳ್ಳಿ ಸೇರಿದಂತೆ ಇತರ ಭಾಗಗಳಿಗೆ ಭೇಟಿ ನೀಡುತ್ತಿರುವ ಬಗ್ಗೆ ಕೇಳಿದಾಗ, "ಈ ವಿಚಾರವಾಗಿ ಚರ್ಚೆ ಮಾಡಲು ವಿಶೇಷ ಅಧಿವೇಶನ ಕರೆಯಲಾಗಿದೆ. ಅಲ್ಲಿ ಚರ್ಚೆ ಮಾಡುವ ಮುನ್ನ ಈ ಭಾಗದ ಜನರ ಅಭಿಪ್ರಾಯ ಸಂಗ್ರಹಿಸಲು ಭೇಟಿ ನೀಡುತ್ತಿರುವೆ. ಅವರ ಅಭಿಪ್ರಾಯ ಸಂಗ್ರಹಿಸಿದ ಬಳಿಕ ನಾವು ಕೇಂದ್ರದ ಅಧಿಸೂಚನೆ ವಿರುದ್ಧ ಕಠಿಣ ನಿಲುವು ತಾಳಬೇಕಾಗುತ್ತದೆಯೇ ಎಂದು ತೀರ್ಮಾನ ಮಾಡಲಾಗುವುದು. ನಮಗೆ ನಮ್ಮ ಜನರ ಬದುಕು ಮುಖ್ಯ ಹೀಗಾಗಿ ಕಾನೂನು ಚೌಕಟ್ಟಿನಲ್ಲಿ ಏನೆಲ್ಲಾ ಮಾಡಲು ಸಾಧ್ಯವೋ ಅದನ್ನು ಮಾಡುತ್ತೇವೆ" ಎಂದರು.

ಗ್ಯಾರಂಟಿ ಯೋಜನೆಗಳಿಗೆ ಹಣ ಇಲ್ಲ, ಸಚಿವ ಸಂಪುಟ ಯೋಜನೆಗಳಿಗೆ ಹಣ ಹೇಗೆ ಹೊಂದಿಸುತ್ತಾರೆ ಎಂಬ ಪ್ರಶ್ನೆ ಬಗ್ಗೆ ಕೇಳಿದಾಗ, "ನಾವು ನುಡಿದಂತೆ ನಡೆಯುತ್ತೇವೆ. ಅದೇ ನಮ್ಮ ಶಕ್ತಿ" ಎಂದರು.

# ಬೀದರ್‌ನಲ್ಲಿ ಧಾರಾಕಾರ ಮಳೆ

● ವಿಕ್ರಮ ವಾಹಿನಿ । ಬೀದರ್

ಗಡಿ ಜಿಲ್ಲೆ ಬೀದರ್‌ನಲ್ಲಿ ಶನಿವಾರ ಸಂಜೆ ಸತತ ಎರಡು ಗಂಟೆಗಳ ಕಾಲ ಧಾರಾಕಾರ ಮಳೆ ಸುರಿದಿದ್ದು, ಹಲವೆಡೆ ರಸ್ತೆಗಳು ಜಲಾವೃತಗೊಂಡು ವಾಹನ ಸವಾರರು ಪರದಾಡುವಂತಾಯಿತು.

ಬೀದರ್ ನಗರ ಸೇರಿದಂತೆ ಔರಾದ್, ಭಾಲ್ಕಿ ಹಾಗೂ ಜಿಲ್ಲೆಯ ವಿವಿಧೆಡೆ ಭಾರಿ ಮಳೆಯಾಗಿದೆ. ಮಳೆ ನೀರು ರಸ್ತೆಗಳ ಮೇಲೆ ಹರಿದ ಪರಿಣಾಮ ವಾಹನ ಸಂಚಾರಕ್ಕೆ ತೊಂದರೆಯಾಗಿ, ಜನಜೀವನ ಅಸ್ತವ್ಯಸ್ತಗೊಂಡಿತು.

ಬಂಗಾಳ ಕೊಲ್ಲಿಯಲ್ಲಿ ಉಂಟಾಗಿರುವ ವಾಯುಭಾರ ಕುಸಿತದ ಪರಿಣಾಮ ಉತ್ತರ ಕರ್ನಾಟಕದ ಹಲವು ಜಿಲ್ಲೆಗಳಲ್ಲಿ ಮಳೆಯಾಗುವ ಸಾಧ್ಯತೆ ಇದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಬೀದರ್ ಸೇರಿದಂತೆ ಉತ್ತರ ಕರ್ನಾಟಕದ ಕೆಲವು ಭಾಗಗಳಲ್ಲಿ ಮುಂದಿನ ದಿನಗಳಲ್ಲೂ ಭಾರಿ ಮಳೆಯಾಗುವ ಸಾಧ್ಯತೆ ಇರುವುದರಿಂದ ಮುನ್ನೆಚ್ಚರಿಕೆ ವಹಿಸುವಂತೆ ಸೂಚಿಸಲಾಗಿದೆ.

# *ಬಡ ಕುಟುಂಬಗಳಿಗೆ ಆಸರೆ; 52 ಹೆಣ್ಣುಮಕ್ಕಳ ಸಾಮೂಹಿಕ ವಿವಾಹ*

● ವಿಕ್ರಮ ವಾಹಿನಿ । ನಳಂದ (ಬಿಹಾರ)

*ಹೆಣ್ಣುಮಕ್ಕಳ ಮದುವೆಗಾಗಿ ಸಾಲ ಮಾಡಿ ಆರ್ಥಿಕ ಸಂಕಷ್ಟಕ್ಕೆ ಸಿಲುಕುವ ಬಡ ಕುಟುಂಬಗಳಿಗೆ ಆಸರೆಯಾಗಿರುವ ನಳಂದದ ಯುವ ಸ್ವಯಂಸೇವಕರ ತಂಡ ಇದುವರೆಗೆ 52 ಹೆಣ್ಣುಮಕ್ಕಳ ಸಾಮೂಹಿಕ ವಿವಾಹ ನೆರವೇರಿಸಿದೆ. ಸೌರಭ್ ಕುಮಾರ್ ನೇತೃತ್ವದ ಈ ತಂಡ ಯಾವುದೇ ಸರ್ಕಾರಿ ನೆರವಿಲ್ಲದೆ ಪರಸ್ಪರ ಸಹಕಾರದ ಮೂಲಕ ಈ ಸೇವಾ ಕಾರ್ಯ ನಡೆಸುತ್ತಿದೆ.*

*2019ರಲ್ಲಿ ಸೌರಭ್ ಕುಮಾರ್ ಅವರ ತಾಯಿಯ ಸಲಹೆಯಿಂದ ಆರಂಭವಾದ ಈ ಅಭಿಯಾನ, ಕೋವಿಡ್ ಅವಧಿಯಲ್ಲಿ ಬಡವರಿಗೆ ಆಹಾರ ವಿತರಿಸುವ ಕಾರ್ಯದೊಂದಿಗೆ ಮತ್ತಷ್ಟು ವಿಸ್ತಾರಗೊಂಡಿತು. ಬಳಿಕ ಸಮಾನ ಮನಸ್ಕ ಯುವಕರು ತಂಡಕ್ಕೆ ಸೇರ್ಪಡೆಯಾಗಿ ಸಾಮೂಹಿಕ ವಿವಾಹ ಕಾರ್ಯಕ್ರಮ ಆರಂಭಿಸಿದರು.*

***ರೂ 3 ಲಕ್ಷದವರೆಗೆ ವೆಚ್ಚ:*** *ಒಂದು ವಿವಾಹಕ್ಕೆ ಮಂಟಪ, ಊಟ, ಅಲಂಕಾರ ಹಾಗೂ ಮದುವೆಯ ವಿಧಿವಿಧಾನ ಸೇರಿದಂತೆ ಸುಮಾರು ರೂ 2.5ರಿಂದ ರೂ 3 ಲಕ್ಷದವರೆಗೆ ವೆಚ್ಚವಾಗುತ್ತದೆ. ಇದರ ಜತೆಗೆ ನವದಂಪತಿಗೆ ಹಾಸಿಗೆ, ದಿಂಬು, ಕಪಾಟು, ಅಡುಗೆ ಪಾತ್ರೆಗಳು, ಹೊಸ ಬಟ್ಟೆಗಳು, ವಧುವಿನ ಅಲಂಕಾರ ಸಾಮಗ್ರಿಗಳು ಹಾಗೂ ಮನೆಯ ಅಗತ್ಯ ವಸ್ತುಗಳನ್ನು ಒಳಗೊಂಡ ಪೆಟ್ಟಿಗೆಯನ್ನೂ ತಂಡ ನೀಡುತ್ತದೆ.*



*ವರ್ಷಕ್ಕೆ ಮೂರು ಬಾರಿ ಸಾಮೂಹಿಕ ವಿವಾಹ ಆಯೋಜಿಸಲಾಗುತ್ತದೆ. ಮಳೆಗಾಲದ ಬಳಿಕ, ಮಹಾಶಿವರಾತ್ರಿ ಹಾಗೂ ದೇವ್ ಉತ್ತಾನಿ ಏಕಾದಶಿ ಸಂದರ್ಭದಲ್ಲಿ ಕಾರ್ಯಕ್ರಮ ನಡೆಯುತ್ತದೆ. ಕನಿಷ್ಠ ಐದು ಜೋಡಿಗಳು ನೋಂದಾಯಿಸಿಕೊಂಡ ಬಳಿಕ ವಿವಾಹ ಸಮಾರಂಭ ಆಯೋಜಿಸಲಾಗುತ್ತದೆ.*

***ಕುಟುಂಬಗಳೇ ವಧು-ವರರ ಆಯ್ಕೆ:*** *ಯಾವ ಜೋಡಿಗೆ ಯಾರೊಂದಿಗೆ ವಿವಾಹವಾಗಬೇಕು ಎಂಬುದನ್ನು ಸಮಿತಿ ನಿರ್ಧರಿಸುವುದಿಲ್ಲ. ವಧು-ವರರ ಕುಟುಂಬಗಳ ಒಪ್ಪಿಗೆಯ ಬಳಿಕವೇ ಸಮಿತಿ ವಿವಾಹದ ವ್ಯವಸ್ಥೆ ಕೈಗೆತ್ತಿಕೊಳ್ಳುತ್ತದೆ. ನೋಂದಣಿ ಕಡ್ಡಾಯವಾಗಿದ್ದು, ಆಧಾರ್ ಸೇರಿದಂತೆ ಅಗತ್ಯ ದಾಖಲೆಗಳನ್ನು ಪರಿಶೀಲಿಸಲಾಗುತ್ತದೆ.*

*ಮದುವೆಗೆ ಮುನ್ನವೇ ವಧು-ವರರ ಬಟ್ಟೆ ಸೇರಿದಂತೆ ಅಗತ್ಯ ವಸ್ತುಗಳನ್ನು ಒದಗಿಸಲಾಗುತ್ತದೆ.*

***ಸ್ವಯಂಸೇವಕರ ಸಹಕಾರ:*** *ಪ್ರತಿ ಕಾರ್ಯಕ್ರಮದ ಹಿಂದೆ ಎಳೆಂಟು ಮಂದಿ ಪ್ರಮುಖ ಸ್ವಯಂಸೇವಕರ ತಂಡ ಕಾರ್ಯನಿರ್ವಹಿಸುತ್ತದೆ. ವಿಡಿಯೋಗ್ರಾಫರ್ ರಮೇಶ್ ಕುಮಾರ್ ಕ್ಯಾಮೆರಾ, ಡ್ರೋನ್ ಹಾಗೂ ಸಿಬ್ಬಂದಿಯನ್ನು ಉಚಿತವಾಗಿ ಒದಗಿಸುತ್ತಾರೆ. ಹೋಟೆಲ್ ಮಾಲೀಕ ಮಂಟು ಪಂಡಿತ್ ಊಟ ಮತ್ತು ಅಡುಗೆ ವ್ಯವಸ್ಥೆ ನೋಡಿಕೊಳ್ಳುತ್ತಾರೆ. ಪಪ್ಪು ರಾಮ್ ಹಾಗೂ ರೈತ ಶಿವಧಾರಿ ಪ್ರಸಾದ್ ಕಾರ್ಯಕ್ರಮದ ಸ್ಥಳ, ಡೇರೆ ಹಾಗೂ ಇತರ ವ್ಯವಸ್ಥೆಗಳಲ್ಲಿ ಸಹಕರಿಸುತ್ತಾರೆ.*

*ಈ ಸೇವಾ ಕಾರ್ಯದಿಂದ ಬಡ ಕುಟುಂಬಗಳು ಮದುವೆಗಾಗಿ ಸಾಲ ಮಾಡುವ ಪರಿಸ್ಥಿತಿ ತಪ್ಪುತ್ತಿದೆ. ಸೌರಭ್ ಕುಮಾರ್ ಮತ್ತು ಅವರ ತಂಡದ ಕಾರ್ಯವು ಆರ್ಥಿಕ ಸಂಕಷ್ಟದಲ್ಲಿರುವ ಕುಟುಂಬಗಳಿಗೆ ನೆರವಾಗುವುದರ ಜತೆಗೆ, ವರದಕ್ಷಿಣೆಯ ಒತ್ತಡವನ್ನು ಕಡಿಮೆ ಮಾಡುವ ಪ್ರಯತ್ನವಾಗಿಯೂ ಗಮನ ಸೆಳೆಯುತ್ತಿದೆ.*

# ‘ವಿಬಿಜಿ ರಾಮ್ ಜಿಯಡಿ ರಾಜ್ಯ ವಸತಿ ಯೋಜನೆಗೂ ಅವಕಾಶ’



● ವಿಕ್ರಮ ವಾಹಿನಿ । ಬೆಂಗಳೂರು

ಗ್ರಾಮೀಣ ಉದ್ಯೋಗ ಖಾತ್ರಿ ಮನ್ರೇಗಾದ ಬದಲಾದ ರೂಪ ವಿಬಿಜಿ ರಾಮ್ ಜಿಯಲ್ಲಿ ರಾಜ್ಯದ ವಸತಿ ಯೋಜನೆಗಳನ್ನು ಕೈಗೆತ್ತಿಗೊಳ್ಳಲು ಕೇಂದ್ರ ಸರ್ಕಾರ ಅವಕಾಶ ಕಲ್ಪಿಸಿದ್ದು, ರಾಜ್ಯದ ಶಿಫಾರಸಿಗೆ ಮನ್ನಣೆ ನೀಡಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಬಿ ಖಂಡ್ರೆ ತಿಳಿಸಿದ್ದಾರೆ.

ವಿಕಾಸಸೌಧದ ತಮ್ಮ ಕಚೇರಿಯಲ್ಲಿಂದು ಉನ್ನತಾಧಿಕಾರಿಗಳೊಂದಿಗೆ ನಡೆದ ಸಭೆಯಲ್ಲಿ ಮಾತನಾಡಿದ ಅವರು, ಗ್ರಾಮೀಣ ಭಾಗದಲ್ಲಿ ಆರ್ಥಿಕವಾಗಿ ಹಿಂದುಳಿದ ಇತಹ ಹಿಂದುಳಿದ ವರ್ಗದ ಬಡವರಿಗೆ ಸಮರ್ಪಿತವಾದ ಬಸವ ವಸತಿ ಯೋಜನೆ, ಅಲೆಮಾರಿ ಮತ್ತು ಅರೆ ಅಲೆಮಾರಿ ಕುಟುಂಬಗಳಿಗೆ ಮನೆ ನಿರ್ಮಿಸಲು ನೆರವಾಗುವ ದೇವರಾಜ ಅರಸು ವಸತಿ ಯೋಜನೆ ಮತ್ತು ಪರಿಶಿಷ್ಟ ಜಾತಿ ಮತ್ತು ವರ್ಗದ ಗ್ರಾಮೀಣ ಜನರಿಗೆ ವಸತಿ ಕಲ್ಪಿಸುವ ಡಾ. ಅಂಬೇಡ್ಕರ್ ನಿವಾಸ ಯೋಜನೆಯಡಿ ಮನೆ ನಿರ್ಮಿಸಲೂ ಈಗ ವಿಬಿಜಿ ರಾಮ್ ಜಿಯಲ್ಲಿ ಅವಕಾಶವಿದೆ ಎಂದರು.

ಕೇಂದ್ರ ಸರ್ಕಾರ ವಿಬಿಜಿ ರಾಮ್ ಜಿಯಡಿ ಅನುಮೋದಿಸಿದ್ದ 318 ಕಾಮಗಾರಿಗಳ ಸಂಖ್ಯೆಯನ್ನು ಈಗ 375ಕ್ಕೆ ಹೆಚ್ಚಳ ಮಾಡಿದೆ. ರಾಜ್ಯ ಸರ್ಕಾರ ಶಿಫಾರಸು ಮಾಡಿದ್ದ ರಾಜ್ಯ ವಸತಿ ಯೋಜನೆ, ಸಮುದಾಯ ಕುಶಲಕರ್ಮಿಗಳ ಕೇಂದ್ರ ನಿರ್ಮಾಣ, ವೈಯಕ್ತಿಕ ಕಾಮಗಾರಿಯಡಿ ರೇಷ್ಮೆ ಹುಳು ಸಾಕಾಣಿಕೆ ಮನೆ (ಘಟಕ) ಹಾಗೂ ಒಂದೇ ಭೂಮಿಯಲ್ಲಿ ಮರಗಳು, ಹುಲ್ಲುಗಾವಲು (ಮೇವು) ಮತ್ತು ಜಾನುವಾರು ಸಾಕಣೆಯನ್ನು ಸಂಯೋಜಿಸಿ ಬೆಳೆಸುವ ಸಿಲ್ವಿ ಪ್ಯಾಷ್ಚರ್ ಸಹ ಸೇರಿದೆ ಎಂದರು.

ಈ ಬಗ್ಗೆ ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಿಗೆ ಮತ್ತು ಗ್ರಾಮೀಣ ಜನರಿಗೆ ಸ್ಪಷ್ಟ ಮಾಹಿತಿ ನೀಡಿ ಗ್ರಾಮೀಣ ಉದ್ಯೋಗ ಖಾತ್ರಿಯಡಿ ಹೆಚ್ಚಿನ ಮಾನವ ದಿನ ಸೃಜಿಸುವಂತೆ ಮತ್ತು ಯಾವುದೇ ಗ್ರಾಮೀಣ ಬಡ ಜನರು ಉದ್ಯೋಗ ಸಿಗದೆ ಗುಳೆ ಅಥವಾ ವಲಸೆ ಹೋಗದಂತೆ ತಡೆಯಲು ಕ್ರಮ ವಹಿಸುವಂತೆ ತಿಳಿಸಿದರು.


**ಗ್ರಾಮಠಾಣಾ ಆಸ್ತಿಗೆ ಇ-ಸ್ವತ್ತು, ನಿಯಮ ತಿದ್ದುಪಡಿ:** ಅಕ್ಟೋಬರ್ 2ರಿಂದ ಅರ್ಜಿ ಸ್ವೀಕಾರ ಪ್ರಕ್ರಿಯೆ ಆರಂಭಿಸಿ, ನವೆಂಬರ್ ತಿಂಗಳಲ್ಲಿ 10 ಲಕ್ಷ ಗ್ರಾಮಠಾಣಾ ಆಸ್ತಿಗಳಿಗೆ ನಿಯಮಾನುಸಾರ ಇ-ಸ್ವತ್ತು ನೀಡಲು ಮತ್ತು ಅಭಿಯಾನ ನಡೆಸಲು ಅನುವಾಗುವಂತೆ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ತೆರಿಗೆ ಮತ್ತು ಶುಲ್ಕಗಳು) ನಿಯಮ 2025ಕ್ಕೆ ಅಗತ್ಯ ಮತ್ತು ಸೂಕ್ತ ತಿದ್ದುಪಡಿ ಮಾಡುವಂತೆಯೂ ಈಶ್ವರ ಖಂಡ್ರೆ ಸೂಚನೆ ನೀಡಿದರು. ಸಭೆಯಲ್ಲಿ ಕಾರ್ಯದರ್ಶಿ ಡಿ.ರಂದೀಪ್, ಆಯುಕ್ತರಾದ ಡಾ. ಅರುಂಧತಿ ಚಂದ್ರಶೇಖರ್, ಇ-ಸ್ವತ್ತು ನಿರ್ದೇಶಕರಾದ ಗಿರೀಶ್ ಬದೋಲೆ ಮತ್ತಿತರ ಅಧಿಕಾರಿಗಳು ಭಾಗಿಯಾಗಿದ್ದರು.

# ‘ಯುಪಿಐ ಬೇಡ, ನಗದು ಕೊಡಿ’: ಅಂಗಡಿಗಳ ಮುಂದೆ ಬೋರ್ಡ್

**ರೂ 2,000ಕ್ಕಿಂತ ಹೆಚ್ಚಿನ ಕೆಲವು ಯುಪಿಐ ವಹಿವಾಟುಗಳಿಗೆ ಶೇ.0.4 ಎಂಡಿಆರ್ ಜಾರಿಗೆ ವಿರೋಧ ವ್ಯಕ್ತಪಡಿಸಿರುವ ಗಾಜಿಯಾಬಾದ್ ವ್ಯಾಪಾರಿಗಳು, ಗ್ರಾಹಕರು ನಗದು ಪಾವತಿಸುವಂತೆ ಅಂಗಡಿಗಳ ಮುಂದೆ ಫಲಕ ಅಳವಡಿಸಿದ್ದಾರೆ.**

● ವಿಕ್ರಮ ವಾಹಿನಿ । ಗಾಜಿಯಾಬಾದ್

ರೂ 2,000ಕ್ಕಿಂತ ಹೆಚ್ಚಿನ ಮೊತ್ತದ ಕೆಲವು ಯುಪಿಐ ವಹಿವಾಟುಗಳಿಗೆ ಅಕ್ಟೋಬರ್ 15ರಿಂದ ಶೇ.0.4ರಷ್ಟು ಮರ್ಚೆಂಟ್ ಡಿಸ್ಕೌಂಟ್ ದರ (ಎಂಡಿಆರ್) ಜಾರಿಯಾಗುವ ಪ್ರಸ್ತಾವನೆಗೆ ವಿರೋಧ ವ್ಯಕ್ತಪಡಿಸಿರುವ ಉತ್ತರ ಪ್ರದೇಶದ ಗಾಜಿಯಾಬಾದ್‌ನ ಕೆಲವು ವ್ಯಾಪಾರಿಗಳು, ತಮ್ಮ ಅಂಗಡಿಗಳ ಮುಂದೆ ‘ಯುಪಿಐ ಪಾವತಿ ಸ್ವೀಕರಿಸುವುದಿಲ್ಲ, ನಗದು ನೀಡಿ’ ಎಂಬ ಸೂಚನಾ ಫಲಕಗಳನ್ನು ಹಾಕಿದ್ದಾರೆ.




ಪ್ರಸ್ತಾವಿತ ನಿಯಮದಡಿ ಅನ್ವಯವಾಗುವ ಹೆಚ್ಚಿನ ಮೊತ್ತದ ವಹಿವಾಟುಗಳ ಎಂಡಿಆರ್ ಶುಲ್ಕವನ್ನು ವ್ಯಾಪಾರಿಗಳೇ ಭರಿಸಬೇಕಾಗುತ್ತದೆ. ಇದರಿಂದ ಹೆಚ್ಚುವರಿ ಆರ್ಥಿಕ ಹೊರೆ ಉಂಟಾಗಲಿದೆ ಎಂದು ವ್ಯಾಪಾರಿಗಳು ಆಕ್ಷೇಪಿಸಿದ್ದಾರೆ.

**ಗ್ರಾಹಕರಿಗೆ ಶುಲ್ಕದ ಹೊರೆ ಇಲ್ಲ:** ಯುಪಿಐ ವಹಿವಾಟಿನ ಶುಲ್ಕವನ್ನು ವ್ಯಾಪಾರಿಗಳು ಗ್ರಾಹಕರಿಗೆ ವರ್ಗಾಯಿಸಿ ಪ್ರತ್ಯೇಕವಾಗಿ ‘ಯುಪಿಐ ಶುಲ್ಕ’ ವಿಧಿಸದಂತೆ ನೋಡಿಕೊಳ್ಳಲು ಕೇಂದ್ರ ಸರ್ಕಾರ ಕ್ರಮ ಕೈಗೊಳ್ಳುತ್ತಿದೆ.

**ಶೇ.4ರಷ್ಟು ವಹಿವಾಟಿಗೆ ಮಾತ್ರ:** ಹೊಸ ಎಂಡಿಆರ್ ವ್ಯವಸ್ಥೆಯ ವ್ಯಾಪ್ತಿಗೆ ಒಟ್ಟು ಯುಪಿಐ ವಹಿವಾಟುಗಳ ಸುಮಾರು ಶೇ.4ರಷ್ಟು ಮಾತ್ರ ಬರಲಿದೆ ಎಂದು ಸರ್ಕಾರದ ಅಂದಾಜು ತಿಳಿಸಿದೆ. ದೇಶದಲ್ಲಿ ಬಹುತೇಕ ಯುಪಿಐ ವಹಿವಾಟುಗಳು ಕಡಿಮೆ ಮೊತ್ತದಲ್ಲಿರುವುದರಿಂದ ಸಾಮಾನ್ಯ ಸಣ್ಣ ಮೊತ್ತದ ಪಾವತಿಗಳಿಗೆ ಇದರ ಪರಿಣಾಮ ಇರುವುದಿಲ್ಲ.

**ರುಪೇ ಡೆಬಿಟ್ ಕಾರ್ಡ್‌ಗೆ ಶುಲ್ಕವಿಲ್ಲ:** ರುಪೇ ಡೆಬಿಟ್ ಕಾರ್ಡ್ ಮೂಲಕ ಮಾಡುವ ಪಾವತಿಗಳಿಗೆ ವಹಿವಾಟಿನ ಮೊತ್ತದ ಮಿತಿಯಿಲ್ಲದೆ ಶುಲ್ಕ ವಿಧಿಸಲಾಗುವುದಿಲ್ಲ. ಹೀಗಾಗಿ ಹೆಚ್ಚಿನ ಮೊತ್ತದ ಖರೀದಿಯಲ್ಲಿ ಯುಪಿಐಗೆ ಪರ್ಯಾಯವಾಗಿ ರುಪೇ ಡೆಬಿಟ್ ಕಾರ್ಡ್ ಬಳಸಬಹುದಾಗಿದೆ.

## ಎಂಡಿಆರ್ ಜಾರಿ: ಪೆಟ್ರೋಲ್ ಪಂಪ್‌ಗಳಲ್ಲಿ ಯುಪಿಐಗೆ ಬ್ರೇಕ್

● ವಿಕ್ರಮ ವಾಹಿನಿ । ನವದೆಹಲಿ

ರೂ 2,000ಕ್ಕಿಂತ ಹೆಚ್ಚಿನ ಕೆಲವು ಯುಪಿಐ ವಹಿವಾಟುಗಳಿಗೆ ಪ್ರಸ್ತಾವಿತ ಶೇ.0.4ರಷ್ಟು ಮರ್ಚೆಂಟ್ ಡಿಸ್ಕೌಂಟ್ ದರ (ಎಂಡಿಆರ್) ಜಾರಿಗೆ ಪೆಟ್ರೋಲ್ ಪಂಪ್ ಡೀಲರ್‌ಗಳು ವಿರೋಧ ವ್ಯಕ್ತಪಡಿಸಿದ್ದಾರೆ. ಇಂಧನ ಮಾರಾಟಕ್ಕೆ ಎಂಡಿಆರ್‌ನಿಂದ ವಿನಾಯಿತಿ ನೀಡದಿದ್ದರೆ, ಅಕ್ಟೋಬರ್ 15ರಿಂದ ರೂ 2,000ಕ್ಕಿಂತ ಹೆಚ್ಚಿನ ಯುಪಿಐ ಪಾವತಿಗಳನ್ನು ಸ್ವೀಕರಿಸುವುದನ್ನು ಸ್ಥಗಿತಗೊಳಿಸುವುದಾಗಿ ಮಧ್ಯಪ್ರದೇಶ ಸೇರಿದಂತೆ ಕೆಲವು ರಾಜ್ಯಗಳ ಡೀಲರ್‌ಗಳು ಎಚ್ಚರಿಕೆ ನೀಡಿದ್ದಾರೆ.

ಹೆಚ್ಚುತ್ತಿರುವ ಕಾರ್ಯಾಚರಣೆ ವೆಚ್ಚ ಹಾಗೂ ಬದಲಾಗದ ಇಂಧನ ಮಾರಾಟ ಕಮಿಷನ್‌ನ ಹಿನ್ನೆಲೆಯಲ್ಲಿ ಹೆಚ್ಚುವರಿ ವಹಿವಾಟು ಶುಲ್ಕ ಭರಿಸುವುದು ಕಷ್ಟ ಎಂದು ಡೀಲರ್‌ಗಳು ಹೇಳಿದ್ದಾರೆ. ಪೆಟ್ರೋಲ್ ಪಂಪ್‌ಗಳಲ್ಲಿನ ಯುಪಿಐ ವಹಿವಾಟುಗಳಿಗೆ ಎಂಡಿಆರ್‌ನಿಂದ ಸಂಪೂರ್ಣ ವಿನಾಯಿತಿ ನೀಡಬೇಕು ಎಂದು ಆಲ್ ಇಂಡಿಯಾ ಪೆಟ್ರೋಲಿಯಂ ಡೀಲರ್ಸ್ ಅಸೋಸಿಯೇಷನ್ ಒತ್ತಾಯಿಸಿದೆ.

ರೂ 2,000ಕ್ಕಿಂತ ಹೆಚ್ಚಿನ ಯುಪಿಐ ಪಾವತಿ ಸ್ವೀಕಾರ ಸ್ಥಗಿತಗೊಂಡರೆ, ಹೆಚ್ಚಿನ ಮೊತ್ತದ ಇಂಧನ ಖರೀದಿಗೆ ಗ್ರಾಹಕರು ನಗದು ಅಥವಾ ಇತರ ಪಾವತಿ ವಿಧಾನಗಳನ್ನು ಬಳಸಬೇಕಾಗಬಹುದು. ಈ ಕ್ರಮ ಗ್ರಾಹಕರ ಮೇಲೆ ಪರಿಣಾಮ ಬೀರುವ ಸಾಧ್ಯತೆಯ ಬಗ್ಗೆ ಕಾನ್ಫೆಡರೇಶನ್ ಆಫ್ ಆಲ್ ಇಂಡಿಯಾ ಟ್ರೇಡರ್ಸ್ (ಅಂಖಖಿ) ಕೂಡ ಕಳವಳ ವ್ಯಕ್ತಪಡಿಸಿದೆ.

Vikrama Vahini Kannada Daily, #204, Forest Layout, Jnanabharathi, Bangalore-560095
PRGI NO: KARKAN/2018/78481
vikramavahini@gmail.com
93535 91145
Printed by B.N. Murali Prasad, Published by Swarna Latha B.N., and Printed at Swarna Graphics, Forest Layout, Jnanabharathi, Bangalore -560059 and Published at Bangalore, Editor: B.N. Murali Prasad., Volume:9, Issue : 168,